ಸಂಪುಟ: 04 ಸಂಚಿಕೆ: 304 ಪುಟಗಳು: 08 ಗುರುವಾರ 16 ಜನವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com


ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ನಗುವಿಗಿಂತ ದೊಡ್ಡ ಆಭರಣವಿಲ್ಲ, ಆತ್ಮವಿಶ್ವಾಸಕ್ಕಿಂತ ದೊಡ್ಡ ಆಯುಧವಿಲ್ಲ. ನಗು ಹಾಗೂ ಆತ್ಮವಿಶ್ವಾಸದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ, ನಿಮ್ಮ ಗೆಲುವು ನಿಶ್ಚಿತ...

## ಕೆಪಿಸಿಸಿ ಸಾರಥ್ಯಕ್ಕೆ ಸಮರ್ಥ ಯಾರು...?



- ಡಿಕೆಶಿ ವಿರುದ್ಧ ಸಿಡಿದೆದ್ದ ಸಾಹುಕಾರ್ ಕೆಲಸ ಮಾಡೋರು ಅಧ್ಯಕ್ಷರಾಗಬೇಕು' ಒಳಜಗಳಕ್ಕೆ ಮದ್ದರೆಯಲು ಬಂದಿದ್ದ ಸುರ್ಜೇವಾಲ
- ವಾರ್ನಿಂಗ್‌ಗೂ ಜಗ್ಗದ ಕೈ ನಾಯಕರು, ತಮ್ಮ ಮಾತಿನ ವರಸೆ ಮುಂದುವರಿಸಿದ್ದಾರೆ. ಪಕ್ಷದ ಕಚೇರಿ ನಿರ್ಮಾಣ ಮಾಡಿರುವ ವಿಚಾರಕ್ಕೆ ಗಲಾಟೆ

• ಉದಯವಾಹಿನಿ, ಬೆಂಗಳೂರು







ಶಾಸಕಾಂಗ ಸಭೆ ಬಳಿಕವೂ ಕಾಂಗ್ರೆಸ್ ನಾಯಕರ ಅಸಮಾಧಾನಗಳು ಕಡಿಮೆಯಾಗಿಲ್ಲ ಎಂಬುದಕ್ಕೆ ಇದೀಗ ಸತೀಶ್ ಜಾರಕಿಹೊಳಿ ಹೇಳಿಕೆ ಸಾಕ್ಷಿಯಾಗಿದೆ. ಡಿಕೆ ಶಿವಕುಮಾರ್ ವಿರುದ್ಧ ಪರೋಕ್ಷವಾಗಿ ಅಸಮಾಧಾನ ಹೊರಹಾಕಿರುವ ಅವರು, ಕೆಪಿಸಿಸಿಗೆ ಜನಪ್ರಿಯ ನಾಯಕನನ್ನು ಅಧ್ಯಕ್ಷರನ್ನಾಗಿ ಮಾಡಿ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲಾ ಅವರಿಗೆ ತಿಳಿಸಿದ್ದೇನೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನನ್ನನ್ನು ನಾನು ಕೆಪಿಸಿಸಿ ಅಧ್ಯಕ್ಷರಾಗಿ ಎಂದು ಮಾಡಿ ಎಂದು ಹೇಳಿಲ್ಲ. ನಾವುಗಳೆಲ್ಲ ಸಚಿವರಾದ ಮೇಲೆ ಪಕ್ಷಕ್ಕೆ ಸಮಯ ಕೊಡುವುದು ಕಡಿಮೆಯಾಗಿದೆ. 2023ರಲ್ಲಿ ಇದ್ದ ವೇಗ ಈಗ ಇಲ್ಲ, ಹಾಗಾಗಿ ಹೊಸ ಅಧ್ಯಕ್ಷರ ನೇಮಕ ಆಗಬೇಕು ಎಂಬುದು ನಮ್ಮ ಬೇಡಿಕೆಯಾಗಿದೆ. ಕೆಪಿಸಿಸಿ ಅಧ್ಯಕ್ಷರಾಗಿರುವ ಡಿ.ಕೆ. ಶಿವಕುಮಾರ್ ಅವರು ಮುಂದುವರೆಯಬೇಕಾ, ಬೇರೆಯವರು ಅಧ್ಯಕ್ಷರಾಗಬೇಕಾ... ಎಂಬುದು ಪಕ್ಷದ ಹೈಕಮಾಂಡ್ ಮಟ್ಟದಲ್ಲಿ ಚರ್ಚೆಯಾಗಬೇಕು. ಹೈಕಮಾಂಡ್ ಸಹ ಈ ಬಗ್ಗೆ ತೀರ್ಮಾನ ಬೇಗ ಮಾಡಬೇಕು ಎಂದು ಒತ್ತಾಯಿಸಿದರು.

1 **ಕೆಪಿಸಿಸಿಗೆ ಹೊಸ ಅಧ್ಯಕ್ಷರನ್ನು ನೇಮಕ ಮಾಡಿ, ಸುರ್ಜೇವಾಲರನ್ನು ಭೇಟಿ ಮಾಡಿ ಬೇಡಿಕೆಯನ್ನು ಸಚಿವ ಸತೀಶ್ ಜಾರಕಿಹೊಳಿ ಇಟ್ಟಿದ್ದಾರೆ**

2 **ಸದ್ಯ ಡಿಕೆ ಶಿವಕುಮಾರ್ ಅವರು ಕೆಪಿಸಿಸಿಯ ಅಧ್ಯಕ್ಷರಾಗಿದ್ದು, ಇವರನ್ನೇ ಮುಂದುವರಿಸುವುದಾದರೆ ಅದನ್ನು ಹೈಕಮಾಂಡ್ ಸ್ಪಷ್ಟಪಡಿಸಿ ಅಂತ ಹೇಳಿದ್ದೇನೆ ಎಂದಿದ್ದಾರೆ**

3 **ನಮಗೆ ಪೂರ್ಣಪ್ರಮಾಣದ ಅಧ್ಯಕ್ಷರು ಬೇಕು. ಮತ ಸೆಳೆಯುವವರನ್ನು ಹಾಗೂ ವರ್ಚಸ್ಸು ಇರುವವರನ್ನು ಅಧ್ಯಕ್ಷರನ್ನಾಗಿ ಮಾಡಿ ಅಂತ ಹೇಳಿದ ಸತೀಶ್**

**ಹೈಕಮಾಂಡ್ ಜೊತೆ ಚರ್ಚಿಸಲಿ:** ಕೆಪಿಸಿಸಿಗೆ ಪೂರ್ಣ ಪ್ರಮಾಣದ ಅಧ್ಯಕ್ಷರು ಬೇಕು, ಹೊಸ ಅಧ್ಯಕ್ಷರನ್ನು ಆದಷ್ಟು ಬೇಗ ನೇಮಕ ಮಾಡಿ ಎಂದು ಸುರ್ಜೇವಾಲಾ ಅವರಲ್ಲಿ ಮನವಿ ಮಾಡಲಾಗಿದೆ. ಪಕ್ಷದ ನೂತನ ರಾಜ್ಯಾಧ್ಯಕ್ಷರನ್ನು ನೇಮಕ ಸಂಬಂಧ ಹೈಕಮಾಂಡ್ ಶಾಸಕರ ಅಭಿಪ್ರಾಯವನ್ನೂ ಪಡೆಯಲಿ, ಶಾಸಕರ ಬೆಂಬಲ ಇರುವವರು ಅಧ್ಯಕ್ಷರಾಗಲಿ. ನಮಗೆ ಪೂರ್ಣಪ್ರಮಾಣದ ಅಧ್ಯಕ್ಷರು ಬೇಕಿದೆ. ಎಲ್ಲಾ ಹಿರಿಯ ನಾಯಕರ ಅಭಿಪ್ರಾಯವೂ ಇದೇ ಆಗಿದೆ. ಎಲ್ಲಾ ಶಾಸಕರ ಅಭಿಪ್ರಾಯವನ್ನು ಆಲಿಸಿ ಹೈಕಮಾಂಡ್ ಶಾಸಕರ ಒತ್ತಾಸೆಯಂತೆ ಹೊಸ ಅಧ್ಯಕ್ಷರನ್ನು ನೇಮಕ ಮಾಡುವುದು ಒಳ್ಳೆಯದು ಎಂದು ಹೇಳಿದರು.

ಲೋಕಸಭಾ ಚುನಾವಣೆಯ ನಂತರ ಪಕ್ಷದ ಅಧ್ಯಕ್ಷರನ್ನು ಬದಲಾವಣೆ ಮಾಡುತ್ತೇವೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರೇ ಬರೆದ ನೋಟ್ ಇದೆ. ಲೋಕಸಭಾ ಚುನಾವಣೆ ಮುಗಿದು ಆರು ತಿಂಗಳಾಯಿತು. ಅದನ್ನು ಜಾರಿಗೆ ತರಬೇಕಲ್ಲವೇ ಎಂದು ಕೇಳಿದರು. ಕರ್ನಾಟಕ ಭವನ ಹೊಸ ಕಟ್ಟಡ ಉದ್ಘಾಟನೆಗಾಗಿ ಜನವರಿ ಕೊನೆಯಲ್ಲಿ ದೆಹಲಿಗೆ ಹೋಗುತ್ತೇನೆ. ಆಗ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಚರ್ಚಿಸಲಾಗುವುದು ಎಂದರು. ಈ ವಿಚಾರದಲ್ಲಿ ಡಿಕೆಶಿ ಪಟ್ಟಿನ ಕುರಿತು ಉತ್ತರಿಸಿದ ಅವರು, ನಮಗೆ ಫುಲ್ ಟೈಮ್ ಕೆಲಸ ಮಾಡಬೇಕು ಅಷ್ಟೆ. ಅವರ ನಾಯಕತ್ವ ಬೇಕು ಅಥವಾ ಬೇಡ ಅಂತ ಹೈಕಮಾಂಡ್ ತೀರ್ಮಾನ ಮಾಡಬೇಕು. ಒಬ್ಬರಿಂದಲೇ ಪಕ್ಷ ಆಗಲ್ಲ. ಎಲ್ಲಾರೂ ಇದ್ದರೆ ಪಕ್ಷ ಇರುವುದು ಎಂದು ಪರೋಕ್ಷವಾಗಿ ಡಿಕೆಶಿಗೆ ಟಾಂಗ್ ಕೊಟ್ಟರು. ಜಾತಿ ಗಣತಿ ವಿಚಾರ ಸಂಬಂಧ ಕೇಳಿದ ಪ್ರಶ್ನೆಗೆ, ನೋಡಬೇಕು. ಸಂಪುಟ ನಿರ್ಧಾರ ಏನು ಅಂತ ನೋಡಬೇಕಾಗುತ್ತದೆ. ಇದರ ಆಳ ವಡಿಕೆಗೆ ಸಮಯಬೇಕು. ಇಂತಹ ಅನೇಕ ವರದಿ ಇವೆ. ಇವುಗಳನ್ನು ನಾವು ಒಪ್ಪಿಲ್ಲ ಅಥವಾ ತಿರಸ್ಕಾರ ಮಾಡಿದ್ದೇವೆ ಅಂತಿಲ್ಲ, ಎಲ್ಲಾ ಸಮುದಾಯ ಒತ್ತಾಯ ಇದೆ. ಸಮುದಾಯ ಅಂತ ಬಂದಾಗ ನೋಡಬೇಕು. ಸಮುದಾಯ ಬಿಟ್ಟು ನಾವಿಲ್ಲ ಎಂದು ಹೇಳಿದರು.

### ಎಲ್ಲರೂ ಇದ್ದಾಗಲೇ ಪಕ್ಷ, ಒಬ್ಬರಿಂದಲ್ಲ



ಇನ್ನು ಡಿನ್ನರ್ ಮೀಟಿಂಗ್ ಕುರಿತು ಮಾತನಾಡಿ, ನಾನು ಸದಸ್ಯ ಅಷ್ಟೇ, ಸಭೆ ಕರೆದಿದ್ದು ನಾನಲ್ಲ. ಸಭೆ ಕರೆದವರು ಹೇಳಬೇಕು. ಇನ್ನು ಹೈಕಮಾಂಡ್ ಅನುಮತಿ ವಿಚಾರವಾಗಿ ಮಾತನಾಡಿ, ಪರ್ಮಿಷನ್ ತೆಗೆದುಕೊಳ್ಳೋಣ. ಎಲ್ಲರೂ ಇದ್ದಾಗಲೇ ಪಕ್ಷ, ಯಾರೊಬ್ಬರಿಂದಲ್ಲ. ನಾವು, ಎಂಎಲ್‌ಎ ಕಾರ್ಯಕರ್ತರು ಎಲ್ಲರೂ ಇರಬೇಕು ಎಂದರು. ಇತ್ತ ಸಂಕ್ರಾಂತಿಗೆ ಕ್ರಾಂತಿಯಾಗುತ್ತೆ ಎನ್ನುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿ, ಸಂಕ್ರಾಂತಿಗೆ ಕ್ರಾಂತಿಯಲ್ಲ ದಿನವೂ ಕ್ರಾಂತಿಯಾಗುತ್ತೆ. ಗ್ರೂಪ್ ಮೀಟಿಂಗ್ ಎಲ್ಲರೂ ಮಾಡುತ್ತಾರಲ್ಲ ಎಂದು ಹೇಳಿದರು.




**ಅಧ್ಯಕ್ಷ ಸ್ಥಾನ ಫಸ್ಟ್.. ಪವರ್ ಶೇರ್ ನೆಕ್ಸ್ಟ**

**ಸದ್ಯ ಸಿಎಂ ಸ್ಥಾನಕ್ಕಿಂತಲೂ ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಫೈಟ್ ಜೋರಾಗಿದೆ. ಏಕೆಂದರೆ ಕಾಂಗ್ರೆಸ್‌ನಲ್ಲಿ ಕೆಪಿಸಿಸಿ ಅಧ್ಯಕ್ಷ ಸ್ಥಾನ ಅಲಂಕರಿಸಿದವರೇ ಮುಂದಿನ ಸಿಎಂ ಎಂಬುದು ಪಕ್ಷದ ನಿಯಮ. ಹೀಗಾಗಿ ಪೂರ್ಣಾವಧಿ ಕೆಪಿಸಿಸಿ ಅಧ್ಯಕ್ಷರ ಆಯ್ಕೆಗೆ ಪಟ್ಟು ಹಿಡಿದಿರುವ ಸತೀಶ್ ಜಾರಕಿಹೊಳಿ, ಶಾಸಕರ ಅಭಿಪ್ರಾಯ ಸಂಗ್ರಹಿಸಲು ಒತ್ತಾಯಿಸಿರುವುದಾಗಿ ತಿಳಿದುಬಂದಿದೆ. ಇದಕ್ಕೆ ಪ್ರತಿಕ್ರಿಯಿಸಿದ ಸಿಎಂ, ಈ ಬಗ್ಗೆ ಸತೀಶ್‌ರನ್ನೇ ಕೇಳಿ, ಕೆಪಿಸಿಸಿ ಅಧ್ಯಕ್ಷರ ಬಗ್ಗೆ ಹೈಕಮಾಂಡ್ ತೀರ್ಮಾನಿಸಲಿದೆ ಅಂತ ಹೇಳಿ ಜಾರಿಕೊಂಡಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಪಟ್ಟಕ್ಕಾಗಿ ಫೈಟ್ ನಡುವೆ ಡಿಸಿಎಂ ಡಿಕೆ ಶಿವಕುಮಾರ್, ದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಖರ್ಗೆ ಭೇಟಿಯಾಗಿ ಸುದೀರ್ಘ ಮಾತುಕತೆ ನಡೆಸಿದ್ದಾರೆ. ಈ ನಡುವೆ ಮೈಸೂರಿನಲ್ಲಿ ಸಚಿವ ಹೆಚ್.ಸಿ ಮಹದೇವಪ್ಪ ಸಿಎಂ ಪರ ಬ್ಯಾಟ್ ಬೀಸಿದ್ದಾರೆ.**

**'ಹೈಕಮಾಂಡ್ ಕ್ಲಿಯರ್ ಆಗಿ ಹೇಳಬೇಕು'**
**ಅಧ್ಯಕ್ಷರಾಗಿ ಎಂದು ಕೆಲವು ಶಾಸಕರ ಒತ್ತಾಯ ಇರೋದು ಸಹಜ. ಡಿಕೆಶಿವಕುಮಾರ್ ನಾನೇ ಅಧ್ಯಕ್ಷನಾಗಬೇಕೆಂದು ಬೇಡಿಕೆ ಇಟ್ಟರೆ, ಹೈಕಮಾಂಡ್ ಕ್ಲಿಯರ್ ಆಗಿ ಏನು ಅನ್ನೋದನ್ನ ಹೇಳಬೇಕು. ಇವರೇ ಇರುತ್ತಾರೋ ಅಥವ ಬೇರೆಯವರು ಆಗಬೇಕು ಎನ್ನೋದನ್ನ ಹೇಳಬೇಕು. ಎಂಪಿ ಎಲೆಕ್ಷನ್ ನಂತರರ ಬದಲಾವಣೆ ಮಾಡೋದಾಗಿ ಹೈಕಮಾಂಡ್ ನೋಟ್ ಇದೆ, ಚುನಾವಣೆ ಮುಗಿದು 6-7ತಿಂಗಳಾಯ್ತು ಹೀಗಾಗಿ ಯಾವುದರು ಒಂದು ತೀರ್ಮಾನ ಮಾಡಬೇಕು ಎಂದು ಸತೀಶ್ ಜಾರಕಿಹೊಳಿ ಹೇಳಿದರು.**

## ಗೋಲ್ ಪೋಸ್ಟ್ ಬದಲಿಸುವ ಉದ್ದೇಶದಿಂದ ಜಾತಿಗಣತಿಯ ಚರ್ಚೆ

• ಉದಯವಾಹಿನಿ, ಬೆಂಗಳೂರು

ಭ್ರಷ್ಟಾಚಾರದ ಅನೇಕ ಹಗರಣಗಳು, ಮುಖ್ಯಮಂತ್ರಿ ಬದಲಾವಣೆ ವಿಚಾರ. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ವಿಷಯ- ಹೀಗೆ ಹಲವು ರೀತಿಯ ಸಮಸ್ಯೆಗಳನ್ನು ಕಾಂಗ್ರೆಸ್ ಸರಕಾರ ಎದುರಿಸುತ್ತಿದೆ. ಗೋಲ್‌ಪೋಸ್ಟ್ ಬದಲಿಸುವ ಉದ್ದೇಶದಿಂದ ಜಾತಿಗಣತಿಯ ಚರ್ಚೆಯನ್ನು ಮುಂದಕ್ಕೆ ತಂದಿದ್ದಾರೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆರೋಪಿಸಿದ್ದಾರೆ. ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಈಗಾಗಲೇ ಅವರ ಪಕ್ಷದಲ್ಲೇ ಅದಕ್ಕೆ ವಿರೋಧ ಇದೆ.

ಒಂದು ಕಡೆ ಡಿ.ಕೆ.ಶಿವಕುಮಾರ್, ಇನ್ನೊಂದು ಕಡೆ ಶಾಮನೂರು ಶಿವಶಂಕರಪ್ಪ ಅವರೂ ವಿರೋಧ ಮಾಡುತ್ತಿದ್ದಾರೆ ಎಂದು ವಿವರಿಸಿದರು. ಕಾಂತರಾಜ್ ವರದಿಯಲ್ಲಿ ಏನಿದೆಯೋ ಅದನ್ನೇ ಜಯಪ್ರಕಾಶ್ ಹೆಗ್ಡೆಯವರೂ ಕೊಟ್ಟಿದ್ದಾರೆ. ಅಂದಮೇಲೆ ಕಳೆದ ಹಲವು ವರ್ಷಗಳಲ್ಲಿ ಏನು ಬದಲಾವಣೆ ಆಗಿದೆ? ವಾಸ್ತವವಾಗಿ ಪರಿಶಿಷ್ಟ ಜಾತಿಗಳ ಜನಸಂಖ್ಯೆ ಈಗ ಸುಮಾರು 1.50 ಕೋಟಿ ಇದ್ದರೂ ಅದನ್ನು ಒಂದು ಕೋಟಿ ಎಂಟು ಲಕ್ಷ ಎಂದೇ ತೋರಿಸಿದ್ದಾರೆ ಎಂದು ಟೀಕಿಸಿದರು.

## ಮತ್ತೋರ್ವ ಸಚಿವರ ವಿರುದ್ಧ ರಾಜ್ಯಪಾಲರಿಗೆ ದೂರು ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ಭ್ರಷ್ಟಾಚಾರ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಲಾಗಿದೆ. ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ, ರಾಜ್ಯಪಾಲ ಥಾವರ್ ಚಂದ್ ಗೆಹೋಟ್ ಅವರಿಗೆ ಸಚಿವ ಕೃಷ್ಣ ಬೈರೇಗೌಡ ವಿರುದ್ಧ ದೂರು ನೀಡಿದ್ದು, ತನಿಖೆ ನಡೆಸಿ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ದೊಡ್ಡಬಳ್ಳಾಪುರ ತಾಲ್ಲೂಕಿನ ಹುಲಿಕುಂಟೆ ಗ್ರಾಮದಲ್ಲಿನ ಅಕ್ರಮ ಜಮೀನು ವ್ಯವಹಾರದಲ್ಲಿ ಸಚಿವ ಕೃಷ್ಣ ಬೈರೇಗೌಡ ಪಾತ್ರವಿದೆ. ಕಂದಾಯ ಇಲಾಖೆಯಲ್ಲಿನ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ಸರ್ಕಾರ ವಿಫಲವಾಗಿದೆ. ಭ್ರಷ್ಟ ಅಧಿಕಾರಿಗಳ ವಿರುದ್ಧವೂ ತನಿಖೆ ನಡೆಸಿ ಸೂಕ್ತ ಕ್ರಮಕ್ಕೆಗೊಳ್ಳುವಂತೆ ಒತ್ತಾಯಿಸಿದ್ದಾರೆ.

## ಹೈಕಮಾಂಡ್ ಕಚೇರಿಯಲ್ಲಿ ಕೈ ನಾಯಕರಿಗೆ ಕವಡೆ ಕಾಸಿನ ಕಿಮ್ಮತ್ತಿಲ್ಲ

• ಉದಯವಾಹಿನಿ, ಬೆಂಗಳೂರು

ದೆಹಲಿ ಕಾಂಗ್ರೆಸ್ ಕಚೇರಿಯಲ್ಲಿ ರಾಜ್ಯದ ನಾಯಕರಿಗೆ ಪ್ರವೇಶಕ್ಕೆ ಅವಕಾಶ ನೀಡದ ಘಟನೆ ನಡೆದಿದೆ. ಎಐಸಿಸಿ ಕಚೇರಿ ಉದ್ಘಾಟನಾ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಸಚಿವ ಬೈರತಿ ಸುರೇಶ್, ಡಾ. ಸುಧಾಕರ್ ಸೇರಿದಂತೆ ಹಲವು ನಾಯಕರು ತೆರಳಿದ್ದರು. ಆದರೆ ಪಾಸ್ ಇಲ್ಲದ ಕಾರಣಕ್ಕೆ ಅವರನ್ನು ಕಚೇರಿ ಒಳಗೆ ಬಿಟ್ಟಿಲ್ಲ ಎನ್ನಲಾಗಿದೆ. ಇದೇ ವಿಚಾರವಾಗಿ ರಾಜ್ಯ ಬಿಜೆಪಿ ರಾಜ್ಯ ಕಾಂಗ್ರೆಸ್ ನಾಯಕರ ಕಾಲೆಳೆದಿದೆ. ಕರ್ನಾಟಕದ ಕಾಂಗ್ರೆಸ್ ನಾಯಕರಿಗೆ ದೆಹಲಿಯ ಕಾಂಗ್ರೆಸ್ ಕಚೇರಿಯಲ್ಲಿ ಕವಡೆ ಕಾಸಿನ ಕಿಮ್ಮತ್ತಿಲ್ಲ ಎಂದು ವ್ಯಂಗವಾಡಿದೆ. ಸ್ವಾಭಿಮಾನವನ್ನು ಅಡವಿಟ್ಟು ದೆಹಲಿಯ ನಾಯಕರ ಮುಂದೆ ನಡು ಬಗ್ಗಿಸಿ ನಿಂತುಕೊಂಡು ನಮ್ಮನ್ನು ದಯವಿಟ್ಟು ಒಳಗೆ ಬಿಡಿ ಎಂದು ಗೋಗರೆಯುತ್ತಿರುವುದನ್ನು ನೋಡಿದರೆ, ಕಾಂಗ್ರೆಸ್ ಹೈಕಮಾಂಡ್ ಕರ್ನಾಟಕದ ನಾಯಕರಿಗೆ ಯಾವ ರೀತಿ ಗೌರವ ನೀಡುತ್ತಿದೆ ಎಂಬುದು ತಿಳಿಯುತ್ತದೆ. ಕರ್ನಾಟಕದ ಕಾಂಗ್ರೆಸ್ ನಾಯಕರುಗಳು ಹೈಕಮಾಂಡ್ ಮುಂದೆ ಎದೆ ಉಬ್ಬಿಸಿ ಮಾತನಾಡುವ ಕಾಲ ಬರುವುದು ಅಸಾಧ್ಯ ಎಂಬುದು ಖಚಿತ- ನಿಶ್ಚಿತ-ಖಂಡಿತ ಎಂದು ಟೀಕಿಸಿದೆ.

## ಬಿಎಸ್‌ವೈ ರಾಜ್ಯ ಪ್ರವಾಸಕ್ಕೆ ರಮೇಶ್ ಜಾರಕಿಹೊಳಿ ಟೀಕೆ

• ಉದಯವಾಹಿನಿ, ಕೊಪ್ಪಳ

ರಾಜ್ಯಾಧ್ಯಕ್ಷ ಸ್ಥಾನದಿಂದ ಬಿ.ವೈ.ವಿಜಯೇಂದ್ರರನ್ನು ಬದಲಾವಣೆ ಮಾಡಬೇಕು ಎಂದು ಒತ್ತಾಯಿಸಿರುವ ಮಾಜಿ ಸಚಿವ, ಶಾಸಕ ರಮೇಶ್ ಜಾರಕಿಹೊಳಿ, ಬಿ.ಎಸ್.ಯಡಿಯುರಪ್ಪ ರಾಜ್ಯ ಪ್ರವಾಸದ ಬಗ್ಗೆ ವ್ಯಂಗ್ಯವಾಡಿದ್ದರು. ಮಗನ ಸ್ಥಾನ ಭದ್ರಪಡಿಸಲೋ ಅಥವಾ ಪಕ್ಷ ಭದ್ರಪಡಿಸಲೋ ಎಂಬುದನ್ನು ಯಡಿಯೂರಪ್ಪ ಸ್ಪಷ್ಟಪಡಿಸಲಿ ಎಂದು ಹೇಳಿದ್ದರು. ಇದೇ ವಿಚಾರವಾಗಿ ಪ್ರತಿಕ್ರಿಯಿಸಿರುವ ವಿಜಯೇಂದ್ರ, ರಮೇಶ್ ಜಾರಕಿಹೊಳಿಗೆ ಎಚ್ಚರಿಕೆ ನೀಡಿದ್ದಾರೆ. ಕೊಪ್ಪಳದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿ.ವೈ.ವಿಜಯೇಂದ್ರ, ರಮೇಶ್ ಜಾರಕಿಹೊಳಿ ಮಾತನಾಡುವಾಗ ಎಚ್ಚರಿಕೆಯಿಂದ ಮಾತನಾಡಲಿ, ಯಡಿಯೂರಪ್ಪ ಬಗ್ಗೆ ಮಾತನಾಡುವಾಗ ನಾಲಿಗೆ ಬಿಗಿ ಹಿಡಿದು ಮಾತನಾಡಲಿ ಎಂದು ವಾರ್ನಿಂಗ್ ಕೊಟ್ಟಿದ್ದಾರೆ. ಯಡಿಯೂರಪ್ಪ ಓರ್ವ ಮುತ್ಸದ್ಧಿ ರಾಜಕಾರಣಿ. ಕಾಲಿಗೆ ಚಕ್ರಕಟ್ಟಿಕೊಂಡು ರಾಜ್ಯಾದ್ಯಂತ ಪ್ರವಾಸ ಮಾಡಿ ಪಕ್ಷವನ್ನು ಕಟ್ಟಿದವರು. ಇನ್ನು ನನ್ನ ಬಗ್ಗೆ ರಾಮೇಶ್ ಜಾರಕಿಹೊಳಿ ಮಾತನಾಡುವಾಗ ನಿಗಾ ಇರಲಿ. ನಾನು ಒಂದು ಪಕ್ಷದ ಅಧ್ಯಕ್ಷನಾಗಿದ್ದೇನೆ ಎಂದು ಗುಡುಗಿದರು.

## ಆಹ್ವಾನ ಕೈತಪ್ಪಿದ್ದಕ್ಕೆ ಗೃಹಸಚಿವ ಅಸಮಾಧಾನ

• ಉದಯವಾಹಿನಿ, ಬೆಂಗಳೂರು



ದೆಹಲಿಯಲ್ಲಿ ನಡೆದ ಅಖಿಲ ಭಾರತ ಕಾಂಗ್ರೆಸ್ ಕಚೇರಿ ಇಂದಿರಾಗಾಂಧಿ ಭವನ ಉದ್ಘಾಟನೆಯಲ್ಲಿ ಭಾಗವಹಿಸಲು ಸಾಧ್ಯವಾಗದೇ ಗೃಹಸಚಿವ ಡಾ.ಜಿ.ಪರಮೇಶ್ವರ್ ಬೆಂಗಳೂರಿನಲ್ಲೇ ಉಳಿದಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ್ದ ಪರಮೇಶ್ವರ್, ಭವನ ಉದ್ಘಾಟನಾ ಕಾರ್ಯಕ್ರಮದಲ್ಲಿ ತಾವು ಭಾಗವಹಿಸುವುದಾಗಿ ತಿಳಿಸಿದ್ದರು. ಆದರೆ ಹೈಕಮಾಂಡ್ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರಿಗೆ ಮಾತ್ರ ಅಧಿಕೃತ ಆಹ್ವಾನ ನೀಡಿದೆ.

ಉಳಿದಂತೆ ಕೆಲ ಸಚಿವರು ತಮಷ್ಯಕ್ಕೆ ತಾವು ದೆಹಲಿಗೆ ಭೇಟಿ ನೀಡಿದ್ದಾರೆ. 8 ವರ್ಷಗಳ ಕಾಲ ಕೆಪಿಸಿಸಿ ಅಧ್ಯಕ್ಷರಾಗಿ ಕೆಲಸ ಮಾಡಿ ಒಂದು ಬಾರಿ ಸರ್ಕಾರವನ್ನು ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ತಂದ ತಮಗೆ ಹೈಕಮಾಂಡ್ ಕಾರ್ಯಕ್ರಮಕ್ಕೆ ಆಹ್ವಾನ ನೀಡಲಿದೆ ಎಂದು ಪರಮೇಶ್ವರ್ ನಿರೀಕ್ಷಿಸಿದರು. ಅದು ಹುಸಿಯಾಗಿದೆ. ಇತ್ತೀಚೆಗೆ ಪ್ರತ್ಯೇಕ ಡಿನ್ನರ್ ಮೀಟಿಂಗ್ ಆಯೋಜಿಸಿ ವಿವಾದದ ಕೇಂದ್ರಬಿಂದುವಾಗಿದ್ದ ಪರಮೇಶ್ವರ್ ಅವರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸದೇ ಇರುವುದು ನಾನಾ ರೀತಿಯ ಲೆಕ್ಕಾಚಾರಗಳಿಗೆ ಕಾರಣವಾಗಿದೆ.

## ಮುಡಾ ಪ್ರಕರಣ: ಅರ್ಜಿ ವಿಚಾರಣೆ ಜ.27ಕ್ಕೆ


• ಉದಯವಾಹಿನಿ, ಬೆಂಗಳೂರು



ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮೂಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆಯನ್ನು ಸಿಬಿಐಗೆ ವಹಿಸಬೇಕು ಎಂದು ಕೋರಿ ದೂರುದಾರ ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಅರ್ಜಿ ವಿಚಾರಣೆ ಹೈಕೋರ್ಟ್‌ನಲ್ಲಿ ನಡೆದಿದ್ದು ವಿಚಾರಣೆ ಮುಂದುದಲಾಗಿದೆ. ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಅರ್ಜಿ ವಿಚಾರಣೆ ಕೈಗೆತ್ತಿಕೊಂಡ ಹೈಕೋರ್ಟ್, ದೂರುದಾರ ಸ್ನೇಹಮಯಿ ಕೃಷ್ಣ ಪರ ವಕೀಲ ಮಣಿಂದರ್ ಸಿಂಗ್ ವಾದ ಹಾಗೂ ಸಿಎಂ ಸಿದ್ದರಾಮಯ್ಯ ಪರ ವಕೀಲ ರವಿವರ್ಮ ಕುಮಾರ್ ಅವರ ಪ್ರತಿವಾದ ಆಲಿಸಿತು. ಈ ವೇಳೆ ರಿಟ್ ಅರ್ಜಿಗೆ ಆಕ್ಷೇಪಣೆ ಸಲ್ಲಿಸಲು ಸಿಎಂ ಪರವಕೀಲರು ಸಮಯ ಕೇಳಿದ್ದು ಮನವಿ ಪರಿಗಣಿಸಿದ ಹೈಕೋರ್ಟ್, ಅರ್ಜಿ ವಿಚಾರಣೆಯನ್ನು ಜನವರಿ 27ಕ್ಕೆ ಮುಂದೂಡಿದೆ.

## ಪೋಕ್ಸೋ ಕೇಸ್: ಖುದ್ದು ಹಾಜರಾತಿಗೆ ನೀಡಿದ್ದ ವಿನಾಯಿತಿ ವಿಸ್ತರಿಸಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು



ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿರುದ್ಧದ . ಪೋಕ್ಸೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ನಲ್ಲಿ ಅರ್ಜಿ ವಿಚಾರಣೆ ನಡೆಯುತ್ತಿದ್ದು, ನ್ಯಾಯಾಲಯ ಮಹತ್ವದ ಆದೇಶ ನೀಡಿದೆ. ಪ್ರಕರಣ ಸಂಬಂಧ ಬಿ.ಎಸ್.ಯಡಿಯೂರಪ್ಪ ಅವರಿಗೆ ವಿಚಾರಣೆಗೆ ಖುದ್ದು ಹಾಜರಾಗುವಂತೆ ನೀಡಿದ್ದ ವಿನಾಯಿತಿಯನ್ನು ಹೈಕೋರ್ಟ್ ವಿಸ್ತರಿಸಿದೆ. ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿರುದ್ಧ ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದಲ್ಲಿ ಪೋಕ್ಸೋ ಕೇಸ್ ದಾಖಲಾಗಿತ್ತು. ತನ್ನ ವಿರುದ್ಧದ ಪ್ರಕರಣ ರದ್ದು ಕೋರಿ ಯಡಿಯೂರಪ್ಪ ಹೈಕೋರ್ಟ್ ಮೆಟ್ಟಿಲೇರಿದ್ದರು.

## ಸಂಕಟ ಬಂದಾಗ ವೆಂಕಟರಮಣ ಎಂಬಂತೆ ಸಿಎಂ; ಕುರ್ಚಿಗೆ ಕಂಟಕ ಬಂದಾಗಲೆಲ್ಲಾ ಜಾತಿ ಜನಗಣತಿ ನೆನಪು

• ಉದಯವಾಹಿನಿ, ಬೆಂಗಳೂರು



ಸಂಕಟ ಬಂದಾಗ ವೆಂಕಟರಮಣ ಎಂಬಂತೆ ಸಿಎಂ ಸಿದ್ದರಾಮಯ್ಯ ಕುರ್ಚಿಗೆ ಕಂಟಕ ಬಂದಾಗಲೆಲ್ಲಾ ಜಾತಿ ಜನಗಣತಿ ನೆನಪಾಗುತ್ತದೆ ಎಂದು ಸಿಎಂ ಸಿದ್ದರಾಮಯ್ಯಗೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ವ್ಯಂಗ್ಯವಾಡಿದ್ದಾರೆ. ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದು, ಕೆಲವು ಪ್ರಶ್ನೆಗಳನ್ನೂ ಸಿಎಂಗೆ ಕೇಳಿದ್ದಾರೆ. ಜಾತಿ ಜನಗಣತಿ ಬಗ್ಗೆ ಬಿಜೆಪಿ ಪಕ್ಷಕ್ಕಾಗಲಿ ಅಥವಾ ವೈಯಕ್ತಿಕವಾಗಿ ನನಗಾಗಲಿ ಯಾವ ತಕರಾರು ಇಲ್ಲ ಅಥವಾ ವಿರೋಧವೂ ಇಲ್ಲ. ಬಿಜೆಪಿಯ ಮೂಲಸಿದ್ಧಾಂತವಾದ 'ಅಂತ್ಯೋದಯ'ದ ಪರಿಕಾಲ್ಪನೆಯಲ್ಲೇ ತಳ ಸಮುದಾಯಗಳನ್ನ ರಾಜಕೀಯವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಆರ್ಥಿಕವಾಗಿ ಸಮಾಜದ ಮುಖ್ಯವಾಹಿನಿಗೆ ತರಬೇಕು ಎಂಬ ಸಾಮಾಜಿಕ ನ್ಯಾಯದ ಬದ್ಧತೆ ಅಡಗಿದೆ. ಅದನ್ನ ಸಾಕಾರಗೊಳಿಸುವ ಯಾವ ಪ್ರಾಮಾಣಿಕ ಪ್ರಯತ್ನಕ್ಕಾದರೂ ನಮ್ಮ ಬೆಂಬಲ ಸದಾ ಇದ್ದೇ ಇರುತ್ತದೆ ಎಂದಿದ್ದಾರೆ.


ಆದರೆ, ರಾಜಕೀಯ ಚದುರಂಗದಾಟದಲ್ಲಿ ಜಾತಿ ಜನಗಣತಿಯನ್ನು ದಾಳವಾಗಿ ಬಳಸಿಕೊಳ್ಳುವುದಕ್ಕೆ ನಮ್ಮ ವಿರೋಧವಿದೆ. ರಾಜಕೀಯ ಹಾವು-ಏಣಿ ಆಟದಲ್ಲಿ ಕೆಳಗೆ ಬಿದ್ದಾಗ ಮೇಲೇಳಲು, ಕುರ್ಚಿ ಉಳಿಸಿಕೊಳ್ಳಲು ಜಾತಿಗಣತಿಯನ್ನ ಏಣಿಯಾಗಿ ಬಳಸಿಕೊಳ್ಳುವುದಕ್ಕೆ ನಮ್ಮ ತಕರಾರಿದೆ. ಹೀಗಾಗಿ, ನಾಳಿನ ಸಚಿವ ಸಂಪುಟ ಸಭೆಯಲ್ಲಿ ಜಾತಿ ಜನಗಣತಿ ವರದಿ ಚರ್ಚೆಯಾಗುತ್ತಿದೆ ಎಂಬ ಸುದ್ದಿಗಳು ಹರಿದಾಡುತ್ತಿರುವ ಹಿನ್ನಲೆಯಲ್ಲಿ ಸಿಎಂಗೆ 'ಆತ್ಮಸಾಕ್ಷಿ'ಗೆ ಕೆಲವು ಪ್ರಶ್ನೆಗಳು ಇವೆ ಎಂದು ಅಶೋಕ ಬರೆದುಕೊಂಡಿದ್ದಾರೆ.

## 60% ಕಮಿಷನ್ ಬಗ್ಗೆ ಮುಖ್ಯಮಂತ್ರಿಗಳು ದಾಖಲೆ ಕೊಡಿ: ಎಚ್‌ಡಿಕೆ

- ಪ್ರಿಯಾಂಕ್ ಖರ್ಗೆ ಉಡಾಫೆ ಮಾತುಗಳನ್ನಾಡುವುದು ಬಿಟ್ಟು ಮೊದಲು ಕಿಯೋನಿಕ್ಸ್ ವಂಡರ್ಸ್ ಗಳ ಬಾಕಿ ಬಿಲ್ ಗಳನ್ನು ಚುಕ್ತಾ ಮಾಡಲಿ

• ಉದಯವಾಹಿನಿ, ಬೆಂಗಳೂರು

**ಹೋರಾಟ ಮಾಡುವ ಧೈರ್ಯ ಮಾಡಿ**



ಬಾಕಿ ಬಿಲ್ ಪಾವತಿ ಮಾಡದಿದ್ದರೆ ಆತ್ಮಹತ್ಯೆ ಅಪರಾಧ ಮಾಡಿಕೊಳ್ಳುವುದಾಗಿ ವೆಂಡರ್ಸ್ ಪತ್ರ ಬರೆದಿರುವ ಪ್ರಕರಣ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ಉಡಾಫೆ ಮಾತನ್ನಾಡುತ್ತಿದ್ದಾರೆ ಎಂದು ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ತರಾಟೆಗೆ ತೆಗೆದುಕೊಂಡರು. ಬೆಂಗಳೂರಿನಲ್ಲಿ ಈ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗೆ ತೀಕ್ಷ್ಣವಾಗಿ ಉತ್ತರಿಸಿದ ಸಚಿವರು, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಉಡಾಫೆ ಮಾತುಗಳನ್ನಾಡುವುದು ಬಿಟ್ಟು ಮೊದಲು ಕಿಯೋನಿಕ್ಸ್ ವಂಡರ್ಸ್ ಗಳ ಬಾಕಿ ಬಿಲ್ ಗಳನ್ನು ಚುಕ್ತಾ ಮಾಡಲಿ ಎಂದರು.

ಈ ಸರಕಾರ ಗುತ್ತಿಗೆದಾರರು ಹಾಗೂ ವೆಂಡರ್ಸ್ ಗಳ ಬಿಲ್ ಪಾವತಿಸಲು ಮೀನಮೇಷ ಎಣಿಸುತ್ತಿದೆ. ಸರಕಾರದ ಆಂತರ್ಯ ಏನೆಂಬುದು ಎಲ್ಲಾರೂ ಬಲ್ಲ ವಿಷಯ. ತಮಗೆ ಬಿಡುಗಡೆ ಆಗಬೇಕಿರುವ ಬಿಲ್ ಗಳನ್ನು ಪಾವತಿಸಿ ಎಂದು ಗುತ್ತಿಗೆದಾರರು ಧೈರ್ಯದಿಂದ ಕೇಳಬೇಕು. ಅವರೇನೂ ಭಿಕ್ಷುಕರಲ್ಲ, ಸಣ್ಣ ಪ್ರಮಾಣದ ಗುತ್ತಿಗೆದಾರರು ತಮ್ಮ ಮನೆ ಹೆಣ್ಣು ಮಕ್ಕಳ ಒಡವೆಗಳನ್ನು ಒತ್ತೆ ಇಟ್ಟು ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದಾರೆ. ಮಾಡಿರುವ ಸಾಲಗಳನ್ನು ತೀರಿಸಲಾಗದೆ ಬೀದಿಗೆ ಬಂದಿದ್ದಾರೆ ಎಂದು ಕೇಂದ್ರ ಸಚಿವರು ಆಕ್ರೋಶ ವ್ಯಕ್ತಪಡಿಸಿದರು.

ಎಲ್ಲರ ಮೇಲೆ ಬೇಕಾಬಿಟ್ಟಿ ಮಾತನಾಡುವ ಖರ್ಗೆ ಅವರು ಸಬೂಬು ಹೇಳುವುದು ಬಿಡಬೇಕು. ಈವರೆಗೆ ಗುತ್ತಿಗೆದಾರರ ಎಲ್ ಓಸಿಗಳನ್ನು ಬಿಡುಗಡೆ ಮಾಡುವುದಕ್ಕೆ ಈ ಸರಕಾರಕ್ಕೆ ಸಾಧ್ಯವಾಗಿಲ್ಲ. ಸಚಿವರು ಹಿಂದಿನ ಸರಕಾರದ ಮೇಲೆ ಗೂಬೆ ಕೂರಿಸುವ ಬದಲು ಗುತ್ತಿಗೆದಾರರ ಬಾಕಿ ಮೊತ್ತವನ್ನು ಬಿಡುಗಡೆ ಮಾಡಬೇಕೆಂದು ಕೇಂದ್ರ ಸಚಿವರು ಒತ್ತಾಯ ಮಾಡಿದರು. ನಾನು ಎರಡು ಬಾರಿ ಮುಖ್ಯಮಂತ್ರಿ ಆಗಿದ್ದೆ. ಯಾವತ್ತೂ ಯಾರಿಗೂ ತೊಂದರೆ ಕೊಡುವ ಕೆಲಸ ಮಾಡಿಲ್ಲ. ಗುತ್ತಿಗೆದಾರರಿಗೆ ಒಂದು ಮನವಿ ಮಾಡುತ್ತೇನೆ. ಮೊದಲು ಒಗ್ಗಟ್ಟಾಗಿ, ನಿಮ್ಮ ನಿಮ್ಮಲ್ಲಿಯೇ ಗುಂಪುಗಳನ್ನು ಮಾಡಿಕೊಂಡರೆ ಅದನ್ನು ಸರಕಾರ ದುರುಪಯೋಗ ಮಾಡಿಕೊಳ್ಳುತ್ತದೆ. ನಿಮ್ಮಲ್ಲಿ ಒಡಕು ಬರಬೇಕು ಎಂದು ಸರಕಾರ ಬಯಸುತ್ತದೆ. ಇದನ್ನು ನೀವು ಅರ್ಥ ಮಾಡಿಕೊಳ್ಳಿ. ಒಂದು ವರ್ಷ ಯಾರು ಕೆಲಸ ಮಾಡಬೇಡಿ. ಅಕ್ಕಪಕ್ಕದ ರಾಜ್ಯಗಳವರನ್ನು ಕರೆದುಕೊಂಡು ಬಂದು ಕೆಲಸ ಮಾಡಿಸಲಿ. ಬರಲಿ, ಯಾರು ಬಂದು ಕೆಲಸ ಮಾಡುತ್ತಾರೋ ನೋಡೋಣ. ಹೇಗೂ ಇವರು ಕೆಲಸವನ್ನು ಕೊಡುತ್ತಿಲ್ಲ. ನೀವು ಕೇಳುತ್ತಿರುವುದು ಹಿಂದಿನ ದುಡ್ಡು ಕೇಳುತ್ತಿದ್ದೀರಿ ಎಂದು ಕುಮಾರಸ್ವಾಮಿ ಅವರು ಕಿವಿಮಾತು ಹೇಳಿದರು.

**60% ಕಮಿಷನ್ ಬಗ್ಗೆ ಮುಖ್ಯಮಂತ್ರಿಗಳು ದಾಖಲೆ ಕೊಡಿ**
**60% ಕಮಿಷನ್ ಬಗ್ಗೆ ಮುಖ್ಯಮಂತ್ರಿಗಳು ದಾಖಲೆ ಕೊಡಿ ಎಂದು ನನ್ನನ್ನು ಹೇಳಿದ್ದರು. ಗುತ್ತಿಗೆದಾರರ ಸಂಘದ ಹಂಗಾಮಿ ಅಧ್ಯಕ್ಷರು ಎಷ್ಟೆಷ್ಟು ಪರ್ಸೆಂಟೇಜ್ ಎಂದು ಅವರೇ ಪಟ್ಟಿ ಮಾಡಿ ಹೇಳಿದ್ದಾರೆ. ಇದಕ್ಕಿಂತ ದಾಖಲೆ ಬೇಕಾ ಮುಖ್ಯಮಂತ್ರಿಗಳಿಗೆ? ಎಂದು ಕುಮಾರಸ್ವಾಮಿ ಅವರು ಸಿಎಂಗೆ ಟಾಂಗ್ ಕೊಟ್ಟರು. ಸಚಿವ ಪ್ರಿಯಾಂಕ ಖರ್ಗೆ ಮತ್ತು ಕಿಯೋನಿಕ್ಸ್ ಅಧ್ಯಕ್ಷರಿಗೆ ಹೇಳುವುದು ತಪ್ಪು ಮಾಡಿದವರ ಮೇಲೆ ಕ್ರಮ ತೆಗೆದುಕೊಳ್ಳಿ. ತಪ್ಪು ಮಾಡದವರಿಗೆ ಶಿಕ್ಷೆ ಯಾಕೆ? ಅವರ ಹಣ ಪಾವತಿ ಮಾಡಿ. ಅಂತಹವರ ಬದು ಏನಾಗಬೇಕು ಎಂಬ ಬಗ್ಗೆ ಒಮ್ಮೆ ಯೋಚನೆ ಮಾಡಿ. ಜನಪ್ರತಿನಿಧಿಗಳು ಸುಳ್ಳು ವ್ಯವಹಾರ ಮಾಡಿದ್ದರೆ ಅವರ ಮೇಲೂ ಕ್ರಮ ತೆಗೆದುಕೊಳ್ಳಿ. ತನಿಖೆ ನಡೆಸಿ ವಾಸ್ತಾವಂಶ ಹೊರಕ್ಕೆ ತರಲು ಎಷ್ಟು ತಿಂಗಳು ಬೇಕು ನಿಮಗೆ? ಈ ರಾಜ್ಯವನ್ನು ಹಾಳು ಮಾಡುತ್ತಿದ್ದೀರಿ ಎಂದು ಕೇಂದ್ರ ಸಚಿವರು ವಾಗ್ದಾಳಿ ನಡೆಸಿದರು.**

ಯಾರೇ ಆಗಲಿ ಧೃತಿಗೆಡುವ ಅಗತ್ಯವಿಲ್ಲ. ಸರ್ಕಾರ ನಿಮ್ಮ ಹಣ ನಿಮಗೆ ಕೊಡಲೇಬೇಕು. ಆತ್ಮಹತ್ಯೆಗೆ ಶರಣಾಗಬೇಡಿ. ದಯಾಮರಣಕ್ಕೆ ಯಾಕೆ ಅರ್ಜಿ ಹಾಕಿಕೊಳ್ಳುತ್ತೀರಾ? ನೀವು ತಪ್ಪು ಮಾಡಿಲ್ಲ ತಪ್ಪು ಯಾರೇ ಆಗಲಿ ಧೃತಿಗೆಡುವ ಅಗತ್ಯವಿಲ್ಲ. ಸರ್ಕಾರ ನಿಮ್ಮ ಹಣ ನಿಮಗೆ ಕೊಡಲೇಬೇಕು. ಆತ್ಮಹತ್ಯೆಗೆ ಶರಣಾಗಬೇಡಿ.

ದಯಾಮರಣ ಯಾಕೆ ಮಾಡಿರುವುದು ಸರ್ಕಾರ. ಸರ್ಕಾರದ ವಿರುದ್ಧ ಹೋರಾಟ ಮಾಡುವ ಧೈರ್ಯ ಮಾಡಿ, ನೀವು ಭಿಕ್ಷುಕರಲ್ಲ ಎಂದು ಗುತ್ತಿಗೆದಾರರಿಗೆ ಧೈರ್ಯ ಹೇಳಿದರು ಕೇಂದ್ರ ಸಚಿವರು.

ನಿನಗೆ ಸಿಕ್ಕಿರುವ ಕಾಮಗಾರಿಯನ್ನು ಪ್ರಾಮಾಣಿಕವಾಗಿ ಮಾಡಿ. ದಯಾಮರಣಕ್ಕೆ ಯಾಕೆ ಅರ್ಜಿ ಹಾಕುತ್ತೀರಿ. ಅಂತಹ ಮನಸ್ಥಿತಿಯಿಂದ ಹೊರಬನ್ನಿ. ಕೆಲಸವನ್ನೇ ಮಾಡದೆ ಬಿಲ್ ತೆಗೆದುಕೊಂಡು ಹಣ ಹೊಡೆದ ಎಷ್ಟೋ ಅಧಿಕಾರಿಗಳು, ದೊಡ್ಡ ದೊಡ್ಡ ಗುತ್ತಿಗೆದಾರರು ಇದ್ದಾರೆ. ಸರಿಯಾದ ಕೆಲಸ ಮಾಡಿದ್ದರೆ ನೀವು ಯಾಕೆ ಹೆದರಬೇಕು ಎಂದು ಸಚಿವರು ಹೇಳಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹8,007 /Gram24ct ₹7,340/Gram22ct | ಬೆಳ್ಳಿ: ₹93.50/Gram

# ಆದಿಯೋಗಿ ಸನ್ನಿಧಿಯಲ್ಲಿ ಮಹಾಶೂಲ ಪ್ರತಿಷ್ಠಾಪನೆ

## ದಿನವಿಡೀ ನಡೆದ ಉತ್ಸವದಲ್ಲಿ ಸ್ಥಳೀಯ ಸಮುದಾಯಗಳು ಹೆಚ್ಚಿನ ಸಂಖ್ಯೆಯಲ್ಲಿ ಉತ್ಸಾಹದಿಂದ ಭಾಗವಹಿಸಿ

• ಉದಯವಾಹಿನಿ, ಚಿಕ್ಕಬಳ್ಳಾಪುರ


ಉದಯವಾಹಿನಿ ಚಿತ್ರ

ಮಕರ ಸಂಕ್ರಾಂತಿಯ ಶುಭ ಸಂದರ್ಭದಲ್ಲಿ ಸದ್ಗುರು ಜಗ್ಗಿ ವಾಸುದೇವ್‌ರವರು ತಾಲ್ಲೂಕಿನ ಆವಲಗುರ್ಕಿಯ ಈಶಾ ಫೌಂಡೇಶನ್‌ನ 112 ಅಡಿ ಎತ್ತರದ ಆದಿಯೋಗಿ ವಿಗ್ರಹದ ಸದ್ಗುರು ಸನ್ನಿಧಿಯಲ್ಲಿ ಮಹಾಶೂಲ ಪ್ರತಿಷ್ಠಾಪಿಸಲಾಯಿತು. ಸಾವಿರಾರು ಭಕ್ತರ ಸಮುಖದಲ್ಲಿ ನೂತನವಾಗಿ ಪ್ರತಿಷ್ಟಾಪಿಸಲಾಗಿರುವ 54 ಅಡಿಗಳ ವಿಶ್ವದ ಏಕಮಾತ್ರ ಮಹಾಶೂಲವು ಸದ್ಗುರು ಸನ್ನಿಧಿಯಲ್ಲಿರುವ 112 ಅಡಿಗಳ ಆದಿಯೋಗಿಯ ಭವ್ಯತೆ ಮತ್ತು ಅನುಗ್ರಹವನ್ನು ಇಮಡಿಗೊಳಿಸಲಿದೆ. ಹೊಸದಾಗಿ ಪ್ರತಿಷ್ಠಾಪನೆಯಾದ ಸ್ಥಳಕ್ಕೆ ಸಾರ್ವಜನಿಕ ದರ್ಶನಕ್ಕೆ ತೆರೆಯುವ ಮುನ್ನ ಪ್ರತಿಷ್ಠಾಪನೆಯಲ್ಲಿ ಭಾಗಿಯಾದವರು ಮಹಾಶೂಲಕ್ಕೆ ಪೂಜೆಯನ್ನು ಅರ್ಪಿಸಿದರು.

ಸಂಗೀತ, ನೃತ್ಯ ಪ್ರದರ್ಶನ

ದಿನವಿಡೀ ನಡೆದ ಉತ್ಸವದಲ್ಲಿ ಸ್ಥಳೀಯ ಸಮುದಾಯಗಳು ಹೆಚ್ಚಿನ ಸಂಖ್ಯೆಯಲ್ಲಿ ಉತ್ಸಾಹದಿಂದ ಭಾಗವಹಿಸಿ, ಸಾಂಸ್ಕೃತಿಕ ಪ್ರದರ್ಶನಗಳು ಮತ್ತು ವರ್ಣರಂಜಿತ ಸಂಕ್ರಾಂತಿ ಜಾತ್ರೆಯನ್ನು ಒಳಗೊಂಡ ಸಾಂಪ್ರದಾಯಿಕ ಉತ್ಸವಗಳು ನಡೆದವು. ಈ ಸಂದರ್ಭದಲ್ಲಿ ಸದ್ಗುರು ಜಗ್ಗಿ ವಾಸುದೇವ್ ಮಾತನಾಡಿ, ಪ್ರತಿಯೊಂದು ಶಿವ ದೇವಾಲಯದ ಹೊರಗೆ ಸಾಂಕೇತಿಕವಾಗಿ ನಂದಿಯನ್ನು ಕಾಣಬಹುದು.

ನಂದಿಯು ಅವಿರತ ಕಾಯುವಿಕೆಯ ಸಂಕೇತವಾಗಿದೆ. ಏಕೆಂದರೆ ಕಾಯುವುದು ಭಾರತೀಯ ಸಂಸ್ಕೃತಿಯಲ್ಲಿ ಶ್ರೇಷ್ಠವಾದುದೆಂದು ಪರಿಗಣಿಸಲಾಗಿದೆ. ಸುಮನೆ ಕುಳಿತು ಕಾಯುವುದು ಹೇಗೆ ಎಂದು ತಿಳಿದಿರುವವರು ಸಹಜವಾಗಿ ಧ್ಯಾನಸ್ಥನಾಗಿರುತ್ತಾರೆ. ಜನರು ಯಾವಾಗಲೂ ಧ್ಯಾನವನ್ನು ಒಂದು ರೀತಿಯ ಚಟುವಟಿಕೆ ಎಂದು ತಪ್ಪಾಗಿ ಅರ್ಥೈಸಿಕೊಂಡಿದ್ದಾರೆ. ಇಲ್ಲ, ಇದು ಒಂದು ಗುಣಧರ್ಮ. ಪ್ರಾರ್ಥನೆ ಎಂದರೆ ನೀವು ದೇವರೊಂದಿಗೆ ಮಾತನಾಡಲು ಪ್ರಯತ್ನಿಸುತ್ತಿದ್ದೀರಿ ಎಂದರ್ಥ.

ನಿಮ್ಮ ಪ್ರತಿಜ್ಞೆಗಳು, ನಿರೀಕ್ಷೆಗಳು ಅಥವಾ ಇನ್ನೇನಾದರೂ ಅವನಲ್ಲಿ ನಿವೇದಿಸಲು ಯತ್ನಿಸುತ್ತಿದ್ದೀರಿ. ಧ್ಯಾನ ಎಂದರೆ ನೀವು ಅಸ್ತಿತ್ವವನ್ನು, ಸೃಷ್ಟಿಯ ಅಂತಿಮ ಸ್ವರೂಪವನ್ನು ಆಲಿಸಲು ಸಿದ್ಧರಿದ್ದೀರಿ ಎಂದರ್ಥ. ನಿಮಲ್ಲಿ ಹೇಳಲು ಏನೂ ಇಲ್ಲ, ನೀವು ಸುಮನೆ ಕೇಳುತ್ತಿರಿ. ಅದು ನಂದಿಯ ಗುಣ ಎಂದು ನಂದಿಯ ಮಹತ್ವವನ್ನು ವಿವರಿಸಿದರು. ಮಹಾಶೂಲ (ಶಿವನ ತ್ರಿಶೂಲ)ದ ಕುರಿತು ಇಡೀ ಸೃಷ್ಟಿಯು ಮೂರು ಅಂಶಗಳ ದ್ಯೋತಕವಾಗಿದೆ– ಸೃಷ್ಟಿ, ಸ್ಥಿತಿ ಮತ್ತು ಲಯ. ಭಾರತೀಯ ಸಂಸ್ಕೃತಿಯಲ್ಲಿ, ನಾವು ಈ ಮೂರು ಶಕ್ತಿಗಳನ್ನು ಬ್ರಹ, ವಿಷ್ಣು ಮತ್ತು ಮಹೇಶ್ವರ ಎನ್ನುತ್ತೇವೆ. ಬ್ರಹವು ಹುಟ್ಟಿನ ಬಗ್ಗೆಯಾದರೆ, ವಿಷ್ಣುವು ಅಸ್ತಿತ್ವದ ನಿರ್ವಹಣೆ ಮತ್ತು ಶಿವ ವಿನಾಶದ ಬಗ್ಗೆ. ಆದಾಗ್ಯೂ, ಮೂಲ ರೂಪದಲ್ಲಿ ಈ ಮೂರು ಕೇವಲ ಒಂದೇ, ಏಕೆಂದರೆ ಸೃಷ್ಟಿ ಮತ್ತು ನಿರ್ವಹಣೆ ಕೇವಲ ವಿನಾಶತೆಯ ಮಡಿಲಲ್ಲೇ ಅಸ್ತಿತ್ವದಲ್ಲಿದೆ.

**ಈ ಬಾರಿ 54 ಅಡಿಗಳ ಮಹಾಶೂಲವನ್ನು ಲೋಕಾರ್ಪಣೆ ಮಾಡಿದ್ದಾರೆ. ಎಲ್ಲಾ ವಯೋಮಾನದವರಲ್ಲಿ ಬಹು ಜನಪ್ರಿಯವಾಗಿರುವ ವರ್ಣರಂಜಿತ ಧ್ವನಿ ಮತ್ತು ಬೆಳಕಿನ ಪ್ರದರ್ಶನವಾದ, ದೈನಂದಿನ ಆದಿಯೋಗಿ ದಿವ್ಯದರ್ಶನದ ಜೊತೆಗೆ ಸನ್ನಿಧಿಯಲ್ಲಿ ಸಂದರ್ಶಕರು ವಿಶೇಷ ಲೇಸರ್ ಪ್ರದರ್ಶನದ ಆನಂದವನ್ನು ಅನುಭವಿಸಿದರು. ದಿವ್ಯ ದರ್ಶನವನ್ನು ಸದ್ಗುರು ಸನ್ನಿಧಿಯಲ್ಲಿ ಪ್ರತಿದಿನ ಸಂಜೆ 7-20 ಕ್ಕೆ ಪ್ರದರ್ಶಿಸಲಾಗುತ್ತದೆ.**

**ಸದ್ಗುರು ಸನ್ನಿಧಿಯನ್ನು ಕಳೆದ ಅ. 2022 ರಲ್ಲಿ ನಾಗ ಪ್ರತಿಷ್ಠಾಪನೆಯೊಂದಿಗೆ ಸಾರ್ವಜನಿಕರಿಗೆ ತೆರೆಯಲಾಯಿತು. 2023ನೇ ಸಾಲಿನ ಮಕರ ಸಂಕ್ರಾಂತಿ ಹಬ್ಬದ ದಿನದಂದು ಬೆಟ್ಟಗುಡ್ಡಗಳ ತಪ್ಪಲಿನ ಹಸಿರಿನ ಪ್ರದೇಶದಲ್ಲಿ ಆಧ್ಯಾತಿಕ ಮತ್ತು ಸಾಂಸ್ಕೃತಿಕ ಪ್ರದರ್ಶನಗಳೊಂದಿಗೆ ಆಕರ್ಷಕ 112 ಅಡಿ ಎತ್ತರದ ಆದಿಯೋಗಿ ಅನಾವರಣದ ಮೂಲಕ ಅಂತಾರಾಷ್ಟ್ರೀಯ ಮಟ್ಟದ ಧಾರ್ಮಿಕ ಮತ್ತು ಯೋಗ ಕೇಂದ್ರವು ಉದ್ಘಾಟನೆಯಾಗಿದ್ದು, 2024ರ ಸಂಕ್ರಾಂತಿಯಂದು 21 ಅಡಿಯ ನಂದಿ ವಿಗ್ರಹ ಪ್ರತಿಷ್ಠಾಪಿಸಲಾಗಿತ್ತು.**

ಅದೇ ಮಹಾಶೂಲದ ಮಹತ್ವ – ಮೇಲ್ನೋಟಕ್ಕೆ ಈ ಮೂರು ಬೇರೆ ಬೇರೆಯಾಗಿ ತೋರಿದರೂ, ನಿಜ ರೂಪದಲ್ಲಿ ಎಲ್ಲವೂ ಒಂದೇ ಎಂಬುದನ್ನು ನಿರಂತರವಾಗಿ ಸೂಚಿಸುತ್ತದೆ ಎಂದರು. ಇದೇ ವೇಳೆ ಇಲ್ಲಿ ನಡೆಸಿಕೊಟ್ಟ ಸಂಗೀತ, ನೃತ್ಯ ಪ್ರದರ್ಶನಗಳು, ಈಶ ಸಂಸ್ಕೃತಿ ವಿದ್ಯಾರ್ಥಿಗಳಿಂದ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮಗಳು ಎಲ್ಲರ ಮನಸೂರೆಗೊಂಡವು ಮತ್ತು ಭಕ್ತರಿಗೆ ಎಳ್ಳು, ಬೆಲ್ಲ, ಕಬ್ಬು ಮತ್ತು ಇತರೆ ಅರ್ಪಣೆಗಳನ್ನು ಮಾಡುವ ಅವಕಾಶ ನೀಡಿದ್ದರು.

# ದಾಖಲೆಗಾಗಿ ಜಯಂತಿ: ಮುಖಂಡರು ಅಸಮಾಧಾನ

• ಉದಯವಾಹಿನಿ, ತುಮಕೂರು


ಉದಯವಾಹಿನಿ ಚಿತ್ರ

ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ

ಜಿಲ್ಲಾ ಆಡಳಿತ ಸಮುದಾಯದ ಮುಖಂಡರ ಸಭೆ ಕರೆದು ಚರ್ಚಿಸಿ, ಮಹನೀಯರ ಜಯಂತಿ ಆಚರಿಸಬೇಕು. ಸರ್ಕಾರದ ದಾಖಲೆಗಾಗಿ ಕಾರ್ಯಕ್ರಮ ಮಾಡಬೇಡಿ ಎಂದು ಭಾರತೀಯ ವಡ್ಡರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಪುರುಷೋತ್ತಮ್ ಅಸಮಾಧಾನ ವ್ಯಕ್ತಪಡಿಸಿದರು.

ನಗರದಲ್ಲಿ ಮಂಗಳವಾರ ಜಿಲ್ಲಾ ಆಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಭೋವಿ ಸಮಾಜ, ಭಾರತೀಯ ವಡ್ಡರ ಸಂಘದ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು. 'ಜಿಲ್ಲೆಯಲ್ಲಿ ಭೋವಿ ಸಮುದಾಯದ ಜನ ಸಾಕಷ್ಟು ಸಂಖ್ಯೆಯಲ್ಲಿದ್ದಾರೆ. ಜಿಲ್ಲಾ ಆಡಳಿತ ಮಹನೀಯರ ಜಯಂತಿ ವೇಳೆ ಕನಿಷ್ಠ 15 ದಿನ ಮುಂಚಿತವಾಗಿ ಪೂರ್ವಭಾವಿ ಸಭೆ ನಡೆಸಬೇಕು. ಅದ್ದೂರಿಯಾಗಿ ಅರ್ಥಪೂರ್ಣ ಕಾರ್ಯಕ್ರಮ ನಡೆಸಲು ಸಹಕಾರ ನೀಡಬೇಕು. ಸಮುದಾಯದ ಜತೆ ಕೈ ಜೋಡಿಸಬೇಕು' ಎಂದು ಆಗ್ರಹಿಸಿದರು. ಸಿದ್ದರಾಮರು ಕೆರೆ, ಕಟ್ಟೆ, ಗೋಶಾಲೆ, ದೇವಾಲಯ ನಿರ್ಮಿಸುವ ಮೂಲಕ ಶರಣ ಪರಂಪರೆಯಲ್ಲಿ ಅಗ್ರಗಣ್ಯರಾಗಿದ್ದರು. ಕಪಿಲ ಸಿದ್ದ ಮಲ್ಲಿಕಾರ್ಜುನ ಎಂಬ ಹೆಸರಿನಲ್ಲಿ ಅವರ ಅನೇಕ ವಚನಗಳು ದೊರೆತಿವೆ. ನಾವು ಅವರ ಮಾರ್ಗದಲ್ಲಿ ನಡೆಯಬೇಕು ಎಂದು ಹೇಳಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎಸ್.ಸಿದ್ದಲಿಂಗಪ್ಪ, ಭೋವಿ ಸಮುದಾಯದ ಮುಖಂಡರಾದ ಕೆ.ಎಂ.ಕಾಶಿನಾಥ್, ಎನ್.ವೈ. ವೆಂಕಟೇಶ್, ಚಿಕ್ಕ ಉಲುಗಯ್ಯ, ವೆಂಕಟೇಶ್, ಗಿರಿಯಪ್ಪ, ಪಿ.ಜಿ.ವೆಂಕಟಸ್ವಾಮಿ ಕೃಷ್ಣಮೂರ್ತಿ, ಟಿ.ವಿ.ವಿಶ್ವನಾಥ್, ಎಚ್.ವಿ.ರಮೇಶ್, ಭೂತೇಶ್, ಇ.ರಮೇಶ್, ಜಿ.ವಿ.ಗಂಗಣ್ಣ,ಟಿ.ಜಿ.ವೆಂಕಟೇಶ್ ಇತರರು ಪಾಲ್ಗೊಂಡಿದ್ದರು.

**ಭೋವಿ ಸಮುದಾಯದ ಮುಖಂಡ ಮಂಜುನಾಥ್, 'ಸಮುದಾಯದಲ್ಲಿ ಒಗ್ಗಟ್ಟು ಕಡಿಮೆಯಾಗಿದೆ. ಜಿಲ್ಲಾ ಆಡಳಿತ ಸರಿಯಾದ ಮಾಹಿತಿ ನೀಡದೆ, ಕಾರ್ಯಕ್ರಮಕ್ಕೆ ಹೆಚ್ಚಿನ ಜನ ಸೇರಿಲ್ಲ. ಮುಂದಿನ ದಿನಗಳಲ್ಲಿ ಇದು ಪುನರಾವರ್ತನೆ ಆಗದಂತೆ ಇಲಾಖೆ ಎಚ್ಚರಿಕೆ ವಹಿಸಬೇಕು. ಎಲ್ಲರನ್ನು ಒಂದೇ ವೇದಿಕೆಗೆ ತಂದು ಜಯಂತಿ ಆಚರಿಸಬೇಕು' ಎಂದರು.**

# ಶ್ರೀ ಸಿದ್ದಪ್ಪಾಜಿ ದೇವಸ್ಥಾನದಲ್ಲಿ ಚಂದ್ರಮಂಡಲೋತ್ಸವ ಆಚರಣೆ

• ಉದಯವಾಹಿನಿ, ಚಾಮರಾಜನಗರ

ತಾಲ್ಲೂಕಿನ ಕಿಲಗೆರೆ ಗ್ರಾಮದ ಶ್ರೀ ಸಿದ್ದಪ್ಪಾಜಿ ದೇವಸ್ಥಾನದಲ್ಲಿ ಸೋಮವಾರ ರಾತ್ರಿ ಚಂದ್ರಮಂಡಲೋತ್ಸವ ಆಚರಣೆ ಮಾಡಲಾಯಿತು. ಕೊಳ್ಳೇಗಾಲ ತಾಲ್ಲೂಕಿನ ಚಿಕ್ಕಲ್ಲೂರು ದೇವಸ್ಥಾನದಲ್ಲಿ ನಡೆಯುವ ಚಂದ್ರ ಮಂಡಲೋತ್ಸವದ ದಿನದಂದೇ ಈ ಗ್ರಾಮದಲ್ಲೂ ಸಹ ಆಚರಣೆ ಮಾಡಲಾಗುತ್ತದೆ.

ಅದರಂತೆಯೇ ಸೋಮವಾರ ರಾತ್ರಿ ದೇವಾಲಯದಲ್ಲಿ ಮಂಟೇಸ್ವಾಮಿ, ಸಿದ್ದಪ್ಪಾಜಿ, ದೊಡ್ಡಮ್ಮತಾಯಿ, ರಾಚಪ್ಪಾಜಿ, ಚೆನ್ನಾಜಮ್ಮ ದೇವರುಗಳಿಗೆ ವಿಶೇಷ ಅಲಂಕಾರ ಮಾಡಿ ಪೂಜೆ ಸಲ್ಲಿಸಲಾಯಿತು.

ದೇವಾಲಯದ ಸುತ್ತ ಮಂಗಳವಾದ್ಯ, ತಮಟೆ ಮೇಳಗಳೊಂದಿಗೆ ಸತ್ತಿ, ಸೂರಿಪಾನಿ, ದಾಳ, ನಂದಿಕಂಬದೊಂದಿಗೆ ಕಂಡಾಯ ಮೆರವಣಿಗೆ ಮಾಡಿ, ದೇವಸ್ಥಾನದ ಮುಂಭಾಗ ಬಿದಿರಿನಿಂದ ಚಂದ್ರಾಕಾರದಲ್ಲಿ ಕಟ್ಟಿದ ಮಂಡಲಕ್ಕೆ, ಹೊಂಬಾಳೆ, ಹೂಗಳಿಂದ ಶೃಂಗರಿಸಲಾಗಿತ್ತು. ಸಿದ್ದಪ್ಪಾಜಿ, ಮಂಟೇಸ್ವಾಮಿ, ದೊಡ್ಡಮ್ಮತಾಯಿ, ರಾಚಪ್ಪಾಜಿ, ಚೆನ್ನಾಜಮ್ಮ ಅವರ ಜಯ ಘೋಷದೊಂದಿಗೆ ಪೂಜೆ ಸಲ್ಲಿಸಿ ಚಂದ್ರಮಂಡಲಕ್ಕೆ ಅಗ್ನಿ ಸ್ಪರ್ಶ ಮಾಡಲಾಯಿತು. ಆ ಚಂದ್ರಮಂಡಲವು ಪಶ್ಚಿಮ ದಿಕ್ಕಿಗೆ ಧಗ ಧಗನೆ ಹತ್ತಿ ಉರಿಯಿತು. ಚಂದ್ರಮಂಡಲ ಯಾವ ದಿಕ್ಕಿನ ಕಡೆಗೆ ಅತಿ ಹೆಚ್ಚಾಗಿ ಉರಿಯುತ್ತದೆಯೋ ಆ ದಿಕ್ಕಿನಲ್ಲಿ ಈ ವರ್ಷ ಚೆನ್ನಾಗಿ ಫಸಲು ಬೆಳೆಯುತ್ತದೆ ಎಂಬ ನಂಬಿಕೆ ಇದೆ. ದೇವಸ್ಥಾನಕ್ಕೆ ಬಂದಿದ್ದಂತಹ ಭಕ್ತಾದಿಗಳು ಚಂದ್ರಮಂಡಲಕ್ಕೆ ತಾವು ತಂದಿದ್ದಂತಹ ದವಸ ಧಾನ್ಯಗಳನ್ನು ಎರಚಿ ಭಕ್ತಿ ಪರಾಭವ ಮೆರೆದರು.ನಂತರ ದೇವಸ್ಥಾನದಲ್ಲಿ ಪ್ರಸಾದ ವಿತರಣೆ ಮಾಡಲಾಯಿತು. ಅಕ್ಕಪಕ್ಕದ ಗ್ರಾಮಗಳಿಂದಲೂ ಸಹ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ದೇವರ ಕೃಪೆಗೆ ಪಾತ್ರರಾದರು.


ಉದಯವಾಹಿನಿ ಚಿತ್ರ

# ಕುಟುಂಬಕ್ಕೊಂದು ನಿವೇಶನ ಸರ್ಕಾರ ಕ್ರಮ

• ಉದಯವಾಹಿನಿ, ಬಾಗೇಪಲ್ಲಿ


ಉದಯವಾಹಿನಿ ಚಿತ್ರ

ಕುಲ ಕಸುಬು ನಂಬಿ ಜೀವನ ನಡೆಸುತ್ತಿರುವ ಭೋವಿ ಜನಾಂಗಕ್ಕೆ ಗುಡ್ಡಗಾಡು ಪ್ರದೇಶದಲ್ಲಿರುವ ಬಂಡೆಯನ್ನು ಮೀಸಲುಡುವ, ಕುಟುಂಬಕ್ಕೊಂದು ನಿವೇಶನ ನೀಡುವ ಯೋಜನೆಗೆ ರಾಜ್ಯಕಾಂಗ್ರೆಸ್ ಸರ್ಕಾರದಲ್ಲಿ ಎಲ್ಲಾಸಿದ್ಧತೆ ನಡೆಯುತ್ತಿದ್ದು, ಶೀಘ್ರವೇ ಮುಖ್ಯಮಂತ್ರಿಗಳಿಂದ ಅನುಮೋದನೆ ಸಿಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದರು. ಬಾಗೇಪಲ್ಲಿ ಪಟ್ಟಣದ ಒಂದನೇ ವಾರ್ಡನ ಶಿರಡಿ ಸಾಯಿಬಾಬಾ ಮಂದಿರದ ಬಳಿ ನೂತನವಾಗಿ ನಿರ್ಮಿಸಿರುವ ಭೋವಿ ಭವನವನ್ನು ಲೋಕಾರ್ಪಣೆ ಹಾಗೂ ಶ್ರೀ ಸಿದ್ದರಾಮೇಶ್ವರರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಭೋವಿ ಜನಾಂಗದ ಮಕ್ಕಳು ಕುಲವೃತ್ತಿಯಿಂದ ಹೊರ ಬಂದು ಸಮಾಜದಲ್ಲಿ ಬೆಳೆಯಬೇಕಾದರೆ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಬೇಕು. ಬಾಗೇಪಲ್ಲಿಯಲ್ಲಿ ಭೋವಿ ಭವನ ನಿರ್ಮಿಸುವುದು ಸರ್ಕಾರದ ಸಾಧನೆ. ಮಕ್ಕಳ ಭವಿಷ್ಯ ರೂಪಿಸುವ ಶೈಕ್ಷಣಿಕ ಪ್ರಗತಿಗೆ ಆಗತ್ಯ ಬುನಾದಿ ಹಾಕಬೇಕಾಗಿದೆ. ಇಂದು ಡಿಜಿಟಲ್ ತಂತ್ರಜ್ಞಾನಕ್ಕೆ ಪೂರಕವಾದ ಪುಸ್ತಕ ಬಂಡಾರವನ್ನು ಪರಿಚಯಿಸಿದ್ದು, ಮಕ್ಕಳು ಅದರ ಪ್ರಯೋಜನ ಪಡೆದು ಉನ್ನತ ಸ್ಥಾನ ಅಲಂಕರಿಸಬೇಕಾಗಿದೆ ಎಂದರು.

**ಭೋವಿ ಜನಾಂಗದ ಎಲ್ಲರೂ ಶೈಕ್ಷಣಿಕವಾಗಿ ಮುಂದುವರೆಯಬೇಕಾಗಿದೆ ಭೋವಿ ಜನಾಂಗದ ಏಕೈಕ ಸಂಸದ ಕೋಲಾರದ ಮಲ್ಲೇಶ್ ಬಾಬು, ಚಿಕ್ಕವಯಸ್ಸಿನಲ್ಲೇ ಐಆರ್‌ಎಸ್ ಅಧಿಕಾರಿಯಾಗಿರುವ ಹಂಸಶ್ರೀ ಅವರನ್ನು ಆದರ್ಶವಾಗಿ ತೆಗೆದುಕೊಳ್ಳಬೇಕು ಎಂದರು.**

ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಮಾತನಾಡಿ, ಕಲ್ಲುನ್ನು ಒಡೆಯುವವರ ಮಕ್ಕಳು ಕಲ್ಲು ಕ್ವಾರಿಯಲ್ಲಿ ಕೂಲಿ ಕಾರ್ಮಿಕರಾಗಿ ಉಳಿಯಬೇಕಾಗಿಲ್ಲ. ಕಟ್ಟಡ ಕಾರ್ಮಿಕರ ಮಕ್ಕಳು ಕಟ್ಟಡ ಕಾರ್ಮಿಕರಾಗಬೇಕಾಗಿಲ್ಲ. ಕಾಯಕ ವರ್ಗ ನಂಬಿ ಜೀವನ ನಡೆಸುತ್ತಿರುವ ಭೋವಿ ಜನಾಂಗದವರು ಮಕ್ಕಳ ಬದುಕಿನ ಪರಿವರ್ತನೆ ಬಗ್ಗೆ ಆಲೋಚನೆ ಮಾಡಿದಾಗ ಮಕ್ಕಳು ಶೈಕ್ಷಣಿಕವಾಗಿ ಬೆಳೆಯಲು ಸಹಾಯಕವಾಗುತ್ತದೆ. ಜನಾಂಗದ ಎಷ್ಟೋ ಸಾಧಕರು ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ.

# ಪ್ರಕೃತಿ ಪೂಜಿಸಿ ಸಂಕ್ರಾಂತಿ ಆಚರಿಸಬೇಕು: ಸುದರ್ಶನ್

• ಉದಯವಾಹಿನಿ, ಕೋಲಾರ

ಪರಿಸರ ಸಮತೋಲನ ಕಾಪಾಡದಿದ್ದರೆ ಬದುಕು ದುಸ್ತರವಾದೀತು ಆದ್ದರಿಂದ ನಿಸರ್ಗವನ್ನು ಪೂಜಿಸುವ ಮೂಲಕ ಸಂಕ್ರಾಂತಿ ಸಡಗರವನ್ನು ಆಚರಿಸಬೇಕು, ಪರಿಸರವನ್ನೇ ದೇವರೆಂದು ಕಾಣುವ ಮೂಲಕ ಉಳಿಸುವ ಸಂಕಲ್ಪ ಮಾಡಬೇಕು ಎಂದು ಮಾಜಿ ಸಭಾಪತಿ ವಿ.ಆರ್.ಸುದರ್ಶನ್ ಕರೆ ನೀಡಿದರು. ನಗರದ ಗಲ್‌ಪೇಟೆಯ ಚಾಮುಂಡೇಶ್ವರಿ ದೇವಾಲಯದಲ್ಲಿ 54ನೇ ವರ್ಷದ ಧನುರ್ಮಾಸದ ನಗರ ಸಂಕೀರ್ತನೆಯ ಸಮಾರೋಪ ಸಮಾರಂಭದಲ್ಲಿ ಒಂದು ತಿಂಗಳಿಂದ ಭಜನೆ,ಸಂಕೀರ್ತನೆಯಲ್ಲಿ ಪಾಲ್ಗೊಂಡ ಮಕ್ಕಳಿಗೆ ಬಹುಮಾನ ವಿತರಿಸಿ ಅವರು ಮಾತನಾಡಿದರು. ಧನುರ್ಮಾಸದ ಚುಮು ಚುಮು ಚಳಿಯನ್ನು ಲೆಕ್ಕಸದೇ ನಗರ ಸಂಕೀರ್ತನೆ ನಡೆಸುವ ಮಕ್ಕಳು,ಹಿರಿಯರು ತಮ್ಮ ಸಂಸ್ಕೃತಿ, ಸಂಪ್ರದಾಯವನ್ನು ಉಳಿಸಿಕೊಂಡು ಬಂದಿದ್ದಾರೆ, ಇದು ಮಕ್ಕಳಿಗೆ ಮುಂದಿನ ದಿನಗಳಲ್ಲಿ ಬೆಳಗ್ಗೆ ಬೇಗ ಎದ್ದು ವ್ಯಾಯಾಮ,ಓದುವ ಅಭ್ಯಾಸವನ್ನು ಸುಲಭಗೊಳಿಸುತ್ತದೆ ಎಂದು ಅಭಿಪ್ರಾಯಪಟ್ಟರು. ಸಂಕ್ರಾಂತಿ ಸರ್ವರಲ್ಲೂ ಸೌಹಾರ್ದತೆ ತರುವ ಹಬ್ಬವಾಗಿದೆ, ಗ್ರಾಮೀಣ ಭಾಗದಲ್ಲಿ ಇಡೀ ವರ್ಷ ದುಡಿಮೆ ಮಾಡಿ ನಮಗೆ ಅನ್ನ ನೀಡಲು ನೆರವಾಗುವ ರಾಸುಗಳನ್ನು ಪೂಜಿಸುವ ವಿಶಿಷ್ಟ ಸಂಪ್ರದಾಯ ಇನ್ನು ಉಳಿದಿರುವುದು ಸಂತಸದ ವಿಷಯ ಎಂದರು.

ರೈತ ವರ್ಷಪೂರ್ತಿ ಬೆಳದ ದವಸ, ಧಾನ್ಯಕ್ಕೆ ಪೂಜೆ ಸಲ್ಲಿಸಿ ನಿರಂತರವಾಗಿ ಒಳ್ಳೆ ಮಳೆ, ಪಸಲು ಬರಲಿ ಎಂದು ಪ್ರಾರ್ಥಿಸುತ್ತಾನೆ. ರೈತನ ಒಡನಾಡಿಗಳಾದ ಹಸು, ಕರು, ಎತ್ತುಗಳನ್ನು ತೊಳೆದು ಸಿಂಗರಿಸಿ, ದೇವರಂತೆ ಪೂಜಿಸುವ ಹಬ್ಬವೇ ಸಂಕ್ರಾಂತಿಯಾಗಿದೆ ಎಂದರು.

ಎಳ್ಳುಬೆಲ್ಲ ಕೊಟ್ಟು ಒಳ್ಳೆಯ ಮಾತನಾಡು ಎಂಬ ನಮ್ಮ ಹಿರಿಯರು ಹಾಕಿಕೊಟ್ಟ ಪದ್ಧತಿ ಸಮಾಜದಲ್ಲಿ ಶಾಂತಿ,ಪ್ರೀತಿ ನೆಲಸಲು ಸಹಾಯ ಮಾಡಿದೆ ಎಂದ ಅವರು, ಈ ಹಬ್ಬದ ವಿಶೇಷವೇ ಪ್ರಕೃತಿಯನ್ನು ಪೂಜಿಸುವುದಾಗಿದೆ ಹೇಳಿದರು.

# ಬೆನ್ನುನೋವಿಗೆ ಚಿಕಿತ್ಸೆ ಪಡೆಯಲು ಮೈಸೂರಿನ ಮಣಿಪಾಲ್ ಆಸ್ಪತ್ರೆಗೆ ಆಗಮಿಸಿದ ದರ್ಶನ್

• ಉದಯವಾಹಿನಿ, ಮೈಸೂರು

ಬೆನ್ನುನೋವಿಗೆ ಚಿಕಿತ್ಸೆ ಪಡೆಯಲು ನಟ ದರ್ಶನ್ ಮಣಿಪಾಲ್ ಆಸ್ಪತ್ರೆಗೆ ಆಗಮಿಸಿದ್ದಾರೆ. ಸಂಕ್ರಾಂತಿ ಹಬ್ಬದ ವೇಳೆಗೆ ನಟ ದರ್ಶನ್ ಆಪರೇಷನ್ ಮಾಡಿಸಿಕೊಳ್ಳಲಿದ್ದು, ಫೆಬ್ರವರಿಯಲ್ಲಿ ಸಿನಿಮಾದ ಶೂಟಿಂಗ್ ನಲ್ಲಿ ಭಾಗಿಯಾಗಲಿದ್ದಾರೆ ಎಂದು ಹೇಳಲಾಗಿತ್ತು. ಇದೀಗ ನಟ ದರ್ಶನ್ ಮಣಿಪಾಲ್ ಆಸ್ಪತ್ರೆಗೆ ಆಗಮಿಸಿದ್ದಾರೆ. ವೈದ್ಯರನ್ನು ಭೇಟಿ ಮಾಡಲಿರುವ ದರ್ಶನ್ ವೈದ್ಯರ ಸಲಹೆ ಪಡೆದು ಆಸ್ಪತ್ರೆಗೆ ದಾಖಲಾಗುವ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಿದ್ದಾರೆ.

ಬೆನ್ನುನೋವಿನ ಹಿನ್ನೆಲೆ ಬೆಂಗಳೂರಿನ ಬಿಜಿಎಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದ ನಟ ದರ್ಶನ್ ಆಪರೇಷನ್ ಮಾಡಿಸಿಕೊಳ್ಳದೇ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದರು. ನಂತರ ಮೈಸೂರಿನ ಕಾಮಾಕ್ಷಿ ಆಸ್ಪತ್ರೆಗೆ ನಟ ದರ್ಶನ್ ಭೇಟಿ ನೀಡಿ ವೈದ್ಯರ ಸಲಹೆ ಪಡೆದು ವಾಪಸ್ ಬಂದಿದ್ದರು. ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜೈಲು ಸೇರಿದ್ದ ನಟ ದರ್ಶನ್ ಹಾಗೂ ಗ್ಯಾಂಗ್ ಗೆ 6 ತಿಂಗಳ ಬಳಿಕ ಹೈಕೋರ್ಟ್ ನಲ್ಲಿ ಜಾಮೀನು ಮಂಜೂರಾಗಿದ್ದು, ಆರೋಪಿಗಳು ಸದ್ಯ ರಿಲ್ಯಾಕ್ಸ್ ಮೂಡ್ ನಲ್ಲಿದ್ದಾರೆ.

# ಶ್ರೀರಂಗನ ಸನ್ನಿಧಿಯಲ್ಲಿ ಲಕ್ಷ ದೀಪೋತ್ಸವ ವೈಭವ

• ಉದಯವಾಹಿನಿ, ಶ್ರೀರಂಗಪಟ್ಟಣ

ಪಟ್ಟಣದ ಶ್ರೀರಂಗನಾಥಸ್ವಾಮಿ ದೇವಾಲಯದ ಆವರಣದಲ್ಲಿ ಮಕರ ಸಂಕ್ರಾಂತಿ ನಿಮಿತ್ತ ಮಂಗಳವಾರ ಏರ್ಪಡಿಸಿದ ಲಕ್ಷ ದೀಪೋತ್ಸವದಲ್ಲಿ ಸಹಸ್ರಾರು ಹಣತೆಗಳು ಪ್ರಜ್ವಲಿಸಿದವು.

ಶಾಸಕ ರಮೇಶ ಬಂಡಿಸಿದ್ದೇಗೌಡ ಸಂಜೆ 6.30ಕ್ಕೆ, ಗೋಧೂಳಿ ಲಗ್ನದಲ್ಲಿ ದೀಪೋತ್ಸವಕ್ಕೆ ಚಾಲನೆ ನೀಡಿದರು. ಜ್ಯೋತಿಷಿ ವಿ. ಭಾನುಪ್ರಕಾಶ್ ಶರ್ಮಾ ನೇತೃತ್ವದ ವೈದಿಕರ ತಂಡದಿಂದ ವೇದ ಘೋಷಗಳ ಪಠನ ನಡೆಯಿತು. ದೇವಾಲಯದ ಮುಂದಿನ ಆವರಣ ಮತ್ತು ಮಿನಿ ವಿಧಾನಸೌಧದ ವೃತ್ತದಲ್ಲಿ ವಿಷ್ಣುವಿನ ಶಂಕ, ಚಕ್ರ, ಓಂ, ಸ್ವಸ್ತಿಕ್ ವಿನ್ಯಾಸದಲ್ಲಿ ಆಕರ್ಷಕವಾಗಿ ದೀಪಗಳನ್ನು ಜೋಡಿಸಲಾಗಿತ್ತು. ದೇವಾಲಯದ ಮುಂದೆ ಮಿನಿ ವಿಧಾನಸೌಧ ವೃತ್ತದ ವರೆಗೆ 150 ಮೀಟರ್ ಉದ್ದಕ್ಕೆ 18 ಸಾಲುಗಳಲ್ಲಿ ದೀಪಗಳನ್ನು ಜೋಡಿಸಲಾಗಿತ್ತು. ನೆಲದ ಮೇಲೆ 10 ಸಾಲುಗಳು ಮತ್ತು ಎಡ ಮತ್ತು ಬಲ ಭಾಗದ ಅಡಿಕೆ ದಬ್ಬೆಗಳ ಮೇಲೆ ತಲಾ ನಾಲ್ಕು ಸಾಲುಗಳಲ್ಲಿ ದೀಪಗಳನ್ನು ಇರಿಸಿ ಬೆಳಗಲಾಯಿತು. ಭಕ್ತರು ದೀಪದಿಂದ ದೀಪವನ್ನು ಬೆಳಗಿ ಪುನೀತರಾದರು.

ಶ್ರೀರಂಗನಾಥಸ್ವಾಮಿ ದೇವಾಲಯದ ಬಲ ಪಾರ್ಶ್ವದ ಲಕ್ಷ್ಮಿನರಸಿಂಹಸ್ವಾಮಿ ದೇವಾಲಯ, ಪೇಟೆ ನಾರಾಯಣಸ್ವಾಮಿ ದೇವಾಲಯ ಮತ್ತು ಕ್ಷಣಾಂಬಿಕಾ ದೇಗುಲಗಳ ಆವರಣದಲ್ಲಿ ಕೂಡ ದೀಪಗಳನ್ನು ಬೆಳಗಲಾಯಿತು. ಪಟ್ಟಣ ಮಾತ್ರವಲ್ಲದೆ ಆಸುಪಾಸಿನ ಗ್ರಾಮಗಳ ಸಹಸ್ರಾರು ಮಂದಿ ಲಕ್ಷ ದೀಪೋತ್ಸವವನ್ನು ಕಣ್ತುಂಬಿಕೊಂಡರು. ದೇವಾಲಯದ ಮುಖ್ಯ ದ್ವಾರದಲ್ಲಿ ಆಗಾಗ ನೂಕು ನುಗ್ಗಲು ಉಂಟಾಯಿತು. ಶ್ರೀರಂಗನಾಥಸ್ವಾಮಿ ದೇವಾಲಯದ ರಾಜಗೋಪುರ ಮತ್ತು ಪಟ್ಟಣದ ಮುಖ್ಯ ಬೀದಿಗಳು ಆಕರ್ಷಕ ವಿದ್ಯುತ್ ದೀಪಗಳಿಂದ ಕಂಗೊಳಿಸಿದವು. ಸ್ವರ್ಗದ ಬಾಗಿಲು ಪ್ರವೇಶ: ಮಕರ ಸಂಕ್ರಾಂತಿ ನಿಮಿತ್ತ ಶ್ರೀರಂಗನಾಥಸ್ವಾಮಿ ದೇವಾಲಯದಲ್ಲಿ ಭಕ್ತರಿಗೆ ಸ್ವರ್ಗದ ಬಾಗಿಲು ಪ್ರವೇಶಕ್ಕೆ ವ್ಯವಸ್ಥೆ ಮಾಡಲಾಗಿತ್ತು. ದೇವಾಲಯದ ಉತ್ತರ ಭಾಗದ ದ್ವಾರವನ್ನು ಸಿಂಗರಿಸಿ ಸ್ವರ್ಗದ ಬಾಗಿಲಿನ ಮಾದರಿ ಸಿದ್ದಪಡಿಸಲಾಗಿತ್ತು. ದೇವಾಲಯಕ್ಕೆ ಬಂದವರು ಶ್ರೀರಂಗನಾಥಸ್ವಾಮಿ ದರ್ಶನ ಪಡೆದು ಸ್ವರ್ಗದ ಬಾಗಿಲು ಮೂಲಕ ಹಾದು ಭಾವಪರವಶರಾದರು. ಶ್ರೀರಂಗನಾಥಸ್ವಾಮಿಗೆ ಬೆಣ್ಣೆ ಅಲಂಕಾರ ಮಾಡಲಾಗಿತ್ತು. ಸೇವಾರ್ಥದಾರರು ನೀಡಿದ 80 ಕೆ.ಜಿ. ಬೆಣ್ಣೆಯಿಂದ ಅಲಂಕರಿಸಿ ವಿಶೇಷ ಪೂಜೆ ಸಲ್ಲಿಸಲಾಯಿತು. ರಂಗನಾಥಸ್ವಾಮಿಯ ಜತೆಗೆ ಶ್ರೀ ರಂಗನಾಯಕಿ, ಶ್ರೀದೇವಿ, ಭೂದೇವಿ ಮತ್ತು ಗೌತಮ ಋಷಿಗಳಿಗೂ ಪೂಜೆ ನಡೆಯಿತು. ಇದೇ ವೇಳೆ ಶ್ರೀರಂಗನಾಥಸ್ವಾಮಿಯ ಪ್ರಾಕಾರೋತ್ಸವ ನಡೆಯಿತು. ದೇವಾಲಯದ ಆವರಣದಲ್ಲಿ ಸಂಕೀರ್ತನೆಗಳು ನಡೆದವು.


ಉದಯವಾಹಿನಿ ಚಿತ್ರ

# ಬೈರೇಗೌಡರ ಕೃತಿಗಿದೆ ಚಿಕಿತ್ಸಕ ಗುಣ: ಸಾಹಿತಿ ವೈ.ವಿ.ಗುಂಡೂರಾವ್

## ಬೆಂಗಳೂರಿನ ಪ್ರಗತಿ ಗ್ರಾಫಿಕ್ಸ್ ಪ್ರಕಟಿಸಿರುವ ಡಾ. ಎಂ. ಬೈರೇಗೌಡ ಅವರ 3 ಪುಸ್ತಕ ಬಿಡುಗಡೆ ಕಾರ್ಯಕ್ರಮ

• ಉದಯವಾಹಿನಿ, ರಾಮನಗರ

ಬುದ್ಧಿಗೆ ಪ್ರಚೋದನೆ, ಮನಸ್ಸಿಗೆ ರಂಜನೆ ಹಾಗೂ ಸಮಾಜ ಸುಧಾರಣೆ ಸಾಹಿತ್ಯದ ಉದ್ದೇಶ. ನಟ, ನಾಟಕಕಾರ, ಕವಿ, ಜಾನಪದ ವಿದ್ವಾಂಸ, ಪ್ರಕಾಶಕನಾಗಿರುವ ಬೈರೇಗೌಡರು ಬಹುಮುಖ ಪ್ರತಿಭೆಯ ವಿಭಿನ್ನ ಸಾಹಿತಿ, ಅವರ ಕೃತಿಗಳಲ್ಲಿ ಈ ಮೂರು ಉದ್ದೇಶಗಳು ಮಿಳಿತವಾಗಿದ್ದು, ಸಮಾಜಕ್ಕೆ ಚಿಕಿತ್ಸಕ ಹಾಗೂ ಮಾರ್ಗದರ್ಶಕವಾಗುವ ಗುಣ ಹೊಂದಿವೆ' ಎಂದು ಹಾಸ್ಯ ಸಾಹಿತಿ ವೈ.ವಿ. ಗುಂಡೂರಾವ್ ಅಭಿಪ್ರಾಯಪಟ್ಟರು. ಕೃಷ್ಣಾಪುರದೊಡ್ಡಿಯ ಕೆ.ಎಸ್. ಮುದ್ದಪ್ಪ ಸ್ಮಾರಕ ಟ್ರಸ್ಟ್ ಹಾಗೂ ರಾಮನಗರ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ನಗರದ ಐಜೂರಿನ ನ್ಯೂ ಎಕ್ಸ್‌ಪರ್ಟ್ ಕಾಲೇಜಿನಲ್ಲಿ ಸೋಮವಾರ ಹಮ್ಮಿಕೊಂಡಿದ್ದ, ಬೆಂಗಳೂರಿನ ಪ್ರಗತಿ ಗ್ರಾಫಿಕ್ಸ್ ಪ್ರಕಟಿಸಿರುವ ಡಾ. ಎಂ. ಬೈರೇಗೌಡ ಅವರ 3 ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

'ಅಧ್ಯಕ್ಷತೆ ವಹಿಸಿದ ಸಾಹಿತಿ ಅಣುಕು ರಾಮನಾಥ್, 'ಲೇಖಕರ ಅನುಭವಗಳು ಕೃತಿಯಲ್ಲಿ ಜೀವ ಪಡೆದಿವೆ, ಸ್ವಗತದ ರೀತಿಯಲ್ಲಿ ಕೃತಿಯು ಸಾಗುತ್ತದೆ. ಮೂರೂ ಕೃತಿಗಳನ್ನು ಓದಿದಾಗ, ಮುಂದಿನ ಪೀಳಿಗೆಗೆ ದಾರಿದೀಪವಾಗುವಂತಹ ಇಂತಹದ್ದೊಂದು ಕೃತಿ ಬೇಕಿತ್ತು ಎಂಬ ಭಾವನೆ ಮೂಡುತ್ತದೆ' ಎಂದರು.


ಉದಯವಾಹಿನಿ ಚಿತ್ರ

**ಸಾಹಿತ್ಯದಲ್ಲಿ ಪ್ರಬೋಧ. ಪ್ರಮೋದ ಹಾಗೂ ಪ್ರಮಾದ ಎಂಬ ಬಗೆಗಳಿವೆ. ಮೊದಲೆರಡು ಸಂಘಟನಾ ಸಾಹಿತ್ಯವಾದರೆ, 3ನೇಯದು ವಿಘಟನಾ ಸಾಹಿತ್ಯ. ಈ ಮೂರೂ ಎಲ್ಲಾ ಕಾಲದಲ್ಲೂ ಚಾಲ್ತಿಯಲ್ಲಿರುತ್ತವೆ. ಮೊದಲೆರಡು ಪಾರಮ್ಯದಲ್ಲಿದ್ದರೆ ಸಮಾಜ ಸಮತೋಲಿತವಾಗಿದೆ ಎಂದರ್ಥ ಎಂದು ಅಭಿಪ್ರಾಯಪಟ್ಟರು.**

### 'ಧ್ಯಾನಸ್ಥ ಬದುಕಿನ ಅಕ್ಷರ ರೂಪ

**'ಬೈರೇಗೌಡರ ನಾಲ್ಕು ದಶಕಗಳ ಬದುಕು ಸಾಮಾಜಿಕ ಬದುಕಿನ ಧ್ಯಾನಸ್ತ ಸ್ಥಿತಿಯಲ್ಲಿ ಹುಟ್ಟಿದ ಭಾವನೆಗಳ ಅಕ್ಷರ ರೂಪ 'ಕದವಿರದ ಮನೆ' ಕವನಸಂಕಲನ, ಅರೆ ಇದೇನಿದು ಎಂಬ ಕೌತುಕ ಹುಟ್ಟಿಸುವ ಇಲ್ಲಿನ ಕವಿತೆಗಳು ಕೃತಿಕಾರರ ಸೂಕ್ಷ್ಮ ಒಳನೋಟ ಭಾವಲಹರಿ ಹಾಗೂ ಅಂತಃಸತ್ವವನ್ನು ಒಳಗೊಂಡಿವೆ' ಎಂದು ರಂಗಕರ್ಮಿ ಎಂ.ಸಿ. ನಾಗರಾಜ್ ಅಭಿಪ್ರಾಯಪಟ್ಟರು 'ಕದವಿರದ ಮನೆ' ಕವನ ಸಂಕಲನ ಹಾಗೂ 'ಅರ್ಕ-ಬುರ್ಕ ನಾಟಕ ಪರಿಚಯಿಸಿದ ಅವರು 'ಮನುಷ್ಯನನ್ನು ಯಾವುದೇ ಹಿನ್ನೆಲೆಯಿಂದ ನೋಡದೆ ಚೌಕಟ್ಟಿನಿಂದ ಗುರುತಿಸದೆ ಮನುಷ್ಯನನ್ನು ಮನುಷ್ಯನನ್ನಾಗಿ ನೋಡುವ ಆಶಯ ನಾಟಕದಲ್ಲಿದೆ. ಮುರಿದ ಸ್ನೇಹ-ಸಂಬಂಧಗಳನ್ನು ಕೂಡಿಸುವ ಆಶಯವನ್ನು ಅಡಗಿಸಿಟ್ಟುಕೊಂಡಿದ್ದು ಅದನ್ನು ಸಮಾಜಕ್ಕೆ ಪರಿಣಾಮಕಾರಿಯಾಗಿ ದಾಟಿಸುವ ಪ್ರಯತ್ನವನ್ನು ಬೈರೇಗೌಡರು ಮಾಡಿದ್ದಾರೆ' ಎಂದರು.**

ಪಾದರಿಯ ಪರಿಮಳ ಕಥಾ ಸಂಕಲನ ಪರಿಚಯಿಸಿದ ಸಾಹಿತಿ ಡಾ. ಸುನೀತ ಬಿ.ವಿ., 21 ಕತೆಗಳ ಗುಚ್ಛವಾಗಿರುವ ಕೃತಿಯಲ್ಲಿ ಸಾಹಿತ್ಯದ ಸ್ಮ ಅಭಿಮುಖ ಲಕ್ಷಣವಿದೆ. ಕೃತಿಯುದ್ದಕ್ಕೂ ಲೇಖಕನ ವ್ಯಕ್ತಿತ್ವ ಅನಾವರಣವಾಗುತ್ತದೆ. ವಾಸ್ತವಿಕತೆಯಿಂದ ಕೂಡಿರುವ ಇಲ್ಲಿನ ಕತೆಗಳನ್ನು, ಕತೆಗಾರನ ಆತ್ಮಕಥೆಯ ತುಣುಕುಗಳೆನ್ನಬಹುದು. ಕವಿ ಭಾವನೆಗಳಿಗೆ ಸಿಲುಕಿ ಬತ್ತದೆ, ಹೊಸ ಚಿಲುಮೆಯೊಂದಿಗೆ ಮುಂದಕ್ಕೆ ಕರೆದೊಯ್ಯುತ್ತಾರೆ' ಎಂದು ಅಭಿಪ್ರಾಯಪಟ್ಟರು.

ಅತಿಥಿಗಳಾದ ಪರಿಷತ್ ನ ಜಿಲ್ಲಾಧ್ಯಕ್ಷ ಬಿ.ಟಿ. ನಾಗೇಶ್, ಕಾಲೇಜಿನ ಪ್ರಾಂಶುಪಾಲ ಡಿ.ಆರ್. ರವಿಕುಮಾರ್ ಮಾತನಾಡಿದರು. ಪರಿಷತ್ತಿನ ತಾಲ್ಲೂಕು ಅಧ್ಯಕ್ಷ ಬಿ.ಟಿ. ದಿನೇಶ್ ಬಿಳಗುಂಬ ಅತಿಥಿಗಳನ್ನು ಸ್ವಾಗತಿಸಿದರು. ಜೋಗಿಲ ಸಿದ್ದರಾಜು ಪ್ರಾರ್ಥಿಸಿದರು. ಡಾ. ಎಂ. ಬೈರೇಗೌಡ, ಸಾಹಿತಿಬದುಕಿನ ಅನುಭವದ ಸತ್ಯ ಮತ್ತು ತತ್ವಗಳನ್ನು ದಾಖಲಿಸುವ ಮೊದಲ ಪ್ರಯತ್ನವಾಗಿ ಈ ಪುಸ್ತಕಗಳು ಹೊರಬಂದಿವೆ. ನನ್ನ ಬದುಕಿನ ಬಿಡಿ ಚಿತ್ರಗಳು ಕಥೆ ಮತ್ತು ಕವಿತೆಗಳಾಗಿ ರೂಪುಗೊಂಡಿವೆ.

# ಮಿನಿ ನ್ಯೂಸ್

## ಸಿಎಂ ತವರಿನಲ್ಲೂ ಮೈಕ್ರೋ ಫೈನಾನ್ಸ್ ಸಿಬ್ಬಂದಿ ಕಿರುಕುಳ

• ಉದಯವಾಹಿನಿ, ಮೈಸೂರು

ಚಾಮರಾಜನಗರದ ಬೆನ್ನಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತವರು ಕ್ಷೇತ್ರ ವರುಣಾ, ನಂಜನಗೂಡಿನಲ್ಲೂ ಮೈಕ್ರೋ ಫೈನಾನ್ಸರ್ ಸಿಬ್ಬಂದಿಗಳ ಕಿರುಕುಳ ಹೆಚ್ಚಾಗಿದೆ. ಈ ಹಿನ್ನಲೆಯಲ್ಲಿ ಕಿರುಕುಳ ತಾಳಲಾರದೇ ಗ್ರಾಮವನ್ನೇ ತೊರೆಯಲು ಜನರು ಮುಂದಾಗಿದ್ದಾರೆ. ಮೈಸೂರು ಜಿಲ್ಲೆಯ ವರುಣ ಹಾಗೂ ನಂಜನಗೂಡು ವ್ಯಾಪ್ತಿಯಲ್ಲಿ ಮೈಕ್ರೋ ಫೈನಾನ್ಸ್ ಸಿಬ್ಬಂದಿಯ ಕಿರುಕುಳ ಹೆಚ್ಚಾಗಿದೆ. ಕೊಟ್ಟ ಸಾಲ ವಾಪಾಸ್ ಕಟ್ಟದೇ ಇದ್ದಕ್ಕೆ ಗ್ರಾಮದ ಜನರ ಮನೆಯ ಬಾಗಿಲ ಮೇಲೆಯೇ ನೋಟಿಸ್ ಬೋರ್ಡ್ ರೀತಿಯಲ್ಲಿ ಈ ಸ್ವತ್ತಿನ ಮೇಲೆ ಸಾಲ ಪಡೆದಿರುವುದಾಗಿ ಕಪ್ಪು ಶಾಹಿರಿಯಿಂದ ಬರೆಯಲಾಗಿದೆ. ಮೈಕ್ರೋ ಫೈನಾನ್ಸ್ ಸಿಬ್ಬಂದಿಯ ಈ ಬರವಣಿಗೆಯಿಂದಾಗಿ ಗ್ರಾಮದ ಜನರು ಮಾನಸಿಕವಾಗಿ ನೊಂದು ಹೋಗಿದ್ದು ಕಿರುಕುಳಕ್ಕೆ ಬೇಸತ್ತಿದ್ದಾರೆ. ಬಲವಂತವಾಗಿ ಸಾಲ ವಾಪಾಸ್ಸು ನೀಡುವಂತೆಯೂ ಫೈನಾನ್ಸ್ ಸಿಬ್ಬಂದಿ ಒತ್ತಾಯಿಸುತ್ತಿದ್ದಾರೆ. ಈ ಕಾರಣಕ್ಕೆ ವರುಣ, ನಂಜನಗೂಡು ಕ್ಷೇತ್ರದ ಜನರು ಗ್ರಾಮವನ್ನೇ ತೊರೆಯಲು ಮುಂದಾಗಿದ್ದಾರೆ. ಜೊತೆಗೆ ಈ ಕಿರುಕುಳ ತಪ್ಪಿಸುವಂತೆ ಆಗ್ರಹಿಸಿದ್ದಾರೆ.

## ನಗರದಲ್ಲಿ ರಾಷ್ಟ್ರೀಯ ಸೇವಾ ದಿನಾಚರಣೆ

• ಉದಯವಾಹಿನಿ, ಹುಣಸೂರು

ರಾಷ್ಟ್ರೀಯ ಸೇವಾ ದಿನದ ಅಂಗವಾಗಿ ನಗರದ ಮಾಧವ ವಿದ್ಯಾ ಸಂಸ್ಥೆಯಲ್ಲಿ ಏರ್ಪಡಿಸಿದ ವಿಶೇಷ ಕಾರ್ಯಕ್ರಮವನ್ನು ರಾಷ್ಟ್ರೀಯ ಸ್ವಯಂಸೇವಾ ಸಂಘದ ಮಾಧವ್ ಬಾಗಲ್ ಉದ್ಘಾಟಿಸಿ ಮಾತನಾಡಿದರು. ಸಂಸ್ಥೆಯ ವ್ಯವಸ್ಥಾಪಕರಾದ ರಘುವೀರ್ ಜೀ ಮಾತನಾಡಿ ಸೇವಾ ದಿನದ ಮಹತ್ವ ಹಾಗೂ ಅಜಿತ್ ಜೀರವರ ಜೀವನ ಹಾಗೂ ಅವರ ಹೋರಾಟಗಳ ಕುರಿತು ಮಕ್ಕಳಿಗೆ ತಿಳಿಸಿದರು. ಸಂಸ್ಥೆಯ ಮುಖ್ಯ ಶಿಕ್ಷಕ ವೆಂಕಟೇಶ್ ಎಚ್.ಕೆ ಮಾತನಾಡಿ ಶಾಲಾ ದಿನಗಳಿಂದಲೇ ಮಕ್ಕಳು ದೇಶ ಸೇವೆ ಮಾಡುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಬಿರೇಶ್ ಜೀ, ಚಂದ್ರು ಜೀ, ಜ್ಯೋತಿ, ಪ್ರಿಯ, ಹೇಮಾಭಾಯಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಕಾವೇರಿ ನಡೆಯಲ್ಲಿ ಮುಳುಗಿ ಎಂಜಿನಿಯರ್ ವಿದ್ಯಾರ್ಥಿ ಸಾವು

• ಉದಯವಾಹಿನಿ, ಮಂಡ್ಯ

ಮಂಡ್ಯದಲ್ಲಿ ಘೋರವಾದ ದುರಂತ ಸಂಭವಿಸಿದ್ದು ಕಾವೇರಿ ನದಿಯಲ್ಲಿ ಈಜಲು ಇಳಿದಿದ್ದ ಯುವಕನೊಬ್ಬ ಮುಳುಗಿ ಸಾವನ್ನಪ್ಪಿರುವ ಘಟನೆ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕಿನ ಬಲಮುರಿಯಲ್ಲಿ ನಡೆದಿದೆ. ಮೃತ ವಿದ್ಯಾರ್ಥಿಯನ್ನು ಮೈಸೂರು ನಾಗನಹಳ್ಳಿ ಗ್ರಾಮದ ಎಸ್ ಶ್ರೇಯಸ್ ಎಂದು ತಿಳಿದುಬಂದಿದೆ. ಈತ ಪಾಲಹಳ್ಳಿ ಸಮೀಪದ ಖಾಸಗಿ ಕಾಲೇಜಿನಲ್ಲಿ ಪ್ರಥಮ ಬಿ.ಇ ಓದುತ್ತಿದ್ದ. ಮೂವರು ಸ್ನೇಹಿತರ ಜೊತೆಗೆ ಬಲಮುರಿಗೆ ಈಜಲೆಂದು ತೆರಳಿದ್ದ ವೇಳೆ ಘಟನೆ ನಡೆದಿದೆ. ಮೂವರು ಸ್ನೇಹಿತರೊಂದಿಗೆ ತೆರಳಿದ ಶ್ರೇಯಸ್ ನನಗೆ ಈಜಲು ಬರುತ್ತದೆ ಎಂದು ನದಿಗೆ ಇಳಿದಿದ್ದ. ಈ ವೇಳೆ ಇಬ್ಬರು ಸ್ನೇಹಿತರು ನದಿ ದರದಲ್ಲಿ ಕುಳಿತಿದ್ದರು. ಈ ಸಂದರ್ಭದಲ್ಲಿ ನದಿಯಲ್ಲಿನ ಸುಳಿಗೆ ಸಿಲುಕಿ ಶ್ರೇಯಸ್ ಒದ್ದಾಡಿ ಪ್ರಾಣ ಬಿಟ್ಟಿದ್ದಾನೆ ಎಂದು ತಿಳಿದು ಬಂದಿದೆ. ಘಟನೆ ಕುರಿತು ಕೆ ಆರ್ ಎಸ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗ್ರಾಮದಲ್ಲಿ ರೈತರು ಸಾವಯುವ ಕೃಷಿಗೆ ಒತ್ತು ನೀಡಲಿ

• ಉದಯವಾಹಿನಿ, ಗೌರಿಬಿದನೂರು

ತಾಲ್ಲೂಕಿನ ದೊಡ್ಡಕುರುಗೋಡು ಗ್ರಾಮದಲ್ಲಿ ರೈತರು ಸಂಭ್ರಮದಿಂದ ಸುಗ್ಗಿ ಹಬ್ಬ ಆಚರಿಸಿದರು. ಮನೆಯ ಮುಂಭಾಗ ರಂಗೋಲಿ ಹಾಕಿ, ಕೊಳಗ, ಕಬ್ಬು, ನೇಗಿಲು ಇಟ್ಟು, ದನಕರುಗಳನ್ನು ಪೂಜಿಸಿದರು. ಗ್ರಾಮದ ವಿವಿಧ ದೇವಾಲಯಗಳಿಗೆ ಪೂಜೆ ಸಲ್ಲಿಸಿ, ಅಲಂಕರಿಸಿದ್ದ ಎತ್ತಿನ ಗಾಡಿಗಳನ್ನು ಮೆರವಣಿಗೆ ಮಾಡಿದರು. ರೈತ ಶ್ರೀರಾಮಪ್ಪ ಮಾತನಾಡಿ, ಸಂಕ್ರಾಂತಿ ಹಬ್ಬ ರೈತರ ಸಂಭ್ರಮಕ್ಕೆ ಸಾಕ್ಷಿ. ಇತ್ತೀಚೆಗೆ ದೇಸಿ ತಳಿ ಹಾಗೂ ಸಾವಯವ ಕೃಷಿಯನ್ನು ಬಿಟ್ಟಿದ್ದೇವೆ. ಇದು ಅನಾರೋಗ್ಯ ಉಂಟುಮಾಡುತ್ತಿದೆ. ದುಡಿಯುವ ರೈತ ಆರೋಗ್ಯವಂತನಾಗಿದ್ದರೆ ದೇಶವೇ ಆರೋಗ್ಯವಾಗಿದ್ದಂತೆ. ಪ್ರತಿ ರೈತರು ಸಾವಯವ ಕೃಷಿ ಪದ್ಧತಿಯತ್ತ ಒಲವು ತೋರಬೇಕು. ಹಿಂದಿನ ಸಂಪ್ರದಾಯ ಮರುಕಳಿಸುವಂತೆ ಸಂಕಲ್ಪ ಮಾಡಬೇಕು ಎಂದರು. ಗ್ರಾಮದ ರೈತ ಮುಖಂಡರಾದ ಅಶೋಕ್, ರಂಗನಾಥ್, ಅಶ್ವತ್ಥಪ್ಪ, ಕೊಂಡಪ್ಪ, ನಂಜುಂಡಪ್ಪ, ಗಂಗಾಧರ್ ಇತರರಿದ್ದರು.

## 14 ನಿರ್ದೇಶಕರ ಸ್ಥಾನಕ್ಕೆ 54 ನಾಮಪತ್ರ

• ಉದಯವಾಹಿನಿ, ಮುಳಬಾಗಿಲು

ನಗರದ ಪಿಎಲ್‌ಡಿ ಬ್ಯಾಂಕ್‌ನ 14 ನಿರ್ದೇಶಕರ ಸ್ಥಾನಗಳಿಗೆ ನಡೆಯುವ ಚುನಾವಣೆಗೆ ಒಟ್ಟು 54 ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಈ ಪೈಕಿ ಆಲಂಗೂರು ಸಾಮಾನ್ಯ ಕ್ಷೇತ್ರಕ್ಕೆ ಮಾಜಿ ಸಚಿವ ದಿ.ಆಲಂಗೂರು ಶ್ರೀನಿವಾಸ್ ಸಹೋದರ ಆಲಂಗೂರು ಶಿವಶಂಕರ್ ಮತ್ತು ಮಾಜಿ ಬ್ಲಾಕ್‌ಕಾಂಗ್ರೆಸ್ ಅಧ್ಯಕ್ಷ ಹಾಗೂ ಜೆಡಿಎಸ್ ಪ್ರಭಾವಿ ಮುಖಂಡ ಶಿನಿಗೇನಹಳ್ಳಿ ಜಿ.ಆನಂದರೆಡ್ಡಿ ಮದ್ಯೆ, ಬಾರಿ ಪೈಪೋಟಿ ಏರ್ಪಟ್ಟಿದ್ದು ಈ ಇಬ್ಬರ ಪೈಕಿ ಒಬ್ಬರನ್ನು ಚುನಾವಣೆ ಕಣದಿಂದ ಹಿಂದೆ ಸರಿಸಲು ತಾಲ್ಲೂಕಿನ ಮುಖಂಡರು ಪ್ರಯತ್ನಿಸುತ್ತಿದ್ದಾರೆ. ಸಾಲಗಾರರ ಕ್ಷೇತ್ರದಿಂದ ನಂಗಲಿ ಬಿಸಿಎಂ ( ಬಿ)– 3, ಅಂಬ್ಲಿಕಲ್ (ಸಾಮಾನ್ಯ)–2, ಮುಡಿಯನೂರು ಬಿಸಿಎಂ (ಎ) –3 ಆಲಂಗೂರು (ಸಾಮಾನ್ಯ )– 5, ಮಲ್ಲನಾಯಕನಳ್ಳಿ (ಎಸ್ಟಿ) 1, ತಾಯಲೂರು (ಎಸ್ಸಿ) –4, ಬಲ್ಲ (ಮಹಿಳಾ ಮೀಸಲು) 3, ಕಸಬಾ (ಮಹಿಳಾ ಮೀಸಲು) –2, ಆವನಿ (ಸಾಮಾನ್ಯ)– 3 ಗುಡಿಪಲ್ಲಿ (ಸಾಮಾನ್ಯ)– 3, ಉತ್ತನೂರು (ಸಾಮಾನ್ಯ)– 7, ಎಚ್ ಗೊಲ್ಲಹಳ್ಳಿ (ಸಾಮಾನ್ಯ) 1, ಬೈರಕೂರು 7 ಅದೇ ರೀತಿ ಸಾಲಗಾರರಲ್ಲದ ಕ್ಷೇತ್ರದಿಂದ 10 ಜನ ನಾಮಪತ್ರ ಸಲ್ಲಿಸಿದ್ದಾರೆ ಇದರಲ್ಲಿ ಯುವಕಾಂಗ್ರೆಸ್ ರಾಜ್ಯ ಜಂಟಿ ಕಾರ್ಯದರ್ಶಿ ಮಂಡಿಕಲ್ ಎಂ.ಎಸ್ ಮಂಜುನಾಥ್ ಗೌಡ ನಾಮಪತ್ರ ಸಲ್ಲಿಸಿರುವುದು ರಾಜಕೀಯ ಕುತುಹಲ ಕೆರಳಿಸಿದೆ.

# ಸಂಪತ್ತಿಗಿಂತ ಆರೋಗ್ಯ ಸಂಪತ್ತು ದೊಡ್ಡದು

## ತಾಲ್ಲೂಕು ಘಟಕದ ವತಿಯಿಂದ ಆಯೋಜಿಸಲಾದ ಸಂಕ್ರಾಂತಿ ಜಾನಪದ ಸಂಭ್ರಮ ಕಾರ್ಯಕ್ರಮ

• **ಉದಯವಾಹಿನಿ ತಾಳಿಕೋಟೆ**


ಉದಯವಾಹಿನಿ ಚಿತ್ರ

**ಗ್ರಾಮದ ಜನರು ಜಾತ್ರೋತ್ಸವ**

ಮನುಷ್ಯನಿಗೆ ಎಷ್ಟೋ ಕೋಟಿ ಹಣ, ಆಸ್ತಿ, ಎಲ್ಲಾ ಸಂಪತ್ತು ಗಳಿಸಬಹುದು ಆದರೆ ಆರೋಗ್ಯ ಸಂಪತ್ತು ಕೆಟ್ಟು ಹೋದರೆ ಎಲ್ಲಾ ಸಂಪತ್ತು ಇದ್ದರೂ ವ್ಯರ್ಥವಾಗುತ್ತದೆ ಹೀಗಾಗಿ ಮೊದಲು ಆರೋಗ್ಯವಂತರಾಗಿ ಬಾಳುವದರ ಕಡೆಗೆ ಎಲ್ಲರೂ ಗಮನ ಕೊಡಬೇಕೆಂದು ವಿಜಯಪುರ ಅನುಗ್ರಹ ಕಣ್ಣಿನ ಆಸ್ಪತ್ರೆಯ ನೇತ್ರ ತಜ್ಞವೈದ್ಯರಾದ ಡಾ.ಪ್ರಭುಗೌಡ ಲಿಂಗದಳ್ಳಿ ಅವರು ಹೇಳಿದರು.

ತಾಲ್ಲೂಕಿನ ಬಳಗಾನೂರ ಗ್ರಾಮದಲ್ಲಿ ಶ್ರೀ ನೀಲಗಂಗಾಂಬಿಕಾದೇವಿ ಜಾತ್ರೋತ್ಸವ ಅಂಗವಾಗಿ ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕ ಮತ್ತು ತಾಲ್ಲೂಕಾ ಘಟಕದ ವತಿಯಿಂದ ಆಯೋಜಿಸಲಾದ ಸಂಕ್ರಾಂತಿ ಜಾನಪದ ಸಂಭ್ರಮ ಕಾರ್ಯಕ್ರಮವನ್ನು ದೀಪ ಬೆಳಗಿಸುವದರೊಂದಿಗೆ ಉದ್ಘಾಟಿಸಿ ಮಾತನಾಡುತ್ತಿದ್ದ ಅವರು ಹಿಂದಿನಕಾಲದಲ್ಲಿ ರೊಟ್ಟಿ ಪಲ್ಲೆ, ಮುಟಗಿ ತಿಂದು ಗಟ್ಟಿ ಮುಟ್ಟಾದ ದೇಹದ ಜೊತೆಗೆ ಆರೋಗ್ಯವಂತರಾಗಿ ನೂರಾರು ವರ್ಷಗಳ ಕಾಲ ಬಧುಕುತ್ತಿದ್ದರು ಆದರೆ ಚೈನಿಸ್ ಫುಡ್ ವ್ಯಾಮೋಹಕ್ಕೆ ಬಲಿಯಾಗಿ ಸಂಜೆಯಾದರೆ ದಾಬಾ, ಬಾರು ಇನ್ನಿತರ ಕಡೆಗೆ ಹೋಗಿ ಆರೋಗ್ಯವನ್ನು ಆಳು ಮಾಡಿಕೊಳ್ಳುತ್ತಾ ಸಾಗಿರುವದು ಆಂತಕದ ವಿಷಯವಾಗಿದೆ ಇಂದಿನ ಜಾನಪದ ಸಂಭ್ರಮದಲ್ಲಿ ಜೋಳದ ಗಿಡ, ಗೋದಿ, ಗಿಡಗಳ ಜೊತೆಗೆ ದೇಹಕ್ಕೆ ಪುಷ್ಠಿ ನೀಡುವಂತಹ ಆರೋಗ್ಯ ಭರಿತವಾದಂತಹ ಆಹಾರವನ್ನು ಪ್ರದರ್ಶಿಸಿ ಸಂಕ್ರಾಂತಿಯ ಸೊಬಗಿನೊಂದಿಗೆ ನಮ್ಮ ಮೂಲ ಬೇರು ಜನಪದವನ್ನು ಉಳಿಸಿ ಬೆಳೆಸುವ ಕಡೆಗೆ ಬಳಗಾನೂರ ಗ್ರಾಮದ ಜನರು ಮುಂದಾಗಿರುವದು ಸಂತಸದ ಸಂಗತಿಯಾಗಿದೆ ಜೀವನವೆಂಬುದು ಒಳ್ಳೆಯ ಸಂಸ್ಕೃತಿಯನ್ನು ಬಿಂಬಿಸುವಂತಹದ್ದಾಗಿದ್ದು ಇದುವೇ ಜನಪದ ಸಾಹಿತ್ಯವಾಗಿದೆ ಜನಪದವು ಜೀವನದ ಮೌಲ್ಯರೂಪಿಸಿದ್ದಲ್ಲದೇ ಸಾಹಿತ್ಯ ನಿರ್ಮಾಣಕ್ಕಾಗಿಯೇ ಮೂಲ ಬೇರಾಗಿದೆ ಕೃಷಿ ಕಾಯಕದಲ್ಲಿ ಬೇಸರಕೆ ಕಳೆದುಕೊಳ್ಳಲು ವಿವಿಧ ನಮುನೆಯ ಜನಪದ ಕಟ್ಟಿ ಹಾಡಿದವರು ಜನಪದದವರೇ ಆಗಿದ್ದಾರೆ ಜನಪದವೆಂಬುದು ಇದೊಂದು ಸಾಹಿತ್ಯವಾಗಿದೆ ಭೂಮಿಗೆ ತಾಯಿ ಎಂಬ ಸ್ಥಾನಮಾನ ನೀಡಲಾಗಿದ್ದು ಭೂಮಿ, ಗಿಡ, ಮರ, ಪ್ರಕೃತಿ, ಸೌಂದರ್ಯವನ್ನು ನಿರ್ಮಿಸಿದ್ದನ್ನು ಮರೆಯುವಂತಿಲ್ಲಾ ಎಂದರು.

ಶಿವಶರಣೆ ಮಂಜುಳಾ ತಾಯಿ ಅಮ್ಮನವರು ಹಾಗೂ ಕಜಾಪ ಜಿಲ್ಲಾ ಅಧ್ಯಕ್ಷ ಬಾಳನಗೌಡ ಪಾಟೀಲ, ಹಾಗೂ ಕಜಾಪ ತಾಲ್ಲೂಕಾ ಅಧ್ಯಕ್ಷ ಸಿದ್ದನಗೌಡ ಕಾಶಿನಕುಂಟಿ ಅವರು ಮಾತನಾಡಿದರು.

ಇದೇ ಸಮಯದಲ್ಲಿ ಜನಪದ ಗೀತೆ, ಭಜನಾ ಪದ, ಕೋಲಾಟ, ರಿವಾಯತ್ ಪದ, ಹಂತಿ ಮೇಳ, ಡೊಳ್ಳಿನ ವಾಲಗ, ಹೆಜ್ಜೆ ಮೇಳ, ಸಂಪ್ರದಾಯ ಪದಗಳು ಪ್ರದರ್ಶನಗೊಂಡವು.

ಇದೇ ಸಮಯದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಡಾ.ಆಯ್.ಬಿ.ತಳ್ಳೊಳ್ಳಿ, ಅರವಿಂದ ಕೊಪ್ಪ, ವೀರುಪಾಕ್ಷ ಕದಲಿ, ಮುತ್ತು ಮನಹಳ್ಳಿ, ಶಿವರಾಜ ಮದರಿಮಠ, ಸಾದಕರಿಗೆ ಸನ್ಮಾನಿಸಿ ಗೌರವಿಸಲಾಯಿತು.

> ಜಾನಪದ ಸಾಹಿತಿ ಶ್ರೀಮತಿ ಶಿವಲೀಲಾ ಮುರಾಳ ಅವರು ಗ್ರಾಮ ಸಂಸ್ಕೃತಿ ಮತ್ತು ಯುವ ಜನತೆ ಎಂಬ ವಿಷಯದ ಮೇಲೆ ಮಾತನಾಡಿ ಜಾನಪದ ಸೊಗಡಿನಿಂದ ನಮ್ಮ ಆಚಾರ ವಿಚಾರ ಅಷ್ಟೇ ಅಲ್ಲದೇ ನಮ್ಮ ಸಂಪ್ರದಾಯ ಸಂಸ್ಕೃತಿ ಉಳಿದುಕೊಂಡಿದೆ ಅಂತಹ ಜಾನಪದ ಸಂಭ್ರಮ ಕಾರ್ಯಕ್ರಮವು ಬಳಗಾನೂರ ಗ್ರಾಮದ ಜನರು ಜಾತ್ರೋತ್ಸವ ಅಂಗವಾಗಿ ಹಮ್ಮಿಕೊಂಡಿರುವದು ಸಂತಸ ತಂದಿದೆ ಎಂದರು.

> ಜನಪದವೆಂಬುದು ಇಂದಿನ ದಿನಮಾನದಲ್ಲಿ ಕುಂಠಿತಗೊಳ್ಳುತ್ತಾ ಸಾಗಿದೆ. ರೈತರಾಗಿರುವ ನಾವುಗಳು ಪ್ರಥಮವಾಗಿ ಮಣ್ಣನ್ನು ಪೂಜಿಸುವ ಮೂಲಕ ಜನಪದಕ್ಕೆ ಹೆಜ್ಜೆ ಹಾಕುತ್ತೇವೆ ಕೃಷಿ ಕಾಯಕವೆಂಬುದು ಅತ್ಯಂತ ಶ್ರೇಷ್ಠವಾಗಿದ್ದು ಯಾರೂ ಅದರಿಂದ ಹಿಂದಕ್ಕೆ ಸರಿಯಬಾರದು ಅದರಲ್ಲಿ ಲಾಭ ಹೇಗೆ ತೆಗೆಯಬೇಕೆಂಬುದರ ಕಡೆಗೆ ರೈತರಾದ ನಾವುಗಳು ಯೋಚನೆ ಮಾಡಬೇಕಿದೆ ನಾನು ನನ್ನ ಪತ್ನಿ ಉನ್ನತ ಶಿಕ್ಷಣವಂತರಾಗಿದ್ದರೂ ಕೂಡಾ ಕೃಷಿಯಲ್ಲಿ ನಿರತರಾಗುವದರ ಜೊತೆಗೆ ಮಕ್ಕಳನ್ನು ಕನ್ನಡ ಶಾಲೆಯಲ್ಲಿ ಓದಿಸಿ ಕೃಷಿಯಲ್ಲಿ ಆಸಕ್ತಿ ತುಂಬುವಂತಹ ಕಾರ್ಯ ಮಾಡಿದ್ದೇವೆಂದರು.
>
> ಅರವಿಂದ ಕೊಪ್ಪ ರಾಜ್ಯ ಪ್ರಶಸ್ತಿ ಪುರಸ್ಕೃತಿ

# ಜ.22 ರಿಂದ 24 ರವರೆಗೆ ಉಪ ಲೋಕಾಯುಕ್ತರ ಜಿಲ್ಲಾ ಪ್ರವಾಸ

• **ಉದಯವಾಹಿನಿ ಚಿತ್ರದುರ್ಗ**

ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಅವರು ಇದೇ ಜ.21 ರಿಂದ 24 ರವರೆಗೆ ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

ಉಪಲೋಕಾಯುಕ್ತರು ಜ. 21 ರಂದು ಸಂಜೆ ಬೆಂಗಳೂರಿನಿಂದ ಹೊರಟು, ರಾತ್ರಿ 8 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸಿ, ಪ್ರವಾಸಿ ಮಂದಿರದಲ್ಲಿ ವಾಸ್ತವ್ಯ ಮಾಡುವರು. ಜ.22 ರಂದು ಬೆಳಿಗ್ಗೆ 10 ರಿಂದ 1.30 ರವರೆಗೆ ಮತ್ತು ಮಧ್ಯಾಹ್ನ 2.30 ರಿಂದ 05 ರವರೆಗೆ ಚಿತ್ರದುರ್ಗ ನಗರದ ಚಳ್ಳಕೆರೆ ರಸ್ತೆಯ ಎಸ್.ಜಿ. ಕಲ್ಯಾಣ ಮಂಟಪದಲ್ಲಿ ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಯಾವುದೇ ಸಾರ್ವಜನಿಕರಿಗೆ ಸರ್ಕಾರಿ ಅಧಿಕಾರಿ, ನೌಕರರಿಂದ ಕಾನೂನು ರೀತ್ಯಾ ಆಗಬೇಕಾದ ಕೆಲಸದಲ್ಲಿ ವಿಳಂಬವೇನಾದರೂ ಆಗಿದ್ದಲ್ಲಿ ಅಥವಾ ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುವುದು ಅಥವಾ ಇನ್ಯಾವುದೇ ತರಹದ ದುರಾಡಳಿತದಲ್ಲಿ ತೊಡಗಿದ್ದರೆ ಆದರಿಂದ ತೊಂದರೆಗೊಳಗಾದ ಸಾರ್ವಜನಿಕರು ಉಪಲೋಕಾಯುಕ್ತರ ಮುಂದೆ ತಮ್ಮ ಅಹವಾಲುಗಳನ್ನು ಅರ್ಜಿ ನಮೂನೆ-1 ಮತ್ತು ನಮೂನೆ-2 ರಲ್ಲಿ ಲಿಖಿತ ರೂಪದಲ್ಲಿ ದಾಖಲೆ, ಸಾಕ್ಷ್ಯಾಧಾರಗಳೊಂದಿಗೆ ಸಲ್ಲಿಸಬಹುದಾಗಿದೆ. ಸಂಜೆ 5.30 ಗಂಟೆಗೆ ಎಸ್.ಜಿ. ಕಲ್ಯಾಣ ಮಂಟಪದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕುರಿತಂತೆ ಶಿಕ್ಷಣ, ರೇಷ್ಮೆ, ಕೃಷಿ, ತೋಟಗಾರಿಕೆ ಇಲಾಖೆಗಳು, ಆರ್ಟಿಒ, ಸಬ್‌ರಿಜಿಸ್ಟರ್, ಸಮಾಜ ಕಲ್ಯಾಣ, ನ್ಯಾಯಾಂಗ ಇಲಾಖೆ ಅಧಿಕಾರಿಗಳಿಗೆ ಏರ್ಪಡಿಸಿರುವ ಕಾನೂನು ಸಾಕ್ಷರತಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಜ.23 ರಂದು ಬೆ. 9.45 ಗಂಟೆಗೆ ಚಿತ್ರದುರ್ಗ ಜಿಲ್ಲಾ ನ್ಯಾಯಾಲಯ ಆವರಣದಲ್ಲಿನ ಬಾರ್ ಅಸೋಸಿಯೇಶನ್ ಸಭಾಂಗಣದಲ್ಲಿ ವಕೀಲರ ಸಂಘ ಹಾಗೂ ಚಿತ್ರದುರ್ಗ ಬಾರ್ ಅಸೋಸಿಯೇಶನ್ ಸದಸ್ಯರೊಂದಿಗೆ ಸಾರ್ವಜನಿಕ ಆಡಳಿತ ಮತ್ತು ಗುಡ್ ಗೌರ್ನೆನ್ಸ್ ಕುರಿತು ಸಂವಾದ ನಡೆಸುವರು. ಬೆಳಿಗ್ಗೆ 11 ರಿಂದ 11.30 ರವರೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಬೆ. 11.30 ರಿಂದ 1.30 ರವರೆಗೆ ಹಾಗೂ ಮಧ್ಯಾಹ್ನ 2.30 ರಿಂದ ಚಿತ್ರದುರ್ಗ ಜಿಲ್ಲಾ ಪಂ. ಸಭಾಂಗಣದಲ್ಲಿ ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ಈಗಾಗಲೆ ದಾಖಲಾಗಿರುವ (ಉಪಲೋಕಾಯುಕ್ತರ ಕಾರ್ಯವ್ಯಾಪ್ತಿಗೆ ಒಳಪಡುವ) ಪ್ರಕರಣಗಳ ಕುರಿತು ತನಿಖೆ, ವಿಚಾರಣೆಗೆ ಬಾಕಿ ಇರುವ ಪ್ರಕರಣಗಳಿಗೆ ಸಂಬಂಧಿಸಿದ ದೂರುದಾರರು ಎದುರುದಾರರ ಸಮ್ಮುಖದಲ್ಲಿ ಕಾನೂನು ರೀತ್ಯಾ ವಿಚಾರಣೆ ನಡೆಸುವರು.

ಆದ್ದರಿಂದ ದೂರುದಾರರು ಎದುರುದಾರರು ನಿಗಧಿತ ಸಮಯದಲ್ಲಿ ಹಾಜರಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು.

ಜ. 24 ರಂದು ಬೆ. 09 ರಿಂದ 10 ಗಂಟೆಯವರೆಗೆ ಚಿತ್ರದುರ್ಗ ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಜಿಲ್ಲೆಯ ನ್ಯಾಯಾಂಗ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆ. 10.15 ಗಂಟೆಗೆ ನಗರದ ಪ್ರವಾಸಿ ಮಂದಿರದಲ್ಲಿ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಮಧ್ಯಾಹ್ನ 12 ರಿಂದ 02 ಗಂಟೆಯವರೆಗೆ ಹಾಗೂ ಮಧ್ಯಾಹ್ನ 03 ರಿಂದ ಸಂಜೆ 05 ರವರೆಗೆ ವಿವಿಧ ಸರ್ಕಾರಿ ಕಚೇರಿಗಳು ಹಾಗೂ ಸಂಸ್ಥೆಗಳಿಗೆ ಅನಿರೀಕ್ಷಿತ ಭೇಟಿ ನೀಡುವರು ಎಂದು ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ಪೊಲೀಸ್ ಅಧೀಕ್ಷಕ ಎನ್.ವಾಸುದೇವರಾಮ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಿಎಸೈ ತಿಪ್ಪಾರಡ್ಡಿ ವಿರುದ್ಧ ಶಾಸಕ ನಡಹಳ್ಳಿ ವಾಗ್ದಾಳಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಮುದ್ದೇಬಿಹಾಳ**

**ಕರ್ತವ್ಯ ಮರೆತ ಕಾಂಗ್ರೇಸ್**

ಶಾಸಕರ ಮನೆ ಎದುರು ಸೆಗಣಿ ಸುರಿದ ಘಟನೆಯಲ್ಲಿ ಕಾರ್ಯಕರ್ತರನ್ನು ಬಂಧಿಸಿ ಸ್ವಯಂಪ್ರೇರಿತ ದೂರು ದಾಖಲಿಸಿರುವ ಪಿಎಸೈ ಸಂಜಯ್ ತಿಪ್ಪಾರಡ್ಡಿ ವಿರುದ್ಧ ಏಕವಚನದಲ್ಲೇ ತೀವ್ರ ವಾಗ್ದಾಳಿ ನಡೆಸಿದ ನಡಹಳ್ಳಿಯವರು, ಸುಳ್ಳು ಕೇಸ್ ಹಾಕಲಾಗಿದೆ. ಎಫ್‌ಐಆರ್‌ನಲ್ಲಿ ತಿಳಿಸಿದವುಗಳೆಲ್ಲ ಸುಳ್ಳು. ಅಂದಿನ ಘಟನೆಯ ಸಂಪೂರ್ಣ ವಿಡಿಯೋ ನಮ್ಮಲ್ಲಿದೆ.

ಬಿಜೆಪಿ ಮಂಡಲ ಅಧ್ಯಕ್ಷರ ಕುತ್ತಿಗೆ ಹಿಡಿದು ತಳ್ಳಲಾಗಿದೆ. ಕಾರ್ಯಕರ್ತರನ್ನು ಕಿಡಿಗೇಡಿಗಳೆಂದು ಬಣ್ಣಿಸಲಾಗಿದೆ. ಶಾಸಕರ ಮಾತಿನಂತೆ ನಡೆದುಕೊಂಡಿರುವ ಪಿಎಸೈ ಎಷ್ಟು ನಿಷ್ಠಾವಂತ ಅನ್ನೋದು ಗೊತ್ತಿದೆ. ಹೋರಾಟಗಾರರಿಗೆ ರಕ್ಷಣೆ, ಮಾರ್ಗದರ್ಶನ, ಶಾಸಕರಿಂದ ಪ್ರತಿಕ್ರಿಯೆ ಕೊಡಿಸುವ ಕರ್ತವ್ಯ ಮರೆತು ಕಾಂಗ್ರೆಸ್ ಏಜಂಟ್‌ನಂತೆ ವರ್ತಿಸಿದ್ದು ಸರಿಯಲ್ಲ. ಖಾಕಿ ಹಾಕಿಕೊಂಡು ಪ್ರಜಾಪ್ರಭುತ್ವದ ಕಗ್ಗೊಲೆ ನಡೆಸಿರುವ ಪಿಎಸೈ ರಾಜಕಾರಣ ಮಾಡೋದಿದ್ದರೆ ಖಾಕಿ ಬಿಚ್ಚಿ ಬರಲಿ. ಮುಂದಿನ ದಿನಗಳಲ್ಲಿ ತಕ್ಕ ಶಿಕ್ಷೆ ಅನುಭವಿಸಬೇಕಾಗುತ್ತದೆ. ಹಿರಿಯ ಶಾಸಕ, ರಾಷ್ಟ್ರೀಯ ಪಕ್ಷವೊಂದರ ರಾಜ್ಯಾಧ್ಯಕ್ಷನಾದ ನಾನು ಠಾಣೆಗೆ ಬಂದಾಗ ಹೇಗೆ ನಡಕೊಂಡಿದ್ದೀ, ಗೂಳಿ ಥರ ನುಗ್ಗಿ ಬಂದಿದ್ದೀ ಅನ್ನೋದಕ್ಕೆ ವಿಡಿಯೋ ದಾಖಲೆಗಳಿವೆ. ಲೂಟಿ, ವಸೂಲಿ ಎಷ್ಟು ನಡೀತಿದೆ ಅನ್ನೋದು ಗೊತ್ತಿದೆ. ಪಕ್ಷದ ರಾಜ್ಯಾಧ್ಯಕ್ಷರು, ವಿಪಕ್ಷ ನಾಯಕರಿಗೆ, ವರಿಷ್ಠರಿಗೆ ವರದಿ ಕೊಟ್ಟಿದ್ದೇವೆ. ಕೆಟ್ಟ ನಡವಳಿಕೆಗೆ ಕಡಿವಾಣ ಹಾಕುತ್ತೇವೆ ಎಂದರು.

# ವಿವೇಕಾನಂದರ ಜೀವನ ಮೌಲ್ಯ ಅನನ್ಯ: ಲೋಕೇಶ್ ದಾಸ್

• **ಉದಯವಾಹಿನಿ ಚನ್ನರಾಯಪಟ್ಟಣ**


ಉದಯವಾಹಿನಿ ಚಿತ್ರ

ಸ್ವಾಮಿ ವಿವೇಕಾನಂದ ಅವರ ಜೀವನ ಮೌಲ್ಯ ಅನನ್ಯವಾದುದು' ಎಂದು ಕಲಾವಿದ ಲೋಕೇಶ್ ದಾಸ್ ಹೇಳಿದರು. ಪಟ್ಟಣದಲ್ಲಿ ಸ್ವಾಮಿ ವಿವೇಕಾನಂದ ಅವರ ಜನ್ಮದಿನಾಚರಣೆ ಅಂಗವಾಗಿ ಭಾನುವಾರ ಏರ್ಪಡಿಸಿದ್ದ ರಾಷ್ಟ್ರೀಯ ಯುವ ದಿನಾಚರಣೆಯಲ್ಲಿ ಮಾತನಾಡಿದ ಅವರು, 'ಚಿಕ್ಕ ವಯಸ್ಸಿನಿಂದಲೇ ಅಧ್ಯಾತ್ಮದತ್ತ ಅವರಿಗೆ ಒಲವು ಇತ್ತು.


ಅವರ ಆದರ್ಶವನ್ನು ಅಳವಡಿಸಿಕೊಂಡರೆ ಜೀವನ ಸಾರ್ಥಕವಾಗುತ್ತದೆ. ದೇಶಕ್ಕಾಗಿ ದುಡಿದು ನಾಡು ಕಟ್ಟಿದರು. ಭಾರತದ ಸನಾತನ ಧರ್ಮದ ಮಹತ್ವವನ್ನು ಜಗತ್ತಿಗೆ ತಿಳಿಸಿಕೊಟ್ಟರು. ಭಾರತದ ಸಪ್ತಋಷಿಗಳಲ್ಲಿ ಇವರು ಒಬ್ಬರು' ಎಂದು ಬಣ್ಣಿಸಿದರು. 'ಶಿಕ್ಷಣ ಸಂಸ್ಥೆಗಳು, ಮಠಗಳು ಸಂಸ್ಕಾರ ನೀಡುತ್ತವೆ. ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸುವುದರ ಜತೆ ಸಮಾಜದ ಉದ್ಧಾರಕ್ಕಾಗಿ ಮಾನವೀಯ ಮೌಲ್ಯ ರೂಢಿಸಿಕೊಳ್ಳುವುದು ಮುಖ್ಯವಾದುದು. ಹಣ ಗಳಿಸುವುದು ಮುಖ್ಯವಲ್ಲ, ಸನ್ನಡತೆ, ಸಂಸ್ಕಾರದಿಂದ ಉತ್ತಮ ಬದುಕು ಕಟ್ಟಿಕೊಳ್ಳಬೇಕು. ವಿದ್ಯೆ. ವಿನಯ ಮತ್ತು ಸಜ್ಜನಿಕೆ ಇಲ್ಲದಿದ್ದರೆ ಬದುಕು ಸಾರ್ಥಕವಾಗುವುದಿಲ್ಲ' ಎಂದು ಹೇಳಿದರು.

ಯುವ ಜನಾಂಗವನ್ನು ದೃಷ್ಟಿಯಲ್ಲಿ ಇರಿಸಿಕೊಂಡು ಸಂದೇಶ ನೀಡುತ್ತಿದ್ದರು ಅವರ ಪುಸ್ತಕವನ್ನು ಓದಬೇಕು. ಪ್ರಸ್ತುತ ಭಾರತದಲ್ಲಿ ಮಾನವ ಸಂಪನ್ಮೂಲ ಶಕ್ತಿ ಅಗಾಧವಾಗಿದ್ದು ದೇಶ ಎಲ್ಲಾ ಕ್ಷೇತ್ರದಲ್ಲಿ ಪ್ರಗತಿ ಪಥದತ್ತ ಸಾಗುತ್ತಿದೆ' ಎಂದು ತಿಳಿಸಿದರು. ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಎ.ಈ ಚಂದ್ರಶೇಖರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ಮಂಜೇಗೌಡ, ಕಾಂಗ್ರೆಸ್ ಯುವ ಮುಖಂಡ ಸಿ.ಎಸ್. ಯುವರಾಜ್, ಬಿದರೆ ಪುಟ್ಟರಾಜು, ರಾಮಚಂದ್ರು ಭಾಗವಹಿಸಿದ್ದರು.

> ಮಾಜಿ ಶಾಸಕ ಸಿ.ಎಸ್. ಪುಟ್ಟೇಗೌಡ ಮಾತನಾಡಿ, 'ಸ್ವಾಮಿ ವಿವೇಕಾನಂದ ಸೇರಿ ದೇಶದ ಮಹಾನ್ ನಾಯಕರ ಚಿಂತನೆಗಳು ದೇಶಕ್ಕೆ ಮಾರ್ಗದರ್ಶನ ನೀಡಿವೆ. ಅವರ ವಿಚಾರಧಾರೆಯನ್ನು ಮೈಗೂಡಿಸಿಕೊಂಡರೆ ಉತ್ತಮ ಬದುಕು ನಮ್ಮದಾಗುತ್ತದೆ' ಎಂದರು. ಸಾಹಿತಿ ಬಿ.ಎನ್. ಶಿವರಾಂ ಮಾತನಾಡಿ, 'ಸ್ವಾಮಿ ವಿವೇಕಾನಂದ ಅವರು ಮೇರು ವ್ಯಕ್ತಿತ್ವ ಹೊಂದಿದ್ದರು. ಸನಾತನ ಧರ್ಮದ ಪ್ರಖರತೆಯನ್ನು ತಿಳಿಸಿಕೊಟ್ಟರು.

# ರೈತರೊಂದಿಗೆ ಕೇಂದ್ರ ಸರ್ಕಾರ ಕೂಡಲೇ ಮಾತುಕತೆ ನಡೆಸಲಿ

• **ಉದಯವಾಹಿನಿ ಯಾದಗಿರಿ**



ಉದಯವಾಹಿನಿ ಚಿತ್ರ

ಹರಿಯಾಣದ ಶಂಭು ಗಡಿಯಲ್ಲಿ ನಿರಂತರವಾಗಿ ಚಳುವಳಿ ನಡೆಸುತ್ತಿರುವ ರೈತರೊಂದಿಗೆ ಕೇಂದ್ರ ಸರ್ಕಾರ ಕೂಡಲೇ ಮಾತುಕತೆ ನಡೆಸಿ ಇತ್ಯರ್ಥ ಪಡಿಸಬೇಕೆಂದು ಮತ್ತು ಜಗತ್ ಸಿಂಗ ವಲ್ಲೆರವರ ಜೀವರಕ್ಷಣೆ ಮಾಡುವುದು ಸಹ ಕೇಂದ್ರ ಸರ್ಕಾರದ ಜವಾಬ್ದಾರಿ ಆದುದರಿಂದ ಈ ಚಳವಳಿಗೆ ಬೆಂಬಲಿಸಿ ಯಾದಗಿರಿ ಜಿಲ್ಲೆಯ ರೈತ ಸಂಘ ಹಾಗೂ ಹಸಿರು ಸೇನೆಯು ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಜಿಲ್ಲಾಧಿಕಾರಿಗಳು ಮೂಲಕ ಮನವಿ ಪತ್ರ ಸಲ್ಲಿಸಿದರು.

ರೈತರಿಗೆ ಕೊಡಬೇಕಾದಂತ ಸೌಲತ್ತುಗಳೆಂದರೆ ಭೂಮಿ, ನೀರು, ವಿದ್ಯುತ್, ರಸ್ತೆ, ಮತ್ತು ರೈತರು ಬೆಳೆದಂತಹ ಬೆಳೆಗೆ ಯೋಗ್ಯವಾದ ಬೆಲೆ ಕೊಡುವುದು ಎರಡು ಸರಕಾರಗಳ ಆದ್ಯ ಕರ್ತವ್ಯ ಆದರೂ ಸಹ ಇದುವರೆಗೆ ಏಕೆ ಕೊಟ್ಟಿರುವುದು ಇಲ್ಲ ಎಂದು ರೈತರು ಇಟ್ಟಂತಹ ಬೆಳೆಗಳು ಪ್ರಕೃತಿ ವೈಪಲ್ಯಗಳಾದ ಅತಿವೃಷ್ಟಿ ಅನಾವೃಷ್ಟಿ ಮತ್ತು ಕೃಷಿ ಮಾರುಕಟ್ಟೆಯಲ್ಲಿ ದಲ್ಲಾಳರತೋಸದ ಬೆಲೆ ನೀತಿಗಳಿಂದ ತತ್ತರಿಸಿದ್ದು ಮತ್ತು ರೈತರು ಕೃಷಿಗಾಗಿ ಮಾಡಿದ ಸಾಲ ತೀರಿಸಲಾಗದೆ ಆತ್ಮಹತ್ಯೆಗಳು ನಡೆಯುತ್ತಿದ್ದರು ಸಹ ಸರ್ಕಾರಗಳು ಕಣ್ಣು ಮುಚ್ಚಿ ಕುಳಿತಿವೆ ರೈತರು ಆತ್ಮಹತ್ಯೆಗಳಿಗೆ ಪರಿವಾರವೆಂದರೆ ಕೇಂದ್ರ ಸರ್ಕಾರವು ಸ್ವಾಮಿನಾಥನ್ ವರದಿಯನ್ನು ಆದರಿಸಿ ಪೋಷಿಸಿರುವ ಒಬಿಕ ಬೆಂಬಲ ಬೆಲೆಯನ್ನು ಸಂಸತ್ತಿನಲ್ಲಿ ಕಾಯ್ದೆಯಾಗಿ ಜಾರಿ ಮಾಡಿ. ಶೀಘ್ರವಾಗಿ ಜಾರಿಗೆಂದು ಒತ್ತಾಯಿಸುತ್ತಾ ಮತ್ತು ಮೂರು ಕಾಯ್ದೆಗಳನ್ನು ರದ್ದು ಪಡಿಸಬೇಕು ಹಾಗೂ ರೈತರು ಬಗರ್ ಹುಕುಂ ಸಾಗುವಳಿ ಮಾಡುವ ಜಮೀನುಗಳಿಗೆ ತಕ್ಷಣವೇ ಹಕ್ಕುಪತ್ರ ನೀಡಬೇಕು ಮತ್ತು ರೈತರ ಜೀವನಾಡಿಯಾಗಿರುವ ವಿದ್ಯುತ್ ಅನ್ನು ಯಾವುದೇ ಕಾರಣದಿಂದ ಖಾಸಗೀಕರಣ ಮಾಡಬಾರದೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮನವಿಯಲ್ಲಿ ಎಚ್ಚರಿಸಿದೆ.

> ಕೇಂದ್ರ ಮತ್ತು ರಾಜ್ಯ ಸರಕಾರಗಳು ಚುನಾವಣೆಯಲ್ಲಿ ರೈತರಿಗೆ ಕೊಟ್ಟ ಭರವಸೆಯನ್ನು ಸಂಪೂರ್ಣವಾಗಿ ಮರೆತಿವೆ. ಎರಡು ಸರಕಾರಗಳು ಇದ್ದು ರೈತರ ಪಾಲಿಗೆ ಸತ್ತಂತೆ, ರೈತರು ಕಣ್ಣೀರು ಹಾಕುತ್ತಿದ್ದರು ಸರಕಾರ ರೈತರ ಬಗ್ಗೆ ಕಾಳಜಿ ತೋರಿಸುತ್ತಿಲ್ಲ ಇವರು ರೈತರ ಬಗ್ಗೆ ಹೀಗೆ ನಿರ್ಲಕ್ಷ್ಯ ವಹಿಸಿದರೆ ರಾಜ್ಯ ಸಮಿತಿ ಆದೇಶದಂತೆ ದೇಶ ಮತ್ತು ರಾಜ್ಯಗಳಲ್ಲಿ ಉಗ್ರವಾದ ಹೋರಾಟಗಳನ್ನು ಕೈಗೊಳ್ಳಬೇಕಾಗುತ್ತದೆ.
>
> ಎಚ್. ಆರ್. ಬಡಿಗೇರ್ (ರೈತ ಸಂಘದ ಜಿಲ್ಲಾಧ್ಯಕ್ಷರು )


**ಉದಯ ವಾಹಿನಿ ಹೈಲೆಟ್ಸ್**

- ಎಂಟು ತಿಂಗಳಿಂದ ಹರಿಯಾಣದ ಶಂಭುಗಡಿಯಲ್ಲಿ ಸತತ ರೈತರ ಚಳುವಳಿ.
- ರೈತರ ಕಣ್ಣೀರು ಕೊನೆಯಾಗಲಿ ಇಲ್ಲವೇ ನನ್ನ ಉಸಿರು ಕೊನೆಯಾಗಲಿ.. ಜಗತ್ ಸಿಂಗ್
- ರೈತ ನಾಯಕ ಜಗತ್ ಸಿಂಗ್ 46 ದಿನಗಳಿಂದ ಉಪವಾಸ.
- ದೊನ್ಟ್ ಕೇರ್ ಅನ್ನುತ್ತಿರುವ ಕೇಂದ್ರ ಸರ್ಕಾರ.
- ಸರಕಾರದ ವಿರುದ್ಧ ಹಲವಾರು ಕಡೆ ರೈತರು ಗರಂ.

# ಮಾರಣಕಟ್ಟೆ ಬ್ರಹ್ಮಲಿಂಗೇಶ್ವರನ ಜಾತ್ರೆ

## ವಾರ್ಷಿಕ ಜಾತ್ರಾ ಮಹೋತ್ಸವದಲ್ಲಿ ದೇಶ- ವಿದೇಶದಿಂದ ಬಂದಿದ್ದ ಸಾವಿರಾರು ಭಕ್ತರು ದೇವರ ದರ್ಶನ

• **ಉದಯವಾಹಿನಿ ಕುಂದಾಪುರ**


ಉದಯವಾಹಿನಿ ಚಿತ್ರ

ಕರಾವಳಿ, ಮಲೆನಾಡು ಭಾಗದ ಪ್ರಮುಖ ದೇವಸ್ಥಾನಗಳಲ್ಲಿ ಒಂದಾಗಿರುವ, ಆದಿ ಶಂಕರಾಚಾರ್ಯರಿಂದ ಪ್ರತಿಷ್ಠಾಪಿಸಲ್ಪಟ್ಟ ಕ್ಷೇತ್ರ ಎಂಬ ಖ್ಯಾತಿಯ, ತಾಲ್ಲೂಕಿನ ಮಾರಣಕಟ್ಟೆಯ ಬ್ರಹ್ಮಲಿಂಗೇಶ್ವರ ದೇವಸ್ಥಾನದಲ್ಲಿ ಮಂಗಳವಾರ ಜರುಗಿದ ಮಕರ ಸಂಕ್ರಮಣ ಉತ್ಸವ, ವಾರ್ಷಿಕ ಜಾತ್ರಾ ಮಹೋತ್ಸವದಲ್ಲಿ ದೇಶ- ವಿದೇಶದಿಂದ ಬಂದಿದ್ದ ಸಾವಿರಾರು ಭಕ್ತರು ದೇವರ ದರ್ಶನ ಪಡೆದುಕೊಂಡರು.

ಮಕರ ಸಂಕ್ರಮಣದಂದು ನಡೆಯುವ ದೇವಳದ ಉತ್ಸವಕ್ಕೆ ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಯಿಂದ ಬರುವ ಸಾವಿರಾರು ಭಕ್ತರು, ಗಂಟೆಗಳ ಕಾಲ ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು ಮಂಗಳಾರತಿ, ಹೂ ಹಣ್ಣು ಕಾಯಿ ನೆರವೇರಿಸಿ, ಹರಕೆ ಸಲ್ಲಿಸಿ ತೆರಳುವುದು ವಾಡಿಕೆ. 'ತಿಂಗಳುಗಳ ಕಾಲ ನಡೆಯುವ ಮಾರಣಕಟ್ಟೆ ಹಬ್ಬ' ಎಂಬ ಪ್ರತೀತಿ ಹೊಂದಿರುವ ಜಾತ್ರೆಯ ಮೊದಲ ಮೂರು ದಿನ ಕಾಲಿಡಲು ಜಾಗವಿರದಂತೆ ಭಕ್ತರು ಸೇರುತ್ತಾರೆ. ಮುಂಬೈ, ಬೆಂಗಳೂರು, ಗೋವಾ, ಹುಬ್ಬಳ್ಳಿ, ಬೆಳಗಾವಿ, ಪುಣೆ ಸೇರಿದಂತೆ ದೇಶದ ವಿವಿಧ ಭಾಗಗಳಲ್ಲಿ ವಿದೇಶದಲ್ಲಿ ನೆಲೆಸಿರುವ ಕ್ಷೇತ್ರದ ಭಕ್ತರು ಊರಿಗೆ ಮರಳಿ ಉತ್ಸವದಲ್ಲಿ ಭಾಗವಹಿಸುವುದನ್ನು ರೂಢಿಸಿಕೊಂಡಿದ್ದಾರೆ.

ಬೆಳಿಗ್ಗೆ ದೇವಸ್ಥಾನದಲ್ಲಿ ಅರ್ಚಕ ಶಂಕರ ಭಟ್ಟರ ನೇತೃತ್ವದಲ್ಲಿ ಮಂಗಳಾರತಿ, ಇತರ ಧಾರ್ಮಿಕ ವಿಧಿಗಳು ನೆರವೇರಿದವು. 11 ಗಂಟೆಯ ಬಳಿಕ ಭಕ್ತರ ಸಂಖ್ಯೆ ಅಧಿಕವಾಗಿತ್ತು. ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು. ಶಾಸಕ ಗುರುರಾಜ್ ಗಂಟಿಹೊಳೆ, ಮುಖಂಡರಾದ ಕೆ. ಗೋಪಾಲ ಪೂಜಾರಿ, ಬಿ.ಎಂ. ಸುಕುಮಾರ ಶೆಟ್ಟಿ, ದೇವಸ್ಥಾನದ ಆಡಳಿತ ಧರ್ಮದರ್ಶಿ ಸದಾಶಿವ ಶೆಟ್ಟಿ, ನಿವೃತ್ತ ಕೃಷಿ ಅಧಿಕಾರಿ ರಘುರಾಮ್ ಶೆಟ್ಟಿ, ದೇವಸ್ಥಾನದ ವ್ಯವಸ್ಥಾಪಕ ನಾರಾಯಣ ಶೆಟ್ಟಿ, ಹೈದರ್‌ಬಾದ್ ಉದ್ಯಮಿ ಕೃಷ್ಣಮೂರ್ತಿ ಮಂಜರು, ಮುಂಬೈ ಉದ್ಯಮಿ ಸತೀಶ್ ಕೊಠಾರಿ, ಕೊಲ್ಲೂರು ಮೂಕಾಂಬಿಕಾ ದೇವಸ್ಥಾನದ ವ್ಯವಸ್ಥಾಪನಾ ಸಮಿತಿ ಮಾಜಿ ಸದಸ್ಯರಾದ ವಂಡಬಳ್ಳಿ ಜಯರಾಮ ಶೆಟ್ಟಿ, ಡಾ.ಅತುಲ್ ಕುಮಾರ್ ಶೆಟ್ಟಿ, ದೇಗುಲದ ಪಾತ್ರಿಗಳಾದ ಶ್ರೀಧರ ಮಾರ್ಡಿ, ಗಣಪಯ್ಯ ಶೆಟ್ಟಿ, ಹಿಂದಿನ ಧರ್ಮದರ್ಶಿ ಎನ್. ಶಿವರಾಮ್ ಶೆಟ್ಟಿ ಮೊದಲಾದವರು ಭಾಗವಹಿಸಿದ್ದರು.

**ಎಲ್ಲರೂ ಸ್ವಯಂ ಸೇವಕರು:** ಸಾವಿರಾರು ಸಂಖ್ಯೆಯಲ್ಲಿ ಬರುವ ಭಕ್ತರನ್ನು ಸುಧಾರಿಸುವುದು ಸವಾಲಿನ ಕೆಲಸ. ಪೊಲೀಸ್ ಇಲಾಖೆಯೊಂದಿಗೆ ದೇವಳದ ಸಿಬ್ಬಂದಿ, ಭಕ್ತರು ಅಂತಸ್ತು, ಸ್ಥಾನಮಾನ ಮರೆತು ಸ್ವಯಂ ಸೇವಕರಾಗಿ ತೊಡಗಿಸಿಕೊಳ್ಳುತ್ತಾರೆ. ಸರತಿಯಲ್ಲಿ ನಿಲ್ಲಿಸುವುದು, ಅನ್ನಸಂತರ್ಪಣೆ, ಪ್ರಸಾದ ವಿತರಣೆಯಲ್ಲಿ ಸಹಕರಿಸುವುದು, ಭಕ್ತರ ಬೇಡಿಕೆಗಳನ್ನು ಪೂರೈಸುವ ಕಾರ್ಯ ನಿರ್ವಹಿಸುತ್ತಾರೆ.

**ಕೆಂಡ ಸೇವೆ:** ಜಾತ್ರೆಯ ಮೊದಲ ದಿನ (ಮಂಗಳವಾರ) ರಾತ್ರಿ ನಡೆಯುವ ಕೆಂಡ ಸೇವೆಯಲ್ಲಿ ಉಡುಪಿ, ಕುಂದಾಪುರ, ಬೈಂದೂರು, ಕಾರ್ಕಳ, ಬ್ರಹ್ಮಾವರ, ಪಡುಬಿದ್ರಿ, ಮುಲ್ಕಿ ಭಾಗಗಳಿಂದ ಬಂದಿದ್ದ ಭಕ್ತರು ಕೆಂಡದ ರಾಶಿ ತುಳಿಯುವ ಹರಕೆ ತೀರಿಸಿದರು. ಮಹಿಳೆಯರು ಅಧಿಕ ಸಂಖ್ಯೆಯಲ್ಲಿ ಕೆಂಡಸೇವೆಯಲ್ಲಿ ಭಾಗಿಯಾಗುವುದು ಇಲ್ಲಿನ ವಿಶೇಷ. ಇದೇ 15ರಂದು (ಬುಧವಾರ) ಮತ್ತು 16ರಂದು (ಗುರುವಾರ) ಮಂಡಲ ಸೇವೆ, ಯಕ್ಷಗಾನ ಸೇವೆ ನಡೆಯಲಿದೆ. ಮೂರು ದಿನವೂ ಭಕ್ತರಿಗೆ ಪ್ರಸಾದ ರೂಪವಾಗಿ ವಿಶೇಷ ಅನ್ನಸಂತರ್ಪಣೆ ನಡೆಯಲಿದೆ.

ಮುಂಬೈಯಲ್ಲಿ ಕ್ಯಾಟರಿಂಗ್ ಉದ್ಯಮಿಯಾಗಿರುವ ನಾಯ್ಕನಕಟ್ಟೆಯ ಸತೀಶ್ ಕೊಠಾರಿ ಹಲವು ವರ್ಷಗಳಿಂದ ಅನ್ನಸಂತರ್ಪಣೆ ಸೇವೆ ನೀಡುತ್ತಿದ್ದಾರೆ.

> ಹೆಮ್ಮಾಡಿ ಆಸುಪಾಸಿನಲ್ಲಿ ಬೆಳೆಯುವ ಸೇವಂತಿಗೆಗೆ ಬಹು ಬೇಡಿಕೆ. ಹೂವುಗಳನ್ನು ಬ್ರಹ್ಮಲಿಂಗೇಶ್ವರನಿಗೆ ಮೊದಲ ಅರ್ಪಿಸಬೇಕು ಎನ್ನುವ ವಾಡಿಕೆ ಇರುವುದರಿಂದ ಸೇವಂತಿಗೆ ಬೆಳೆದ ಬೆಳೆಗಾರರು ದೇವರಿಗೆ ಸೇವಂತಿಗೆ ಮಾಲೆ ಅರ್ಪಿಸುತ್ತಾರೆ.

> ದೈವದ ಆಕರ್ಷಣೆಯಾಗಿರುವ ಚಿಕ್ಕು ಪಾತ್ರಿಯನ್ನು ಹೊತ್ತುಕೊಂಡು ಮಾರಣಕಟ್ಟೆ ಹೊಳೆ ದಾಟಿಸುತ್ತಿರುವ ಭಕ್ತರು ಹಳದಿ ಸೇವಂತಿಗೆಯ ಘಮ ಮಾರಣಕಟ್ಟೆ ಜಾತ್ರೆಯಲ್ಲಿ ಎತ್ತ ಕಣ್ಣು ಹಾಯಿಸಿದರೂ ಹಳದಿ ಬಣ್ಣದ ಸೇವಂತಿಗೆ ಕಾಣುತ್ತದೆ. ಬ್ರಹ್ಮಲಿಂಗೇಶ್ವರನಿಗೆ ಪ್ರಿಯವಾದ ಸೇವಂತಿಗೆಯನ್ನು ಆತನ ಮುಡಿಗೇರಿಸುವುದುವಾಡಿಕೆ. ಭಕ್ತರು ತಲೆ ಮೇಲೆ ಹಣ್ಣು-ಕಾಯಿ ಸೇವಂತಿಗೆ ಹೂವಿನ ಬುಟ್ಟಿ ಹೊತ್ತು ಗಂಟೆಗಟ್ಟಲೆ ಸರತಿ ಸಾಲಿನಲ್ಲಿ ನಿಂತು ದೇವರಿಗೆ ಅರ್ಪಿಸಿ ಮಂಗಳಾರತಿ ಪಡೆದು ಅರ್ಚಕರಿಂದ ಪ್ರಸಾದ ಸ್ವೀಕರಿಸಿ ಧನ್ಯರಾಗುತ್ತಾರೆ.

# ಜಿಲ್ಲೆಯಾದ್ಯಂತ ಸಡಗರದ ಸಂಕ್ರಾಂತಿ ಹಬ್ಬ

• **ಉದಯವಾಹಿನಿ ಕಲಬುರಗಿ**

ಸೂರ್ಯನು ತನ್ನ ಪಥವನ್ನು ಬದಲಾಯಿಸುವ ಶುಭ ಸಂದರ್ಭದ ಮಕರ ಸಂಕ್ರಾಂತಿಯ ಅಂಗವಾಗಿ ಜಿಲ್ಲೆಯಾದ್ಯಂತ ಜನರು ಪುಣ್ಯ ಸ್ನಾನ ಮಾಡಿ, ಎಳ್ಳು-ಬೆಲ್ಲ (ಕುಸರೆಳ್ಳು) ವಿನಿಮಯ ಮಾಡಿಕೊಂಡು ಮಂಗಳವಾರ ಸಂಭ್ರಮದಿಂದ ಹಬ್ಬವನ್ನು ಆಚರಿಸಿದರು. ಜಿಲ್ಲೆಯ ಭೀಮಾ, ಅಮರ್ಜಾ ನದಿಗಳು ಸಂಗಮಿಸುವ ದತ್ತಾತ್ರೇಯ ದೇವರ ಸನ್ನಿಧಿಯ ಸಂಗಮ ಆಳಂದ ತಾಲ್ಲೂಕಿನ ಅಮರ್ಜಾ ಅಣೆಕಟ್ಟೆ, ಭೀಮಾ ಕಾಗಿಣಾ ನದಿಗಳು ಸಂಗಮಿಸುವ ಚಿತ್ತಾಪುರ ತಾಲ್ಲೂಕಿನ ಸನ್ನತಿ ಹಾಗೂ ಶಹಾಬಾದ್ ತಾಲ್ಲೂಕಿನ ಹೊನಗುಂಟಾ, ಚಿಂಚೋಳಿ ತಾಲ್ಲೂಕಿನ ಚಂದ್ರಂಪಳ್ಳಿ, ಮುಲ್ಲಾಮಾರಿ ಹಾಗೂ ಬೆಣ್ಣೆತೊರಾ ಜಲಾಶಯದಲ್ಲಿ ಭಕ್ತರು ಬೆಳಿಗ್ಗೆಯೇ ಮಿಂದು ಪುಣ್ಯಸ್ನಾನದ ಶಾಸ್ತ್ರ ನೆರವೇರಿಸಿದರು.




ಸಂಕ್ರಾಂತಿ ಹಬ್ಬದ ಅಂಗವಾಗಿ ಸರ್ಕಾರಿ ರಜೆ ಇದ್ದುದರಿಂದ ಜನರು ಹಬ್ಬದ ಸಿದ್ದತೆಯಲ್ಲಿ ತೊಡಗಿಸಿಕೊಂಡಿದ್ದರು. ಬೆಳಿಗ್ಗೆಯೇ ಮೈಗೆಲ್ಲ ಎಳ್ಳು ಹಚ್ಚಿಕೊಂಡು ಸ್ನಾನ ಮಾಡಿದರು. ಹೊಸ ಬಟ್ಟೆ ತೊಟ್ಟು ತಮ್ಮ ಸಂಬಂಧಿಕರು, ಸ್ನೇಹಿತರ ಮನೆಗಳಿಗೆ ತೆರಳಿ ಎಳ್ಳು-ಬೆಲ್ಲದ ಮಿಶ್ರಣದ ಸವಿಯನ್ನು ನೀಡಿ ಪರಸ್ಪರ ಖುಷಿಯಿಂದ ಇರೋಣ ಎಂದು ಹೇಳಿ ಶುಭಾಶಯ ವಿನಿಮಯ ಮಾಡಿಕೊಂಡರು.

ಸಂಕ್ರಾಂತಿ ಹಬ್ಬದ ಅಂಗವಾಗಿ ಸರ್ಕಾರಿ ರಜೆ ಇದ್ದುದರಿಂದ ಜನರು ಹಬ್ಬದ ಸಿದ್ಧತೆಯಲ್ಲಿ ತೊಡಗಿಸಿಕೊಂಡಿದ್ದರು. ಬೆಳಿಗ್ಗೆಯೇ ಮೈಗೆಲ್ಲ ಎಳ್ಳು ಹಚ್ಚಿಕೊಂಡು ಸ್ನಾನ ಮಾಡಿದರು. ಹೊಸ ಬಟ್ಟೆ ತೊಟ್ಟು ತಮ್ಮ ಸಂಬಂಧಿಕರು, ಸ್ನೇಹಿತರ ಮನೆಗಳಿಗೆ ತೆರಳಿ ಎಳ್ಳು-ಬೆಲ್ಲದ ಮಿಶ್ರಣದ ಸವಿಯನ್ನು ನೀಡಿ ಪರಸ್ಪರ ಖುಷಿಯಿಂದ ಇರೋಣ ಎಂದು ಹೇಳಿ ಶುಭಾಶಯ ವಿನಿಮಯ ಮಾಡಿಕೊಂಡರು.

> ಮನೆಯ ಸದಸ್ಯರೊಂದಿಗೆ ಶರಣಬಸವೇಶ್ವರ ದೇವಸ್ಥಾನ ಸೇರಿದಂತೆ ನಗರದ ವಿವಿಧ ಧಾರ್ಮಿಕ ಕೇಂದ್ರಗಳಿಗೆ ತೆರಳಿ ಪೂಜೆ ನೆರವೇರಿಸಿದರು. ಸಜ್ಜಿ ರೊಟ್ಟಿ, ಭಜ್ಜಿ ಪಲ್ಯ, ಜೋಳದ ರೊಟ್ಟಿ, ಎಳ್ಳು ಹಚ್ಚಿ ಮಾಡಿದ ಖಡಕ್ ರೊಟ್ಟಿ, ಶೇಂಗಾ ಹೋಳಿಗೆ, ಕಾಳು ಪಲ್ಯ, ಬರ್ತ ಮತ್ತಿತರ ಖಾದ್ಯಗಳನ್ನು ತಯಾರಿಸಿ ಸವಿದರು.

# ಮಿನಿ ನ್ಯೂಸ್

## ಉದಯವಾಹಿನಿ ಪತ್ರಿಕೆ ದಿನದರ್ಶಿಕೆ ಬಿಡುಗಡೆ


ಉದಯವಾಹಿನಿ ಚಿತ್ರ

ಇಂದು ನಮ್ಮ ಉದಯವಾಹಿನಿ ಪತ್ರಿಕೆ ದಿನದರ್ಶಿಕೆ ಬಿಡುಗಡೆ ಮಾಡಿದ ಭಾರತೀಯ ಬಿಮ್ ಸೇನೆ ರಾಜ್ಯ ಉಪಾಧ್ಯಕ್ಷರಾದ ಪ್ರಕಾಶ ಕಪನೂರ ಅವರು ಈ ಪತ್ರಿಕೆ ಸದಾ ಭ್ರಷ್ಟಾಚಾರದ ವಿರುದ್ಧ ಸುದ್ದಿ ಮಾಡ್ತಾ ಇದೆ ಇನ್ನು ಒಳ್ಳೆಯ ಭವಿಷ್ಯ ಇದೆ ಎಂದು ಶುಭ ಕೋರಿದರು ಈ ಸಂದರ್ಭದಲ್ಲಿ ಸೂರ್ಯವಂಶಿ ಕ್ಷೇತ್ರಿಯ ಯುವ ಮುಖಂಡರಾದ ವಿಜಯಕುಮಾರ್ ಅವರು ಉದಯವಾಹಿನಿ ಸುದ್ದಿ ಒಳ್ಳೆಯ ಕಂಟೆಂಟ್ ಹೊಂದಿದೆ ಇದು ನಮ್ಮ ತಾಲ್ಲೂಕಿಗೂ ಪತ್ರಿಕೆ ಬಂದರೆ ಒಳ್ಳೆಯದು ಎಂದು ತಮ್ಮ ಅಭಿಪ್ರಾಯ ವ್ಯಕ್ತ ಪಡಿಸಿ ಶುಭ ಕೋರಿದರು


ಉದಯವಾಹಿನಿ ಚಿತ್ರ

ಇಂದು ಉದಯವಾಹಿನಿ ದಿನದರ್ಶಿಕೆ ಶುಭ ಕೋರಿದ ಸಂಗಪ್ಪ ಎಚ್ ಜೈನಾಪುರ, ಕಚೇರಿ ಅಧೀಕ್ಷಕರು, ಸಮಾಜ ಕಲ್ಯಾಣ ಇಲಾಖೆ. ಗಂಗಾವತಿ

## ಶಿರೂರು ಬಾಲಲೀಲ ಸಂಗಮೇಶ್ವರ ತೆಪ್ಪೋತ್ಸವ ಸಂಭ್ರಮ

• **ಉದಯವಾಹಿನಿ ನವಲಗುಂದ**

ಮಕರ ಸಂಕ್ರಾಂತಿ ನಿಮಿತ್ತವಾಗಿ ತಾಲ್ಲೂಕಿನ ಶಿರೂರ ಗ್ರಾಮದಲ್ಲಿ ಮಂಗಳವಾರ ಬಾಲಲೀಲ ಸಂಗಮೇಶ್ವರ ತೆಪ್ಪೋತ್ಸವವು ಅಪಾರ ಸಂಖ್ಯೆಯ ಭಕ್ತರ ಹರ್ಷೋದ್ಗಾರಗಳ ಮಧ್ಯ ಸಂಭ್ರಮದಿಂದ ಜರುಗಿತು. ತೆಪ್ಪೋತ್ಸವದ ಅಂಗವಾಗಿ ಸಂಗಮೇಶ್ವರ ದೇವನಿಗೆ ವಿಶೇಷ ಅಲಂಕಾರ ಹಾಗೂ ಪೂಜೆ ಮಾಡಲಾಗಿತ್ತು. ಬೆಳಿಗ್ಗೆ ಮಲಪ್ರಭಾ ಬಲದಂಡೆಯ ಕಾಲುವೆಯಲ್ಲಿ ಪವಿತ್ರ ಸ್ನಾನ ಮಾಡಿದರು. ಸಂಜೆ ನಡೆದ ಬಾಲಲೀಲಾ ಸಂಗಮೇಶ್ವರ ತೆಪೋತ್ಸವದಲ್ಲಿ ಪಾಲ್ಗೊಂಡರು. ತಾವು ತಂದಿದ್ದ ಜೋಳದ ರೊಟ್ಟಿ, ಪಲ್ಯ ಸೇರಿದಂತೆ ವಿವಿಧ ಭೋಜನಗಳನ್ನು ಸವಿದರು. ಗ್ರಾಮದ ಸುತ್ತಮುತ್ತಲಿನ ಆಯಟ್ಟಿ, ಗುಮ್ಮಗೋಳ, ಬ್ಯಾಲ್ಯಾಳ, ಮೊರಬ, ಗರಗ, ಲೋಕೂರು, ಬೆಟಗೇರಿ, ಹಾರೋಬೆಳವಡಿ, ಇನಾಮಹೊಂಗಲ್, ಅಮ್ಮಿನಭಾವಿ ಸೇರಿದಂತೆ ವಿವಿಧ ಊರುಗಳಿಂದ ಆಗಮಿಸಿದ್ದ ಜನರು ತೆಪ್ಪೋತ್ಸವದಲ್ಲಿ ಭಾಗವಹಿಸಿ, ರಾತ್ರಿ ನಡೆದ ನಾಟಕವನ್ನು ವೀಕ್ಷಿಸಿದರು. ಜಾತ್ರಾಮಹೋತ್ಸವ ಅಂಗವಾಗಿ ಸೋಮವಾರ ಶಾಲಾ ಮಕ್ಕಳಿಂದ ರಂಗೋಲಿ ಸ್ಪರ್ಧೆ ನಡೆಯಿತು. ಬುಧವಾರ ಟಗರಿನ ಕಾಳಗ, ಕಲ್ಲು ಎತ್ತುವ ಸ್ಪರ್ಧೆಗಳು ನಡೆಯಲಿವೆ.

## ಬಸವೇಶ್ವರ ಪುತ್ಥಳಿಗೆ ಅಪಮಾನ

• **ಉದಯವಾಹಿನಿ ಬೀದರ್**

ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ದಾಡಗಿ ಕ್ರಾಸ್‌ನಲ್ಲಿ ಬಸವೇಶ್ವರ ಪುತ್ತಳಿಗೆ ಅಪಮಾನಗೊಳಿಸಿರುವುದನ್ನು ಖಂಡಿಸಿ ಗ್ರಾಮಸ್ಥರು ಬುಧವಾರ ಭಾಲ್ಕಿ-ಹುಮನಾಬಾದ್ ರಸ್ತೆ ಬಂದ್ ಮಾಡಿ ಪ್ರತಿಭಟನೆ ನಡೆಸಿದರು. ಬಸವೇಶ್ವರರ ಪುತ್ಥಳಿಯ ಒಂದು ಕೈಮುರಿದು, ಅಲ್ಲಿದ್ದ ಧ್ವಜವನ್ನು ಮಂಗಳವಾರ ರಾತ್ರಿ ಕಿಡಿಗೇಡಿಗಳು ವಿರೂಪಗೊಳಿಸಿದ್ದಾರೆ. ಬುಧವಾರ ಬೆಳಿಗ್ಗೆ ವಿಷಯ ತಿಳಿದ ಗ್ರಾಮಸ್ಥರು ರಸ್ತೆ ತಡೆ ನಡೆಸಿ, ಟೈರ್ ಸುಟ್ಟು ಆಕ್ರೋಶ ಹೊರಹಾಕಿದರು. ಕಿಡಿಗೇಡಿಗಳ ಬಂಧನಕ್ಕೆ ಒತ್ತಾಯಿಸಿದರು. ರಸ್ತೆತಡೆಯಿಂದ ಭಾಲ್ಕಿ-ಹುಮನಾಬಾದ್ ರಸ್ತೆಯಲ್ಲಿ ವಾಹನಗಳು ಸಾಲುಗಟ್ಟಿ ನಿಂತಿದ್ದು ಸಂಚಾರ ಸ್ಥಗಿತಗೊಂಡಿದೆ. ದೈನಂದಿನ ಕೆಲಸಕ್ಕೆ ಹೋಗಬೇಕಿರುವವರು ಪರದಾಟ ನಡೆಸಿದರು.

## ಸ್ವಾಮಿ ವಿವೇಕಾನಂದ ಜಯಂತಿ, ಪರಮಹಂಸೋತ್ಸವ

• **ಉದಯವಾಹಿನಿ ಕೊಪ್ಪ**

ಸ್ವಾಮಿ ವಿವೇಕಾನಂದ ಜಯಂತಿ ಪ್ರಯುಕ್ತ ತಾಲ್ಲೂಕಿನ ಭುವನಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿ ಬೆಳವಿನಕೊಡಿಗೆ ಸಮೀಪದ ಹೊಸಳ್ಳಿಯ ಶ್ರೀನಿವಾಸ್ ಅವರ ಮನೆಯಂಗಳದಲ್ಲಿ 'ಪರಮಹಂಸೋತ್ಸವ' ಕಾರ್ಯಕ್ರಮ ಭಾನುವಾರ ಸಂಪನ್ನಗೊಂಡಿತು. ಶತಚಂಡಿ ಹವನ, ಆಶ್ಲೇಷ ಬಲಿಪೂಜೆ, ದೇವಾತಾರಾಧನೆ, ಗಣಹೋಮ, ಪಂಚಾಕ್ಷರಿ ಹೋಮ, ಲಘುರುದ್ರ ಹೋಮ ನಡೆಯಿತು. ದಾವಣಗೆರೆ, ಚಿತ್ರದುರ್ಗ, ತರೀಕೆರೆ, ಶಿವಮೊಗ್ಗ, ಭದ್ರಾವತಿ ಸೇರಿದಂತೆ ಅಪಾರ ಸಂಖ್ಯೆಯ ಭಕ್ತರು ಭಾಗವಹಿಸಿದರು. 'ಭಾರತದ ಪುನರುತ್ಥಾನದ ಮಹಾಶಕ್ತಿ ಸ್ವಾಮಿ ವಿವೇಕಾನಂದ ಹಾಗೂ ಭಾರತಕ್ಕೆ ಎದುರಾಗಿರುವ ವರ್ತಮಾನದ ಸವಾಲುಗಳು' ಕುರಿತು ಉಪನ್ಯಾಸ ಏರ್ಪಡಿಸಲಾಗಿತ್ತು. ಧಾರ್ಮಿಕ ಕಾರ್ಯಕ್ರಮಗಳನ್ನು ಪ್ರಕಾಶ್ ಭಟ್ ನಡೆಸಿಕೊಟ್ಟರು. ಪ್ರಮುಖರಾದ ನರೇಂದ್ರ ಕುಮಾರ್, ಪೃಥ್ವಿಜಿತ್ ಮತ್ತಿತರರು ಭಾಗವಹಿಸಿದ್ದರು.

## ಲಾರಿಗಳ ಮುಖಾಮುಖಿ ಡಿಕ್ಕಿ ಇಬ್ಬರಿಗೆ ಗಾಯ

• **ಉದಯವಾಹಿನಿ ಲಿಂಗಸುಗೂರು**

ಮುದಗಲ್ ರಸ್ತೆಯಲ್ಲಿ ಕಸಬಾ ಗ್ರಾಮದ ಸಮೀಪ ಎರಡು ಲಾರಿಗಳ ಮಧ್ಯೆ ಸಂಭವಿಸಿದ ರಸ್ತೆ ಅಫಘಾತದಲ್ಲಿ ಲಾರಿ ಚಾಲಕ ಹಾಗೂ ಕ್ಲೀನರ್ ಗಂಭೀರವಾಗಿ ಗಾಯಗೊಂಡಿದ್ದಾರೆ. ಲಾರಿ ಚಾಲಕ ಮುದಗಲ್ ನ ಸೈಯದ್ ಹುಸೇನ್, ಕ್ಲೀನರ್ ಸೈಫ್ ಅವರನ್ನು ಚಿಕಿತ್ಸೆಗಾಗಿ ಲಿಂಗಸುಗೂರು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ದೊಡ್ಡ ಕಂಟೇನರ್ ಅಡ್ಡ ಬಂದ ಕಾರಣ ಭತ್ತ ಸಾಗಿಸುತ್ತಿದ್ದ ಲಾರಿ ಡಿಕ್ಕಿ ಹೊಡೆದಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ. ಅಫಘಾತದಿಂದಾಗಿ ಕೆಲಹೊತ್ತು ಸಂಚಾರ ಸ್ಥಗಿತಗೊಂಡಿತ್ತು. ಸ್ಥಳಕ್ಕೆ ಲಿಂಗಸುಗೂರು ಪೊಲೀಸ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಮೋಹನ್ ಭಾಗವತ್ ವಿರುದ್ಧ ರಾಹುಲ್ ಗಾಂಧಿ ವಾಗ್ದಾಳಿ

## ಬೇರೆ ದೇಶವಾಗಿದ್ದರೆ ಮೋಹನ್ ಭಾಗವತ್ ಇಷ್ಟೊತ್ತಿಗೆ ಜೈಲಿನಲ್ಲಿರುತ್ತಿದ್ದರು; ರಾಹುಲ್ ಗಾಂಧಿ ಕಿಡಿ


**ಹೊಸದಿಲ್ಲಿ:** ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟನೆ ಬಳಿಕ ಭಾರತಕ್ಕೆ ನಿಜವಾದ ಸ್ವಾತಂತ್ರ್ಯ ಸಿಕ್ಕಿದೆ. ಎಂಬ ರಾಷ್ಟ್ರೀಯ ಸ್ವಯಂಸೇವಕ ಸಂಘ(ಆರ್‌ಎಸ್‌ಎಸ್)ದ ಮುಖ್ಯಸ್ಥ ಮೋಹನ್ ಭಾಗವತ್ ಅವರ ಹೇಳಿಕೆಯನ್ನು, ಲೋಕಸಭೆ ವಿಪಕ್ಷ ನಾಯಕ ಹಾಗೂ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ತೀವ್ರವಾಗಿ ಖಂಡಿಸಿದ್ದಾರೆ.

ರಾಷ್ಟ್ರ ರಾಜಧಾನಿ ಹೊಸದಿಲ್ಲಿಯಲ್ಲಿ ಕಾಂಗ್ರೆಸ್ ಪಕ್ಷದ ನೂತನ ಕೇಂದ್ರ ಕಚೇರಿ ಇಂದಿರಾ ಭವನದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ರಾಹುಲ್ ಗಾಂಧಿ, ಇಡೀ ಸ್ವಾತಂತ್ರ್ಯ ಚಳುವಳಿಯನ್ನೇ ಅಮಾನ್ಯ ಮಾಡಿದ ಮೋಹನ್ ಭಾಗವತ್ ಅವರ ಹೇಳಿಕೆ ಅತ್ಯಂತ ಖಂಡನೀಯ ಎಂದು ಗುಡುಗಿದರು.

ಸಂವಿಧಾನವು ನಮ್ಮ ಸ್ವಾತಂತ್ರ್ಯದ ಸಂಕೇತವಲ್ಲ ಎಂಬ ಮೋಹನ್ ಭಾಗವತ್ ಹೇಳಿಕೆ ಅತ್ಯಂತ ಆಘಾತಕಾರಿಯಾಗಿದೆ. ಸ್ವಾತಂತ್ರ್ಯ ಚಳುವಳಿ, ಸಂವಿಧಾನದ ಕುರಿತು ಮೋಹನ್ ಭಾಗವತ್ ದೇಶದ್ರೋಹಿ ಹೇಳಿಕೆ ನೀಡಿದ್ದಾರೆ. ಒಂದು ವೇಳೆ ಮೋಹನ್ ಭಾಗವತ್ ಬೇರೆ ದೇಶದಲ್ಲಿದ್ದರೆ, ಇಷ್ಟೊತ್ತಿಗೆ ಅವರನ್ನು ಬಂಧಿಸಿ ಜೈಲಿಗೆ ತಳ್ಳಿರುತ್ತಿದ್ದರು. ಎಂದು ರಾಹುಲ್ ಗಾಂಧಿ ತೀವ್ರ ವಾಗ್ದಾಳಿ ನಡೆಸಿದರು.

ಮೋಹನ್ ಭಾಗವತ್ ಸ್ವಾತಂತ್ರ್ಯ ಚಳುವಳಿ ಮತ್ತು ಸಂವಿಧಾನದ ಬಗೆಗಿನ ತಮ್ಮ ಅಸಹನೀಯ ಅಭಿಪ್ರಾಯವನ್ನು ದೇಶಕ್ಕೆ ತಿಳಿಸುವ ಧೈರ್ಯ ತೋರಿದ್ದಾರೆ. ವಾಸ್ತವವಾಗಿ ಮೋಹನ್ ಭಾಗವತ್ ದೇಶದ್ರೋಹಿ ಹೇಳಿಕೆ ನೀಡಿದ್ದಾರೆ. ಬೇರೆ ಯಾವುದೇ ದೇಶದಲ್ಲಿ ಅವರನ್ನು ಬಂಧಿಸಿ, ವಿಚಾರಣೆಗೆ ಒಳಪಡಿಸಲಾಗುತ್ತಿತ್ತು.

1947ರಲ್ಲಿ ಭಾರತಕ್ಕೆ ಸ್ವಾತಂತ್ರ್ಯ ಸಿಗಲಿಲ್ಲ ಎಂದು ಹೇಳುವ ಮೂಲಕ, ಮೋಹನ್ ಭಾಗವತ್ ಪ್ರತಿಯೊಬ್ಬ ಭಾರತೀಯ ನಿಗೂ ಅವಮಾನ ಮಾಡಿದ್ದಾರೆ. ಎಂದು ರಾಹುಲ್ ಗಾಂಧಿ ಕಿಡಿಕಾರಿದರು.



ಬ್ರಿಟಿಷರ ವಿರುದ್ಧದ ದೇಶದ ಹೋರಾಟವನ್ನು ಮೋಹನ್ ಭಾಗವತ್ ಕ್ಷಣಮಾತ್ರದಲ್ಲಿ ತಿರಸ್ಕರಿಸಿದ್ದಾರೆ. ಈ ಮೂಲಕ ಲಕ್ಷಾಂತರ ಜನರ ತ್ಯಾಗ-ಬಲಿದಾನವನ್ನು ಮೋಹನ್ ಭಾಗವತ್ ಅಪಮಾನಕ್ಕೀಡು ಮಾಡಿದ್ದಾರೆ. ಮೋಹನ್ ಭಾಗ ವತ್ ಅವರ ದೇಶದ್ರೋಹಿ ಹೇಳಿಕೆಯನ್ನು ಕಾಂಗ್ರೆಸ್ ಪಕ್ಷ ತೀವ್ರವಾಗಿ ಖಂಡಿಸುತ್ತದೆ ಎಂದು ಕಾಂಗ್ರೆಸ್ ನಾಯಕ ಹರಿಹಾಯ್ದರು.

ಹೊಸದಿಲ್ಲಿಯಲ್ಲಿ ಬುಧವಾರ ಉದ್ಘಾಟನೆ ಯಾದ ಕಾಂಗ್ರೆಸ್ ಪಕ್ಷದ ನೂತನ ಕಚೇರಿ ಇಂದಿರಾ ಭವನವು, ಸರಿಯಾದ ಸಮಯದಲ್ಲಿ ಅಸ್ತಿತ್ವಕ್ಕೆ ಬಂದಿದೆ ಎಂಬುದು ನನ್ನ ಭಾವನೆ. ದೇಶ ಒಂದು ಕಡೆ ಕೋಮುವಾದಿಗಳ ಕೈಯಲ್ಲಿ ನರಳುತ್ತಿದ್ದು, ಈ ವಿಷಮ ಪರಿಸ್ಥಿತಿ ಯಲ್ಲಿ ಇಂದಿರಾ ಗಾಂಧಿ ಮತ್ತು ಕಾಂಗ್ರೆಸ್ ಪಕ್ಷದ ನೈಜ ಭಾರತದ ಪರಿಕಲ್ಪನೆಯನ್ನು ಜನರಿಗೆ ಮನವರಿಕೆ ಮಾಡಿಕೊಡಲು ಈ ಕಟ್ಟಡ ಅವಶ್ಯವಾಗಿದೆ ಎಂದು ರಾಹುಲ್ ಗಾಂಧಿ ಇದೇ ವೇಳೆ ಅಭಿಪ್ರಾಯಪಟ್ಟರು.

> **ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟನೆ ಬಳಿಕ ಭಾರತಕ್ಕೆ ನಿಜವಾದ ಸ್ವಾತಂತ್ರ್ಯ ಸಿಕ್ಕಿದೆ.. ಎಂಬ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿಕೆಯನ್ನು, ಲೋಕಸಭೆ ವಿಪಕ್ಷ ನಾಯಕ ಹಾಗೂ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ತೀವ್ರವಾಗಿ ಖಂಡಿಸಿದ್ದಾರೆ. ಸ್ವಾತಂತ್ರ್ಯ ಚಳುವಳಿ ಮತ್ತು ಸಂವಿಧಾನದ ಕುರಿತು ಮೋಹನ್ ಭಾಗವತ್ ದೇಶದ್ರೋಹಿ ಹೇಳಿಕೆ ನೀಡಿದ್ದಾರೆ ಎಂದಿರು ರಾಹುಲ್ ಗಾಂಧಿ, ಒಂದು ವೇಳೆ ಮೋಹನ್ ಭಾಗವತ್ ಬೇರೆ ದೇಶದಲ್ಲಿದ್ದರೆ, ಇಷ್ಟೊತ್ತಿಗೆ ಅವರನ್ನು ಬಂಧಿಸಿ ಜೈಲಿಗೆ ತಳ್ಳಿರುತ್ತಿದ್ದರು**
> **-ರಾಹುಲ್ ಗಾಂಧಿ, ಕಾಂಗ್ರೆಸ್ ಸಂಸದ**


- 1947ರಲ್ಲಿ ನಿಜವಾದ ಸ್ವಾತಂತ್ರ್ಯ ಸಿಕ್ಕಿಲ್ಲ ಎಂದಿದ್ದ ಆರ್‌ಎಸ್‌ಎಸ್ ಮುಖ್ಯಸ್ಥ
- ಭಾಗವತ್ ದೇಶದ್ರೋಹಿ ಹೇಳಿಕೆ ನೀಡಿದ್ದಾರೆ ಎಂದ ರಾಹುಲ್ ಗಾಂಧಿ
- ಕಾಂಗ್ರೆಸ್ ಕಚೇರಿ ಉದ್ಘಾಟನೆಯಲ್ಲಿ ರಾಹುಲ್ ಗಾಂಧಿ ಭಾಷಣ

ಇನ್ನು ಬಿಜೆಪಿ, ಆರ್‌ಎಸ್‌ಎಸ್ ದೇಶದ ಎಲ್ಲಾ ಸಾಂವಿಧಾನಿಕ ಸಂಸ್ಥೆಗಳ ಮೇಲೆ ದಾಳಿ ಮಾಡುತ್ತಿದೆ ಎಂದು ಆರೋಪಿಸಿರುವ ರಾಹುಲ್ ಗಾಂಧಿ, ಬಿಜೆಪಿ, ಆರ್‌ಎಸ್‌ಎಸ್ ಜೊತೆಗೆ ನಾವು ಇದೀಗ ಆರ್‌ಎಸ್‌ಎಸ್ ಪ್ರಭಾವ ಇರುವ ಭಾರತದ ರಾಜ್ಯ ವ್ಯವಸ್ಥೆ ವಿರುದ್ಧವೂ ಹೋರಾಟ ಮಾಡಬೇಕಾದ ಅನಿವಾರ್ಯತೆ ಎದುರಾಗಿದೆ ಎಂದು ಹೇಳುವ ಮೂಲಕ ಹೊಸದೊಂದು ವಿವಾದಕ್ಕೆ ನಾಂದಿ ಹಾಡಿದ್ದಾರೆ.

# ಕುಂಭಮೇಳದ ಕುರಿತು ಸ್ಟೀವ್ ಜಾಬ್ಸ್ ಬರೆದ ಪತ್ರ 4.32 ಕೋಟಿ ರೂ.ಗೆ ಹರಾಜು

**ಅಮೆರಿಕ:** ಆ್ಯಯಪಲ್ ಸಹ ಸಂಸ್ಥಾಪಕ ಸ್ಟೀವ್ ಜಾಬ್ಸ್ ಅವರು ಕುಂಭಮೇಳದ ಕುರಿತು ಬರೆದ ಪತ್ರವು 4.32 ಕೋಟಿ ರೂ.ಗೆ ಹರಾಜು ಆಗಿದೆ. ಜಾಬ್ಸ್ ಹಸ್ತಾಕ್ಷರದಲ್ಲಿ ಇರುವ ಪತ್ರವನ್ನು ಅವರು 19ನೇ ಜನ್ಮದಿನದಂದು ಬರೆದಿದ್ದರು. ಜಾಬ್ಸ್ ಅವರು ತಮ್ಮ ಮಿತ್ರ ಟಿಮ್ ಬ್ರೌನ್‌ಗೆ ಉದ್ದೇಶಿಸಿ ಬರೆದಿದ್ದಾರೆ. ಝೆನ್ ಬೌದ್ಧಿಸಮ್ ಹಾಗೂ ಭಾರತದ ಕುಂಭ ಮೇಳಕ್ಕೆ ಭೇಟಿ ನೀಡುವ ತಮ್ಮ ಕನಸನ್ನು ಪತ್ರದಲ್ಲಿ ಜಾಬ್ಸ್ ಹಂಚಿಕೊಂಡಿದ್ದಾರೆ.

ಸುಮಾರು 51 ವರ್ಷಗಳ ಹಿಂದೆ 1974 ಸ್ಟೀವ್ ಜಾಬ್ಸ್ ಭಾರತದಲ್ಲಿ ನಡೆಯುವ ಮೇಳದಲ್ಲಿ ಪಾಲ್ಗೊಳ್ಳಲು ಬಯಸಿದ್ದರು. ಅವರು ತಮ್ಮ ಇಚ್ಛೆಯನ್ನು ಬಾಲ್ಯದ ಗೆಳೆಯ ಟಿಮ್ ಬ್ರೌನ್‌ಗೆ ಬರೆದ ಪತ್ರದಲ್ಲಿ ವ್ಯಕ್ತಪಡಿಸಿದ್ದಾರೆ. ನಾನು ಏಪ್ರಿಲ್‌ನಲ್ಲಿ ಪ್ರಾರಂಭವಾಗುವ ಕುಂಭಮೇಳಕ್ಕೆ ಭಾರತಕ್ಕೆ ಹೋಗಲು ಬಯಸುತ್ತೇನೆ. ಇದಕ್ಕಾಗಿ ಮಾರ್ಚ್‌ನಲ್ಲಿ ಹೊರಡುತ್ತೇನೆ, ಈ ಬಗ್ಗೆ ಇನ್ನೂ ಖಚಿತವಾಗಿಲ್ಲ ಎಂದು ಅವರು ಪತ್ರದಲ್ಲಿ ಬರೆದಿದ್ದಾರೆ. ಪ್ರಯಾಗ್‌ರಾಜ್‌ನಲ್ಲಿ ಮಹಾಕುಂಭಮೇಳ ನಡೆಯುತ್ತಿರುವ ಹೊತ್ತಿನಲ್ಲಿ ಲಾರೆನ್ ಪೊವೆಲ್, ಪತಿ ಸ್ಟೀವ್ ಜಾಬ್ಸ್ ಅವರ ಕನಸನ್ನು ನನಸು ಮಾಡಿದ್ದಾರೆ. ಮಹಾ ಕುಂಭ ಮೇಳದಲ್ಲಿ ಪಾಲ್ಗೊಂಡು ಗಂಗಾ ನದಿಯಲ್ಲಿ ಮಿಂದೆದ್ದಿದ್ದಾರೆ. ಪ್ರಯಾಗ್‌ರಾಜ್‌ಗೆ ಆಗಮಿಸುವ ಮುನ್ನ ಅವರು ಕಾಶಿ ವಿಶ್ವನಾಥನ ದರ್ಶನ ಪಡೆದರು. 40 ಸದಸ್ಯರ ತಂಡದೊಂದಿಗೆ ಕುಂಭ ಮೇಳಕ್ಕೆ ಆಗಮಿಸಿರುವ ಜಾಬ್ಸ್ ಪತ್ನಿ ಲಾರೆನ್ ಅವರು ಕುಂಭ ಮೇಳ ವೀಕ್ಷಿಸುವ ಜತೆಗೆ ಪ್ರಾಣಾಯಾಮ, ಯೋಗಾಭ್ಯಾಸಗಳನ್ನು ಕಲಿಯುತ್ತಿದ್ದಾರೆ.




### ಕುಂಭ ಮೇಳಕ್ಕೆ ಭೇಟಿ ಕನಸು

**ಆ್ಯಪಲ್ ಸಹ ಸಂಸ್ಥಾಪಕ ಸ್ಟೀವ್ ಜಾಬ್ಸ್ ಅವರು ಕುಂಭಮೇಳದ ಕುರಿತು ಬರೆದ ಪತ್ರವು 4.32 ಕೋಟಿ ರೂ.ಗೆ ಹರಾಜು ಆಗಿದೆ. ಜಾಬ್ಸ್ ಹಸ್ತಾಕ್ಷರದಲ್ಲಿ ಇರುವ ಪತ್ರವನ್ನು ಅವರು 19ನೇ ಜನ್ಮದಿನದಂದು ಬರೆದಿದ್ದರು. ಜಾಬ್ಸ್ ಅವರು ತಮ್ಮ ಮಿತ್ರ ಟಿಮ್ ಬ್ರೌನ್‌ಗೆ ಉದ್ದೇಶಿಸಿ ಬರೆದಿದ್ದಾರೆ. ಝೆನ್ ಬೌದ್ಧಿಸಮ್ ಹಾಗೂ ಭಾರತದ ಕುಂಭ ಮೇಳಕ್ಕೆ ಭೇಟಿ ನೀಡುವ ತಮ್ಮ ಕನಸನ್ನು ಪತ್ರದಲ್ಲಿ ಜಾಬ್ಸ್ ಹಂಚಿಕೊಂಡಿದ್ದಾರೆ. ಸುಮಾರು 51 ವರ್ಷಗಳ ಹಿಂದೆ 1974 ಸ್ಟೀವ್ ಜಾಬ್ಸ್ ಭಾರತದಲ್ಲಿ ನಡೆಯುವ ಮೇಳದಲ್ಲಿ ಪಾಲ್ಗೊಳ್ಳಲು ಬಯಸಿದ್ದರು.**

# ಮಾಗಿ ಚಳಿಯಲ್ಲೂ ಪವಿತ್ರ ಸ್ನಾನ ಮಾಡಿದ ಭಕ್ತವೃಂದ

**ಮಹಾಕುಂಭ ನಗರ:** ಮೈ ಕೊರೆಯುವ ಚಳಿಯಲ್ಲೂ ಭಕ್ತರು ತ್ರಿವೇಣಿ ಸಂಗಮದಲ್ಲಿಂದು ಮಹಾಕುಂಭದಲ್ಲಿ ಪವಿತ್ರ ಸ್ನಾನ ಮಾಡಿ ಗಮನ ಸೆಳೆದರು. ಭಕ್ತರು ಅಸ್ಥಿ ತಣ್ಣಗಾಗುವ ನೀರಿನಲ್ಲಿ ಸ್ನಾನ ಮಾಡುವಾಗ ಹರ ಹರ ಮಹಾದೇವ್, ಜೈ ಶ್ರೀ ರಾಮ್, ಜೈ ಗಂಗಾ ಮೈಯ್ಯ ಎಂಬ ಘೋಷಣೆಗಳು ಕೂಗಿದರು. ನಾನು ಮೊದಲ ಬಾರಿಗೆ ಸಂಗಮದಲ್ಲಿ ಸ್ನಾನ ಮಾಡಿದೆ. ಸ್ನಾನ ಮಾಡಿದ ನಂತರ ನಾನು ನಿಜವಾಗಿಯೂ ಉಲ್ಲಾಸ ಅನುಭವಿಸಿದೆ ಎಂದು ಉತ್ತರ ಪ್ರದೇಶದ ಬಸ್ತಿ ಜಿಲ್ಲೆಯ ನಿವಾಸಿ ನಿಬಾರ್ ಚೌಧರಿ ಹೇಳಿದರು.

62 ವರ್ಷದ ಅವರು ಇಬ್ಬರು ಸಹಾಯಕ ರೊಂದಿಗೆ ಪವಿತ್ರ ಸ್ನಾನ ಮಾಡಿದರು. ಚೌಧರಿ ಅವರ ಜೊತೆಗಿದ್ದ ಶಿವರಾಮ್ ವರ್ಮಾರ್ ಅವರು ಈ ಅನುಭವ ಉತ್ತಮವಾಗಿದೆ ಎಂದು ಹೇಳಿದರು, ಇಲ್ಲಿನ ಆಡಳಿತವು ಭಕ್ತರಿಗೆ ಸೂಕ್ತ ವ್ಯವಸ್ಥೆ ಮಾಡಿದೆ ಎಂದರು. ಮೊದಲ ಬಾರಿಗೆ ಇಲ್ಲಿಗೆ ಬಂದಿರುವ ಲಕ್ನೋ ನಿವಾಸಿ ನ್ಯಾನ್ಸಿ ಇದೇ ರೀತಿಯ ಭಾವನೆಗಳನ್ನು ಪ್ರತಿಧ್ವನಿಸಿದರು. ಮಹಾ ಕುಂಭದಲ್ಲಿ ನನ್ನ ಅನುಭವವು ಇಲ್ಲಿಯವರೆಗೆ ಉತ್ತಮವಾಗಿದೆ ಎಂದು ಅವರು ಹೇಳಿದರು. ನೆರೆಯ ಫತೇಪುರ್ ಜಿಲ್ಲೆಯ ನಿವಾಸಿ ಅಭಿಷೇಕ್, ಒಟ್ಟಾರೆ ಅನುಭವ ಉತ್ತಮವಾಗಿದೆ ಮತ್ತು ಯಾವುದೇ ಸಮಸ್ಯೆಗಳನ್ನು ಎದುರಿಸಲಿಲ್ಲ ಎಂದು ಹೇಳಿದರು. ಕಾನ್ಪುರದ ನಿವಾಸಿ ವಿಜಯ್ ಕಥೇರಿಯಾ ಅವರು ಮಹಾಕುಂಭದಲ್ಲಿ ಭದ್ರತಾ ವ್ಯವಸ್ಥೆಗಳನ್ನು ಶ್ಲಾಘಿಸಿದರು. ನನ್ನ ಅನುಭವ ಉತ್ತಮವಾಗಿತ್ತು. ಭಕ್ತರಿಗೆ ಸೂಕ್ತ ಸುರಕ್ಷತಾ ವ್ಯವಸ್ಥೆಗಳನ್ನು ಮಾಡಲಾಗಿದೆ ಮತ್ತು ಭದ್ರತೆಯ ದಷ್ಟಿಯಿಂದ ಸಾಕಷ್ಟು ಪೊಲೀಸ್ ಪಡೆಯನ್ನು ನಿರ್ವಹಿಸಲಾಗಿದೆ ಎಂದು ಅವರು ಹೇಳಿದರು.



# ಗುಂಡು ಹಾರಿಸಿ ಬಿಷ್ಣೋಯಿ-ಬ್ರಾರ್ ಗ್ಯಾಂಗ್‌ನ ಇಬ್ಬರನ್ನು ಬಂಧಿಸಿದ ಪೊಲೀಸರು

**ಚಂಡೀಗಢ:** ಲಾರೆನ್ಸ್ ಬಿಷ್ಣೋಯಿ ಹಾಗೂ ಗೋಲ್ಡಿ ಬ್ರಾರ್ ಗ್ಯಾಂಗ್‌ನ ಇಬ್ಬರು ಸದಸ್ಯರನ್ನು ಗುಂಡು ಹಾರಿಸಿ ಬಂಧಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಬುಧವಾರ ತಿಳಿಸಿದ್ದಾರೆ. ಜಲಂಧರ್‌ನಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ಅವರನ್ನು ಬಂಧಿಸಲಾಗಿದೆ. ಪೊಲೀಸರ ಮೇಲೆ ಆರೋಪಿ ಗುಂಡಿನ ದಾಳಿ ನಡೆಸಿದ್ದು, ಇದಕ್ಕೆ ಪ್ರತಿಯಾಗಿ ಪೊಲೀಸರು ಗುಂಡು ಹಾರಿಸಿದ್ದಾರೆ. ಘಟನೆಯಲ್ಲಿ ಓರ್ವನಿಗೆ ಗುಂಡಿನಿಂದ ತರಚಿದ ಗಾಯಗಳಾಗಿವೆ ಎಂದು ಪೊಲೀಸ್ ಅಧಿಕಾರಿ ಹೇಳಿದ್ದಾರೆ.

'ಪ್ರಮುಖವಾದ ಬೆಳವಣಿಗೆಯೊಂದರಲ್ಲಿ, ಜಲಂಧರ್ ಕಮೀಷನರೇಟ್ ಪೊಲೀಸರು, ಲಾರೆನ್ಸ್ ಬಿಷ್ಣೋಯಿ- ಗೋಲ್ಡಿ ಬ್ರಾರ್ ಗ್ಯಾಂಗ್‌ನ ಇಬ್ಬರು ಸದಸ್ಯರನ್ನು ಬಂಧಿಸಿದ್ದಾರೆ. ಅವರನ್ನು ಬೆನ್ನತ್ತಿದ್ದು, ಗ್ಯಾಂಗ್‌ನ ಸದಸ್ಯರು ಗುಂಡಿನ ದಾಳಿ ಮಾಡಿದಾಗ, ಸ್ವಯಂ ರಕ್ಷಣೆಗೆ ಪೊಲೀಸರು ಗುಂಡು ಹಾರಿಸಿದ್ದಾರೆ ಎಂದು ಪೊಲೀಸ್ ಮಹಾನಿರ್ದೇಶಕ ಗೌರವ್ ಯಾದವ್ ಎಕ್ಸ್‌ನಲ್ಲಿ ತಿಳಿಸಿದ್ದಾರೆ.



ಓರ್ವ ಆರೋಪಿಗೆ ಗುಂಡಿನ ಗಾಯಗಳಾಗಿದ್ದು, ಅವನಿಗೆ ಚಿಕಿತ್ಸೆ ನಡೆಯುತ್ತಿದೆ. ಇನ್ನೊಬ್ಬ ತಪ್ಪಿಸಿಕೊಳ್ಳಲು ಯತ್ನಿಸಿದ್ದು, ಬಂಧಿಸಲಾಗಿದೆ ಎಂದು ಯಾದವ್ ಮಾಹಿತಿ ನೀಡಿದ್ದಾರೆ. ನಾಲ್ಕು ಆಯುಧಗಳು ಹಾಗೂ ಜೀವಂತ ಗುಂಡುಗಳನ್ನು ಅವರಿಂದ ವಶಕ್ಕೆ ಪಡೆಯಲಾಗಿದೆ ಎಂದು ಅವರು ಹೇಳಿದ್ದಾರೆ. ಇದು ಮಾದಕ ದ್ರವ್ಯ ಕಳ್ಳಸಾಗಣೆ, ಶಸ್ತ್ರಾಸ್ತ್ರ ವ್ಯಾಪಾರ ಮತ್ತು ಸುಲಿಗೆ ದಂಧೆಗಳಲ್ಲಿ ತೊಡಗಿರುವ ಗ್ಯಾಂಗ್‌ನ ಅಪರಾಧ ಜಾಲಕ್ಕೆ ತೀವ್ರ ಹೊಡೆತವನ್ನು ನೀಡಿದೆಎಂದು ಡಿಜಿಪಿ ಹೇಳಿದ್ದಾರೆ.

# 3 ಅತ್ಯಾಧುನಿಕ ಯುದ್ಧನೌಕೆಗಳನ್ನು ನೌಕಾಪಡೆಗೆ ಹಸ್ತಾಂತರಿಸಿದ ಪ್ರಧಾನಿ ಮೋದಿ

**ಮುಂಬೈ:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬುಧವ ಮುಂಬೈ ನೌಕಾ ನೆಲೆಯಲ್ಲಿ ಐಎನ್‌ಎಸ್ ಸೂರತ್, ಐಎನ್‌ಎಸ್ ನೀಲಗಿರಿ ಹಾಗೂ ಐಎನ್‌ಎಸ್ ವಾಘ್ಶೀರ್ ಯುದ್ಧ ನೌಕೆಗಳನ್ನು ನೌಕಾಪಡೆಗಳಿಗೆ ಹಸ್ತಾಂತರಿಸಿದರು. ಇದರೊಂದಿಗೆ ಸಮುದ್ರದಲ್ಲಿ ಭಾರತೀಯ ನೌಕಾಪಡೆಯ ಬಲ ಹೆಚ್ಚಾಗಿದೆ. ಇನ್ನು ಮುಂದೆ ಶತ್ರುಗಳು ಭಾರತದ ಬಗ್ಗೆ ಯೋಚನೆ ಮಾಡುವಾಗ ಹತ್ತು ಬಾರಿ ಆಲೋಚಿಸುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ಯುದ್ಧನೌಕೆಗಳು ಮತ್ತು ಜಲಾಂತರ್ಗಾಮಿ ನೌಕೆಗಳಲ್ಲಿ ಮಹಿಳಾ ಅಧಿಕಾರಿಗಳಿಗೆ ವಿಶೇಷ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಭಾರತೀಯ ನೌಕಾಪಡೆಯಲ್ಲಿ ಸಮಾನತೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಇದು ಪ್ರಮುಖ ಹೆಜ್ಜೆಯಾಗಿದೆ. ಈ ಹಂತವು ಭಾರತೀಯ ನೌಕಾಪಡೆಯಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಉತ್ತೇಜಿಸುತ್ತದೆ. ಐಎನ್‌ಎಸ್ ಸೂರತ್, ಐಎನ್‌ಎಸ್ ನೀಲಗಿರಿ ಮತ್ತು ಐಎನ್‌ಎಸ್ ವಾಘಶೀರ್‌ಗಳ ಸೇರ್ಪಡೆಯು ಭಾರತೀಯ ನೌಕಾಪಡೆಯ ಕಾರ್ಯತಂತ್ರದ ಬಲವನ್ನು ಗಮನಾರ್ಹವಾಗಿ ಹೆಚ್ಚಿಸುತ್ತದೆ. ಐಎನ್‌ಎಸ್ ಸೂರತ್ ಪಿ15ಬಿಗೈಡೆಡ್ ಮಿಸೈಲ್ ಡೆಸ್ಟ್ರಾಯರ್ ಪ್ರಾಜೆಕ್ಟ್‌ನ ನಾಲ್ಕನೇ ಮತ್ತು ಕೊನೆಯ ಹಡಗು. ಇದು ವಿಶ್ವದ ಅತಿದೊಡ್ಡ ಮತ್ತು ಆಧುನಿಕ ವಿಧ್ವಂಸಕಗಳಲ್ಲಿ ಒಂದಾಗಿದೆ.




ಇದು ಅತ್ಯಾಧುನಿಕ ಶಸ್ತ್ರಾಸ್ತ್ರಗಳು, ಸಂವೇದಕ ವ್ಯವಸ್ಥೆಗಳನ್ನು ಹೊಂದಿದೆ. ಇದು ಚೇತಕ್, ಎಎಲ್‌ಎಚ್, ಸೀ ಕಿಂಗ್, ಹೊಸ ಎಂಎಚ್-60 ಆರ್ ಸೇರಿದಂತೆ ವಿವಿಧ ಹೆಲಿಕಾಪ್ಟರ್‌ಗಳನ್ನು ನಿರ್ವಹಿಸಬಲ್ಲದು. ಐಎನ್‌ಎಸ್ ನೀಲಗಿರಿ ಪಿ17ಬಿ ಸ್ಟೆಲ್ತ್ ಫ್ರಿಗೇಟ್ ಯೋಜನೆಯ ಮೊದಲ ಹಡಗು. ಇದನ್ನು ಭಾರತೀಯ ನೌಕಾಪಡೆಯ ಯುದ್ಧನೌಕೆ ವಿನ್ಯಾಸ ಬ್ಯೂರೋ ವಿನ್ಯಾಸಗೊಳಿಸಿದೆ. ಇದು ಎಂಟು ಬ್ರಹೋಸ್ ಸೂಪರ್‌ಸಾನಿಕ್ ಕ್ರೂಸ್ ಕ್ಷಿಪಣಿಗಳನ್ನು ಒಳಗೊಂಡಂತೆ ಸುಧಾರಿತ ಶಸ್ತ್ರಾಸ್ತ್ರಗಳು ಮತ್ತು ವ್ಯವಸ್ಥೆಗಳನ್ನು ಹೊಂದಿದೆ. 8 ಸೆಪ್ಟೆಂಬರ್ 2019 ರಂದು ಪ್ರಾರಂಭಿಸಲಾಯಿತು.

ಇದು 6,670 ಟನ್ ತೂಕ ಮತ್ತು 149 ಮೀಟರ್ ಉದ್ದವಿದೆ. ಐಎನ್‌ಎಸ್ ವಾಘಶೀರ್ ಪಿ75 ಸ್ಕಾರ್ಪೀನ್ ಯೋಜನೆಯ ಆರನೇ ಮತ್ತು ಕೊನೆಯ ಜಲಾಂತರ್ಗಾಮಿಯಾಗಿದೆ. ಇದು ಜಲಾಂತರ್ಗಾಮಿ ನಿರ್ಮಾಣದಲ್ಲಿ ಭಾರತದ ಬೆಳೆಯುತ್ತಿರುವ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ. ಇದನ್ನು ಫ್ರಾನ್ಸ್‌ನ ನೇವಲ್ ಗ್ರೂಪ್ನ ಸಹಯೋಗದೊಂದಿಗೆ ನಿರ್ಮಿಸಲಾಗಿದೆ. ಈ ಜಲಾಂತರ್ಗಾಮಿ ಭಾರತೀಯ ನೌಕಾಪಡೆಯ ಬಲವನ್ನು ಗಣನೀಯವಾಗಿ ಹೆಚ್ಚಿಸಲಿದೆ. ಇದು 67 ಮೀಟರ್ ಉದ್ದ ಮತ್ತು 1,550 ಟನ್ ಇದೆ.

# ದೆಹಲಿ ಚುನಾವಣೆ ಸಂದರ್ಭದಲ್ಲೇ ಕೇಜ್ರಿವಾಲ್‌ಗೆ ಸಂಕಷ್ಟ

**ನವದೆಹಲಿ:** ದೆಹಲಿ ಮದ್ಯ ನೀತಿ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಆಮ್ ಆದಿ ಪಕ್ಷದ (ಎಎಪಿ) ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಅವರನ್ನು ವಿಚಾರಣೆಗೆ ಒಳ ಪಡಿಸಲು ಕೇಂದ್ರ ಗೃಹ ಸಚಿವಾಲಯವು, ಜಾರಿ ನಿರ್ದೇಶನಾಲಯಕ್ಕೆ (ಇಡಿ) ಅನುಮೋದನೆ ನೀಡಿದೆ. ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿಕೆ ಸಕ್ಸೇನಾ ಅವರು ದೆಹಲಿಯ ಮಾಜಿ ಮುಖ್ಯಮಂತ್ರಿಯನ್ನು ಪ್ರಕರಣದಲ್ಲಿ ವಿಚಾರಣೆಗೆ ಒಳಪಡಿಸಲು ಒಪ್ಪಿಗೆ ನೀಡಿದ ನಂತರ ಗೃಹ ಇಲಾಖೆಯಿಂದ ಈ ನಿರ್ಧಾರವು ಬಂದಿದೆ. ಕಳೆದ ನವೆಂಬರ್‌ನಲ್ಲಿ ನೀಡಿದ ಆದೇಶದಲ್ಲಿ, ಸಾರ್ವಜನಿಕ ಸೇವಕರನ್ನು ವಿಚಾರಣೆಗೆ ಒಳಪಡಿಸುವ ಮೊದಲು ಇಡಿ ಪೂರ್ವಾನುಮತಿ ತೆಗೆದುಕೊಳ್ಳಬೇಕು ಎಂದು ಸುಪ್ರೀಂ ಕೋರ್ಟ್ ಹೇಳಿತ್ತು.



ಮತ್ತೊಂದೆಡೆ ಫೆ.5 ರಂದು ದೆಹಲಿಯಲ್ಲಿ ಮತದಾನ ನಡೆಯುತ್ತಿರುವ ಸಂದರ್ಭದಲ್ಲೇ ಅರವಿಂದ್ ಕೇಜ್ರಿವಾಲ್ ಬಗ್ಗೆ ಈ ಸುದ್ದಿ ಹೊರಬಿದ್ದಿದೆ. ಕೇಜ್ರಿವಾಲ್ ವಿರುದ್ಧ ಆರೋಪಗಳನ್ನು ಸಾಬೀತುಪಡಿಸಿದ ನಂತರ ವಿಚಾರಣೆಗಳು ಪ್ರಾರಂಭವಾಗಬಹುದು, ಇದರಿಂದಾಗಿ ಅವರು ದೆಹಲಿ ಸಿಎಂ ಆಗಿ ಮರಳಲು ಹೆಚ್ಚು ಕಷ್ಟವಾಗುತ್ತದೆ ಎಂದು ಹೇಳಲಾಗುತ್ತಿದೆ. ದೆಹಲಿ ಮದ್ಯ ಪ್ರಕರಣದಲ್ಲಿ ಸಿಬಿಐ ಅರವಿಂದ್ ಕೇಜ್ರಿವಾಲ್ ವಿರುದ್ಧ ಭ್ರಷ್ಟಾಚಾರ ತಡೆ ಕಾಯ್ದೆಯಡಿ ಚಾರ್ಜ್‌ಶೀಟ್ ಸಲ್ಲಿಸಿತ್ತು. ಈ ಪ್ರಕರಣದಲ್ಲಿ ಸಿಬಿಐ ಕಳೆದ ವರ್ಷ ಆಗಸ್ಟ್‌ನಲ್ಲಿ ಅಗತ್ಯ ಅನುಮೋದನೆಯನ್ನು ಪಡೆದಿತ್ತು.

ಆದಾಗ್ಯೂ ಇಡಿಗೆ ಇನ್ನೂ ಅನುಮೋದನೆ ಸಿಕ್ಕಿರಲಿಲ್ಲ. ಆದರೆ ಈಗ ಗೃಹ ಸಚಿವಾಲಯವೇ ಕ್ರಮ ಕೈಗೊಳ್ಳಲು ಅನುಮತಿ ನೀಡಿದೆ. ದೆಹಲಿ ಮದ್ಯ ಹಗರಣ ಪ್ರಕರಣದಲ್ಲಿ, ಅರವಿಂದ್ ಕೇಜ್ರಿವಾಲ್ ಮತ್ತು ಆಮ್ ಆದಿ ಪಕ್ಷ (ಎಎಪಿ) ಸೌತ್ ಗ್ರೂಪ್‌ನಿಂದ ಲಂಚ ಪಡೆದ ಆರೋಪ ಹೊರಿಸಲಾಗಿದೆ. ಈ ಗುಂಪು ರಾಷ್ಟ್ರ ರಾಜಧಾನಿಯಲ್ಲಿ ಮದ್ಯ ಮಾರಾಟ ಮತ್ತು ವಿತರಣೆಯನ್ನು ನಿಯಂತ್ರಿಸುತ್ತಿತ್ತು. 2021-22ಕ್ಕೆ ದೆಹಲಿಯ ಎಎಪಿ ಸರ್ಕಾರ ರೂಪಿಸಿದ ಅಬಕಾರಿ ನೀತಿಯಿಂದ ಈ ಗುಂಪು ಲಾಭ ಪಡೆದಿದೆ ಎಂದು ಆರೋಪಿಸಲಾಗಿದೆ.

ಅದೇ ಸಮಯದಲ್ಲಿ, ಪಿಎಂಎಲ್‌ಎ ಅಡಿಯಲ್ಲಿ ಆರೋಪಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಲು ಇಡಿಗೆ ಸಕ್ಷಮ ಪ್ರಾಧಿಕಾರದಿಂದ ವಿಶೇಷ ಅನುಮೋದನೆ ಅಗತ್ಯವಿದೆ ಎಂದು ಸುಪ್ರೀಂ ಕೋರ್ಟ್ ನವೆಂಬರ್‌ನ ಆದೇಶದಲ್ಲಿ ಹೇಳಿತ್ತು. ಇದಾದ ನಂತರ, ಪಿಎಂಎಲ್‌ಎ ಅಡಿಯಲ್ಲಿ ಆರೋಪಿಸಲಾದ ಇತರ ಜನರು ಸಹ ತಮ ವಿರುದ್ಧದ ಚಾರ್ಜ್‌ಶೀಟ್ ರದ್ದುಗೊಳಿಸುವಂತೆ ಒತ್ತಾಯಿಸಿದರು.

> **ಅರವಿಂದ್ ಕೇಜ್ರಿವಾಲ್ ವಿರುದ್ಧ ಪ್ರಕರಣ ದಾಖಲಿಸಲು ಗೃಹ ವ್ಯವಹಾರಗಳ ಸಚಿವಾಲಯವು ಇಡಿಗೆ ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆಯಡಿ ಅನುಮತಿ ನೀಡಿದೆ. ದೆಹಲಿಯ ವಿಶೇಷ ಪಿಎಂಎಲ್‌ಎ ನ್ಯಾಯಾಲಯವು ಅರವಿಂದ್ ಕೇಜ್ರಿವಾಲ್ ವಿರುದ್ಧದ ಆರೋಪಗಳನ್ನು ರೂಪಿಸುವುದನ್ನು ತಡೆಯಾಜ್ಞೆ ನೀಡಿತ್ತು. ವಾಸ್ತವವಾಗಿ, ಅರವಿಂದ್ ಕೇಜ್ರಿವಾಲ್ ದೆಹಲಿ ಹೈಕೋರ್ಟ್‌ನ ಬಾಗಿಲು ತಟ್ಟಿದ್ದರು. ಪಿಎಂಎಲ್‌ಎ ಅಡಿಯಲ್ಲಿ ವಿಚಾರಣೆ ನಡೆಸಲು ಅಗತ್ಯ ಅನುಮೋದನೆ ಇಲ್ಲದೆಯೇ ವಿಚಾರಣಾ ನ್ಯಾಯಾಲಯವು ಚಾರ್ಜ್‌ಶೀಟ್ ಅನ್ನು ಗಮನಕ್ಕೆ ತೆಗೆದುಕೊಂಡಿದೆ ಎಂದರು.**

# ವಯನಾಡ್ ಭೂಕುಸಿತ: ನಾಪತ್ತೆಯಾದವರನ್ನು ಮೃತರು ಎಂದು ಘೋಷಿಸಲು ಮುಂದಾದ ಕೇರಳ ಸರ್ಕಾರ

**ತಿರುವನಂತಪುರ:** ಕಳೆದ ಜುಲೈ 30ರಂದು ಸುರಿದ ಭಾರಿ ಮಳೆ ಮತ್ತು ಭೂಕುಸಿತದಲ್ಲಿ ನಾಪತ್ತೆಯಾದವರ ಪತ್ತೆ ಈವರೆಗೂ ಆಗದಿರುವ ಕಾರಣ, ಅವರನ್ನು ಮೃತರು ಎಂದು ಕೇರಳ ಸರ್ಕಾರ ಬುಧವಾರ ಘೋಷಿಸಲು ಅಗತ್ಯ ಕ್ರಮಕ್ಕೆ ಮುಂದಾಗಿದೆ. ಇದರಿಂದ ವ್ಯಕ್ತಿಗಳನ್ನು ಕಳೆದುಕೊಂಡ ಕುಟುಂಬಗಳಿಗೆ ಪರಿಹಾರ ಕಾರ್ಯ ಚುರುಕುಗೊಳಿಸಲು ಅನುಕೂಲವಾಗಲಿದೆ. ನಾಪತ್ತೆಯಾದವರ ಪಟ್ಟಿ ಮಾಡಿ ಪರಿಶೀಲಿಸಲು ಕಂದಾಯ ಇಲಾಖೆಯ ಅಧಿಕಾರಿಗಳನ್ನೂ ಒಳಗೊಂಡಂತೆ ಸ್ಥಳೀಯ, ಜಿಲ್ಲಾ ಹಾಗೂ ರಾಜ್ಯ ಮಟ್ಟದ ಸಮಿತಿಯನ್ನು ರಚಿಸಲಾಗುವುದು ಎಂದು ಸರ್ಕಾರ ತನ್ನ ಆದೇಶದಲ್ಲಿ ಹೇಳಿದೆ.

ಸಮಿತಿಯಲ್ಲಿ ಪಂಚಾಯ್ತಿ ಕಾರ್ಯದರ್ಶಿ, ಗ್ರಾಮಾಧಿಕಾರಿ ಹಾಗೂ ಸಂಬಂಧ ಪಟ್ಟ ಪೊಲೀಸ್ ಠಾಣೆಯ ಅಧಿಕಾರಿ ಇರಲಿದ್ದಾರೆ. ನಾಪತ್ತೆಯಾದವರ ಹೆಸರಿನ ಪಟ್ಟಿ ಮಾಡಿ, ಅದನ್ನು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರಕ್ಕೆ ಪರಿಶೀಲನೆಗಾಗಿ ಕಳುಹಿಸಲಿದ್ದಾರೆ. ಈ ಪಟ್ಟಿ ನಂತರ ರಾಜ್ಯ ಮಟ್ಟದ ಸಮಿತಿಗೆ ಸಲ್ಲಿಕೆಯಾಗಲಿದೆ. ರಾಜ್ಯ ಸಮಿತಿಯಲ್ಲಿ ಗೃಹ ಇಲಾಖೆಯ ಮುಖ್ಯ ಕಾರ್ಯದರ್ಶಿ ಹಾಗೂ ಕಂದಾಯ ಹಾಗೂ ಸ್ಥಳೀಯ ಆಡಳಿತದ ಪ್ರಧಾನ ಕಾರ್ಯದರ್ಶಿ ಪರಿಶೀಲಿಸಿ ಸರ್ಕಾರಕ್ಕೆ ಸಲ್ಲಿಸಲಿದ್ದಾರೆ ಎಂದು ಹೇಳಲಾಗಿದೆ.

ಈ ಪಟ್ಟಿಯನ್ನು ಆಧರಿಸಿ ನಾಪತ್ತೆಯಾದ ವ್ಯಕ್ತಿಗಳನ್ನು ಮೃತರು ಎಂದು ಸರ್ಕಾರ ಘೋಷಿಸಿ, ಅವರ ಕುಟುಂಬಗಳಿಗೆ ಪರಿಹಾರ ವಿತರಿಸಲಿದೆ. ಸದ್ಯದ ಅಧಿಕೃತ ಮಾಹಿತಿ ಪ್ರಕಾರ ದುರಂತದಲ್ಲಿ 263 ಜನ ಮೃತಪಟ್ಟು, 35 ಮಂದಿ ನಾಪತ್ತೆಯಾಗಿದ್ದರು. ಈ ಕುರಿತಂತೆ ಪೊಲೀಸ್ ಠಾಣೆಯಲ್ಲಿ ಸಲ್ಲಿಕೆಯಾದ ನಾಪತ್ತೆ ದೂರನ್ನು ಪರಿಶೀಲಿಸಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನಾಪತ್ತೆಯಾದವರ ಹಾಗೂ ಪತ್ತೆಯಾದವರ ಕುರಿತು ಸರ್ಕಾರದ ಅಧಿಕೃತ ಅಂತರ್ಜಾಲ ತಾಣದಲ್ಲಿ ತಹಶೀಲ್ದಾರ್ ಅಥವಾ ಉಪ ವಿಭಾಗೀಯ ಮ್ಯಾಜಿಸ್ಟ್ರೇಟ್ ಅವರು ಪ್ರಕಟಣೆ ಹೊರಡಿಸಲಿದ್ದಾರೆ. ಇದಕ್ಕೆ ಆಕ್ಷೇಪ ಸಲ್ಲಿಸಲು 30 ದಿನಗಳ ಕಾಲಾವಕಾಶ ನೀಡಲಾಗುವುದು. ನಂತರ ನಾಪತ್ತೆಯಾದವರನ್ನು ಮೃತರು ಎಂದು ಘೋಷಿಸಿ, ಅವರ ಕುಟುಂಬದವರಿಗೆ ತ್ವರಿತವಾಗಿ ಮರಣ ಪ್ರಮಾಣ ಪತ್ರ ವಿತರಿಸಲಾಗುವುದು ಎಂದು ಆದೇಶದಲ್ಲಿ ಹೇಳಲಾಗಿದೆ.

# ಹೊತ್ತಿ ಉರಿಯುತ್ತಿರುವ ಬೆಂಕಿಯನ್ನು ಹಚ್ಚಿದ್ದು ಯಾರು?: ತನಿಖೆ ಆರಂಭ

## ಕಾಡ್ಗಿಚ್ಚು ಹತ್ತಿರುವಾಗ ಅಲ್ಲಿನ ಖಾಲಿ ಮನೆಗಳಿಗೆ ಕಳ್ಳರು ನುಗ್ಗಿದ ಕಾರಣ, ಸ್ಥಳೀಯರು ಕಳ್ಳರ ಗ್ಯಾಂಗ್ ಇದ್ದಾರೆ ಎಂಬ ಶಂಕೆ

**ವಾಷಿಂಗ್ಟನ್:** ಇಡೀ ಜಗತ್ತನ್ನೇ ದಿಗ್ಭ್ರಮೆಗೊಳಿಸಿರುವ ಲಾಸ್ ಏಂಜಲೀಸ್ ಕಾಡ್ಗಿಚ್ಚು ಅಲ್ಲಿನ ಜನರಿಗೆ ಕೊಟ್ಟಿರುವ ನೋವು ಹಾಗೂ ಉಂಟು ಮಾಡಿರುವ ನಷ್ಟ ಅಷ್ಟಿಷ್ಟಲ್ಲ. ಪಕ್ಕದ ಮನೆಗೆ ಬೆಂಕಿ ಹತ್ತಿದರೆ ಅದರಲ್ಲಿ ತಮ್ಮ ಬೇಳೆ ಬೇಯಿಸಿಕೊಂಡರು ಎಂಬ ಗಾದೆ ಮಾತಿನಂತೆ, ಕಾಡ್ಗಿಚ್ಚಿಗೆ ಸಿಲುಕಿದ ಮನೆಗಳಲ್ಲಿನ ಸದಸ್ಯರು ಜೀವ ಉಳಿಸಿಕೊಳ್ಳಲು ಅಲ್ಲಿಂದ ಓಡಿ ಹೋದರೆ, ಅದೇ ಹೊತ್ತಿಗೆ ಅಂಥ ಖಾಲಿಯಿರುವ ಮನೆಗಳಿಗೆ ನುಗ್ಗಿ ಆ ಮನೆಗಳನ್ನು ದೋಚುತ್ತಿದ್ದಾರೆ.

ಅಲ್ಲಿಗೆ, ಇದು ಯಾರೋ ದೊಡ್ಡ ಕಳ್ಳರ ಗ್ಯಾಂಗ್ ಒಂದು ಕಾಡ್ಗಿಚ್ಚನ್ನು ಹೊತ್ತಿಸಿ, ಅದರ ಬೆಳಕಿನಲ್ಲಿ ದೋಚಿದೆ ಎಂಬ ಗುಮಾನಿ ಅಲ್ಲಿನ ಸ್ಥಳೀಯ ಅಧಿಕಾರಿಗಳಲ್ಲಿ ಮೂಡಿದ್ದು, ಅದಕ್ಕಾಗಿ ತನಿಖೆ ನಡೆಸಲು ಅಲ್ಲಿನ ಸ್ಥಳೀಯ ಸರ್ಕಾರ ಮುಂದಾಗಿದೆ.

ಈ ಕಾಡ್ಗಿಚ್ಚಿಗೆ 23,700 ಎಕರೆಯಷ್ಟು ಅರಣ್ಯ ಪ್ರದೇಶ ಸುಟ್ಟುಭಸ್ಮವಾಗಿದೆ. ಸಾವಿರಾರು ಮನೆಗಳು ಸುಟ್ಟು ಕರಕಲಾಗಿವೆ. ಇನ್ನೂ ಬೆಂಕಿಯಲ್ಲಿ ಯಾರಾದರೂ ಬಲಿಯಾಗಿದ್ದಾರೆಯೇ ಎಂಬುದು ದೃಢಪಟ್ಟಿಲ್ಲ. ಅಸಲಿಗೆ, ಬೆಂಕಿಯ ಕೆನ್ನಾಲಿಗೆಗೆ ಸುಟ್ಟು ಭಸ್ಮವಾದ ಆಸ್ತಿಪಾಸ್ತಿ ಎಷ್ಟು, ಕಳ್ಳರು ದೋಚಿದ ವಸ್ತುಗಳ ಮೌಲ್ಯವೆಷ್ಟು ಎಂಬುದು ಇನ್ನೂ ಪತ್ತೆಯಾಗಿಲ್ಲ. ಆದರೆ, ಅದೆಲ್ಲದಕ್ಕೂ ಬೇಕಾಗಿರೋದು ಈ ಕಾಡ್ಗಿಚ್ಚು ಸ್ವಾಭಾವಿಕವೇ ಅಥವಾ ಮಾನವ ಕಿತಾಪತಿಯೇ ಎಂಬುದು. ಈಗ ಅಲ್ಲಿನ ಅಗ್ನಿಶಾಮಕ ದಳದ ಹಿರಿಯ ಅಧಿಕಾರಿಗಳು ಆ ಪ್ರಶ್ನೆಯನ್ನು ಮುಂದಿಟ್ಟುಕೊಂಡು ತನಿಖೆ ಆರಂಭಿಸಿದ್ದಾರೆ.



**ಭಾರೀ ಕಷ್ಟದ ಕೆಲಸ**

### ಸರ್ಕಾರ ತನಿಖೆ ಕೈಗೊಂಡಿದೆ

**ಲಾಸ್ ಏಂಜಲೀಸ್‌ನಲ್ಲಿ ಭೀಕರ ಕಾಡ್ಗಿಚ್ಚು ಸಂಭವಿಸಿದ ಪರಿಣಾಮ ಸಾವಿರಾರು ಮನೆಗಳು ಸುಟ್ಟು ಹೋಗಿದ್ದು, ಸಾರ್ವಜನಿಕರನ್ನು ಅನೇಕ ಕಷ್ಟಕ್ಕೆ ಒಳಪಡಿಸಿದೆ. ಕಾಡ್ಗಿಚ್ಚಿನ ನಡುವೆಯೇ ಡಕಾಯಿತಿ ಪ್ರಕರಣಗಳು ನಡೆದಿರುವ ಹಿನ್ನೆಲೆ, ಈ ಕಾಡ್ಗಿಚ್ಚು ನೈಸರ್ಗಿಕವಲ್ಲದೇ ಕೃತಕವಾಗಿರಬಹುದು. ಯಾರೋ ದುಷ್ಕರ್ಮಿಗಳು ಮನೆಗಳನ್ನು ದೋಚುವ ಉದ್ದೇಶದಿಂದಲೇ ಕಾಡಿಗೆ ಆನಂತರ ಅಲ್ಲಿಂದ ನಾಡಿಗೆ ಬರುವಂತೆ ಬೆಂಕಿ ಹಾಕಿರಬಹುದು ಎಂಬ ಶಂಕೆ ಮೂಡಿದ್ದು, ಸ್ಥಳೀಯ ಸರ್ಕಾರ ತನಿಖೆ ಕೈಗೊಂಡಿದೆ**

- ಲಾಸ್ ಏಂಜಲೀಸ್ ಕಾಡ್ಗಿಚ್ಚಿನಲ್ಲಿ 23,700 ಎಕರೆಯಷ್ಟು ಅರಣ್ಯ ಪ್ರದೇಶ ಸುಟ್ಟುಭಸ್ಮವಾಗಿದ್ದು, ಸಾವಿರಾರು ಮನೆಗಳನ್ನು ದರೋಡೆ ಮಾಡಲಾಗಿದೆ.
- ಸ್ಥಳೀಯ ಅಧಿಕಾರಿಗಳು ಕಾಡ್ಗಿಚ್ಚು ಮಾನವ ಕೃತಕವೇ ಅಥವಾ ಸ್ವಾಭಾವಿಕವೇ ಎಂಬುದರ ಕುರಿತು ತನಿಖೆ ನಡೆಸಲು ಮುಂದಾಗಿದ್ದಾರೆ.

**ತಿಂಗಳುಗಟ್ಟಲೆ ನಡೆಯಲಿದೆ ತನಿಖೆ!:** ಸರಿ ಅತ್ತ ಲಾಸ್ ಏಂಜಲೀಸ್ ಅಗ್ನಿಶಾಮಕ ದಳದ ಸಿಬ್ಬಂದಿಯು ತನಿಖೆಯನ್ನೇನೋ ಆರಂಭಿಸಲಿದ್ದಾರೆ. ಆದರೆ, ತನಿಖೆ ಅಷ್ಟು ಸುಲಭವಾಗಿ ಮುಗಿಯದು. ಏಕೆಂದರೆ, ಸುಟ್ಟು ಕರಕಲಾಗಿರುವ ಆ ಜಾಗದಲ್ಲಿ ಬೆಂಕಿಯ ಹೆಜ್ಜೆಗಳ ಮೂಲ ಹುಡುಕುವುದು ಅಷ್ಟು ಸುಲಭವಲ್ಲ. ಹಾಗಾಗಿ, ಈ ತನಿಖೆಯು ಮುಗಿದು ಅದರ ವರದಿ ಬರಲು ಸುಮಾರು ತಿಂಗಳುಗಳೇ ಆಗಬಹುದು ಎಂದು ಅಲ್ಲಿನ ಕೆಲವು ಅಧಿಕಾರಿಗಳು ತಿಳಿಸಿದ್ದಾರೆ.

**ಅಧಿಕಾರಿಗಳ ಅನಿಸಿಕೆ:** ಈ ಕುರಿತಂತೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿರುವ ಕೆವಿನ್ ರೆಕ್ಟೊರ್, ಇಯಾನ್ ಜೇಮ್ಸ್ ಎಂಬ ಇಬ್ಬರು ಅಧಿಕಾರಿಗಳು, ಅರಣ್ಯದಲ್ಲಿ ಹೊತ್ತಿಕೊಂಡ ಬೆಂಕಿ, ಕಾಡಿನ ಇತರ ದಿಕ್ಕುಗಳಿಗೆ ಹರಡದೇ ಅದ್ದೇಗೆ ನಗರದ ಕಡೆಗೆ ಹಬ್ಬಿತು ಎಂಬುದು ನಮ್ಮಲ್ಲಿರುವ ಮೊದಲ ಅನುಮಾನ.

ಇನ್ನು, ನಗರಗಳ ಕಡೆಗೆ ಏಕಾಏಕಿ ಧಾವಿಸಿದ ಬೆಂಕಿಯ ಬೆನ್ನಲ್ಲೇ ಅಲ್ಲಿ ಡಕಾಯಿತಿ ಪ್ರಕರಣಗಳು ನಡೆಸಿದ್ದು ಯಾರು, ಅವರೆಲ್ಲರೂ ಹೀಗೆ ಸಂಘಟಿತರಾಗಿ ಒಂದೇ ಬಾರಿ ಕಳ್ಳತನಕ್ಕಿಳಿದಿದ್ದು ಹೇಗೆ ಎಂಬ ಮತ್ತೊಂದು ಅನುಮಾನವಿದೆ. ಹಾಗಾಗಿ, ಕಾಡ್ಗಿಚ್ಚು ನೈಸರ್ಗಿಕವಲ್ಲ ಎಂಬ ಅನುಮಾನಗಳು ಮೂಡತೊಡಗಿವೆ ಎಂದಿದ್ದಾರೆ. ಆದರೆ, ಕಾಡ್ಗಿಚ್ಚಿನ ಮೂಲ ಹುಡುಕುವುದೇ ಭಾರೀ ಕಷ್ಟದ ಕೆಲಸ'' ಎಂದು ಅವರು ಹೇಳಿದ್ದಾರೆ.

## ಮಿನಿ ನ್ಯೂಸ್

### ಆಟೋ ಅಪಘಾತದಲ್ಲಿ ಮೂವರು ಸಾವು

**ಥಾಣೆ:** ಮಹಾರಾಷ್ಟ್ರದ ಥಾಣೆ ಜಿಲ್ಲೆಯ ಹೆದ್ದಾರಿಯಲ್ಲಿ ಬುಧವಾರ ಬೆಳಗ್ಗೆ ಆಟೋ ರಿಕ್ಷಾವೊಂದು ಬಸ್ ಮತ್ತು ಇತರ ಕೆಲವು ವಾಹನಗಳಿಗೆ ಢಿಕ್ಕಿ ಹೊಡೆದ ಪರಿಣಾಮ ಮೂವರು ಮತಪಟ್ಟು 15 ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.ಮುಂಬೈ-ಆಗ್ರಾ ಹೆದ್ದಾರಿಯಲ್ಲಿ ಶಹಾಪುರ ತಾಲ್ಲೂಕಿನ ಘೋಟೆಘರ್ ಗ್ರಾಮದ ಖಿನಾವಲಿ ಸೇತುವೆ ಬಳಿ ಮುಂಜಾನೆ 4.15ಕ್ಕೆ ಅಪಘಾತ ಸಂಭವಿಸಿದೆ. ಆಟೋ ರಿಕ್ಷಾ ಚಾಲಕ ನಿಯಂತ್ರಣ ಕಳೆದುಕೊಂಡಿದ್ದಾನೆ. ಇದರ ಪರಿಣಾಮವಾಗಿ ವಾಹನವು ರಸ್ತೆ-ವಿಭಜಕಕ್ಕೆ ಡಿಕ್ಕಿ ಹೊಡೆದು, ಲೇನ್ಗೆ ಜಿಗಿದು ಎದುರಿನಿಂದ ಬರುತ್ತಿದ್ದ ಖಾಸಗಿ ಐಷಾರಾಮಿ ಬಸ್, ಎರಡು ಕಾರುಗಳು ಮತ್ತು ಟೆಂಪೋಗೆ ಡಿಕ್ಕಿ ಹೊಡೆದಿದೆ ಎಂದು ಶಹಾಪುರ ಪೊಲೀಸ್ ಠಾಣೆಯ ಅಧಿಕಾರಿಯೊಬ್ಬರು ಪಿಟಿಐಗೆ ತಿಳಿಸಿದ್ದಾರೆ.

ಬಸ್ಸಿನಲ್ಲಿದ್ದ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದು, ಆಟೋ ರಿಕ್ಷಾ ಚಾಲಕ ಸೇರಿದಂತೆ 15 ಮಂದಿ ಗಾಯಗೊಂಡಿದ್ದಾರೆ ಎಂದು ಅವರು ಹೇಳಿದರು. ಬಸ್ ನಾಸಿಕ್ನಿಂದ ಮುಂಬೈಗೆ ತೆರಳುತ್ತಿತ್ತು ಎಂದು ಅಧಿಕಾರಿ ತಿಳಿಸಿದ್ದಾರೆ. ಎಚ್ಚರಿಕೆ ನೀಡಿದ ನಂತರ, ಸ್ಥಳೀಯ ಪೊಲೀಸರು ಮತ್ತು ತುರ್ತು ರಕ್ಷಣಾ ತಂಡಗಳು ಸ್ಥಳಕ್ಕೆ ಧಾವಿಸಿವೆ. ಗಾಯಾಳುಗಳನ್ನು ಶಹಾಪುರ ಉಪ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಲ್ಲಿ ಮೂವರ ಸ್ಥಿತಿ ಗಂಭೀರವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ರಾಜಸ್ಥಾನ : ಒಂದೇ ಕುಟುಂಬದ ನಾಲ್ವರು ಶವವಾಗಿ ಪತ್ತೆ

**ಜೈಪುರ:** ರಾಜಸ್ಥಾನದ ಮೆಹಂದಿಪುರದ ಬಾಲಾಜಿ ಪಟ್ಟಣದ ಧರ್ಮಶಾಲಾ ಅತಿಥಿಗಹದಲ್ಲಿ ಒಂದೇ ಕುಟುಂಬದ ನಾಲ್ವರು ಶವವಾಗಿ ಪತ್ತೆಯಾಗಿದ್ದಾರೆ. ಮೃತಪಟ್ಟವರೆಲ್ಲಾ ಉತ್ತರಾಖಂಡದ ಡೆಹ್ರಾಡೂನ್‌ನ ರಾಯ್‌ಪುರ ಪ್ರದೇಶದವರು ಎಂದು ಗುರುತಿಸಲಾಗಿದೆ. ಜ. 12 ರಂದು ಸಮಾಧಿ ವಾಲಿ ಗಲಿಯ ರಾಧಾ-ಕಷ್ಣ ಆಶ್ರಮ ಧರ್ಮಶಾಲಾದಲ್ಲಿ ಕೊಠಡಿಯನ್ನು ಬಾಡಿಗೆಗೆ ಪಡೆದಿದ್ದರು ಮತ್ತು ನಿನ್ನೆ ಮಧ್ಯಾಹ್ನ ಚೆಕ್ ಔಟ್ ಮಾಡಲು ನಿರ್ಧರಿಸಿದ್ದರು. ಸಂಜೆ ಗಹರಕ್ಷಕ ಸಿಬ್ಬಂದಿ ಕೊಠಡಿಗೆ ತಲುಪಿದಾಗ ಯಾವುದೇ ಚಟುವಟಿಕೆ ಗಮನಕ್ಕೆ ಬಂದಿಲ್ಲ, ಯಾರೂ ಸ್ಪಂದಿಸಲಿಲ್ಲ. ಸಿಬ್ಬಂದಿ ವ್ಯಾನೇಜರ್‌ಗೆ ಮಾಹಿತಿ ನೀಡಿದ್ದು, ಅವರು ಪರಿಶೀಲಿಸಲು ಹೋದಾಗ ಕೊಠಡಿಯೊಳಗೆ ನಾಲ್ಕು ಮತದೇಹಗಳು ಬಿದ್ದಿರುವುದು ಕಂಡಿತ್ತು. ಮಾಹಿತಿ ಪಡೆದ ಬಾಲಾಜಿ ಪೊಲೀಸರು ಹಾಗೂ ತೋಡಭೀಮ್ ಠಾಣೆ ಪ್ರಭಾರಿ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದರು.

ಘಟನೆಯನ್ನು ದಢಪಡಿಸಿದ ಕರೋಲಿ ಎಸ್ಪಿ ಬ್ರಿಜೇಶ್ ಜ್ಯೋತಿ ಉಪಾಧ್ಯಾಯ, ಮೆಹಂದಿಪುರ ಬಾಲಾಜಿಯ ಸಮಾಧಿ ವಾಲಿ ಗಲಿಯಲ್ಲಿರುವ ಧರ್ಮಶಾಲಾದಲ್ಲಿ ಕುಟುಂಬದ ನಾಲ್ಕು ಸದಸ್ಯರು ಶವವಾಗಿ ಪತ್ತೆಯಾಗಿದ್ದಾರೆ. ತೋಡಭೀಮ್ ಪೊಲೀಸರು ಘಟನಾ ಸ್ಥಳಕ್ಕೆ ತಲುಪಿದಾಗ ಬಾಗಿಲು ತೆರೆದಿತ್ತು ಎಂದು ಮಾಹಿತಿ ನೀಡಿದ್ದಾರೆ. ಘಟನಾ ಸ್ಥಳದಲ್ಲಿನ ಪ್ರಾಥಮಿಕ ಅವಲೋಕನಗಳ ಆಧಾರದ ಮೇಲೆ ಇಬ್ಬರ ಶವ ನೆಲದ ಮೇಲೆ ಮಲಗಿರುವ ರೀತಿ ಇತ್ತು, ಇನ್ನಿಬ್ಬರ ಶವ ಹಾಸಿಗೆಯ ಮೇಲೆ ಪತ್ತೆಯಾಗಿವೆ. ವಿಷ ಕುಡಿದು ಸಾವನ್ನಪ್ಪಿದ್ದಾರೆ ಎಂದು ಹೇಳಲಾಗುತ್ತಿದೆ. ಮರಣೋತ್ತರ ಪರೀಕ್ಷೆಯ ವರದಿಯ ನಂತರ ಸಾವಿಗೆ ನಿಖರ ಕಾರಣವನ್ನು ನಿರ್ಧರಿಸಲಾಗುವುದು. ಆದರೆ ಸಾವಿನ ಹಿಂದಿರುವ ಸ್ಪಷ್ಟ ಕಾರಣದ ಬಗ್ಗೆ ಇನ್ನೂ ತನಿಖೆ ನಡೆಯುತ್ತಿದೆ.

### ಪ್ಯಾರಿಸ್ ಎಐ ಶೃಂಗ: ಸಹಾಧ್ಯಕ್ಷತೆ ವಹಿಸಲಿರುವ ಭಾರತ ಎಂದ ಫ್ರಾನ್ಸ್

**ಪ್ಯಾರಿಸ್:** ಕೃತಕ ಬುದ್ಧಿಮತ್ತೆ ಕುರಿತು ಇದೇ ಫೆಬ್ರುವರಿಯಲ್ಲಿ ಫ್ರಾನ್ಸ್ ಆಯೋಜಿಸುತ್ತಿರುವ ಪ್ಯಾರಿಸ್ ಎಐ ಶೃಂಗದಲ್ಲಿ ಭಾರತವು ಸಹಾಧ್ಯಕ್ಷತೆ ವಹಿಸಲಿದೆ ಎಂದು ಸಚಿವೆ ಕಾರ್ಲಾ ಚಪಾಜ್ ಬುಧವಾರ ತಿಳಿಸಿದ್ದಾರೆ. ಫ್ರಾನ್ಸ್ ಸರ್ಕಾರದ ಸಂಪುಟ ಸಭೆಯ ನಂತರ ಅವರು ಈ ಮಾಹಿತಿ ಹಂಚಿಕೊಂಡಿದ್ದಾರೆ. ಕೃತಕ ಬುದ್ಧಿಮತ್ತೆಯ ಮೇಲೆ ನಿಯಂತ್ರಣಕ್ಕಾಗಿ ಶೃಂಗದಲ್ಲಿ ಪಾಲ್ಗೊಳ್ಳುವಂತೆ ಜಗತ್ತಿನ ವಿವಿಧ ರಾಷ್ಟ್ರಗಳ ಸರ್ಕಾರಿ ಅಧಿಕಾರಿಗಳನ್ನು ಆಹ್ವಾನಿಸಲಾಗುತ್ತಿದೆ. ಇವರೊಂದಿಗೆ ಸಂಶೋಧನೆ ಮತ್ತು ವ್ಯಾವಹಾರಿಕ ಜಗತ್ತಿನ ಪ್ರತಿನಿಧಿಗಳು, ನಾಗರಿಕ ಸಮಾಜದ ಪ್ರತಿನಿಧಿಗಳನ್ನೂ ಆಹ್ವಾನಿಸಲಾಗುತ್ತಿದೆ ಎಂದಿದ್ದಾರೆ.

### ದಕ್ಷಿಣ ಕೊರಿಯಾದ ಅಧ್ಯಕ್ಷ ಯೂನ್ ಸುಕ್ ಯೋಲ್ ಬಂಧನ

**ಸೋಲ್:** ವಾಗ್ದಂಡನೆಗೆ ಗುರಿಯಾಗಿರುವ ದಕ್ಷಿಣ ಕೊರಿಯಾದ ಅಧ್ಯಕ್ಷ ಯೂನ್ ಸುಕ್ ಯೋಲ್ ಅವರನ್ನು ಬಂಧಿಸಲಾಗಿದೆ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ. ಕಳೆದ ತಿಂಗಳು ಮಿಲಿಟರಿ ಆಡಳಿತ ಜಾರಿಗೊಳಿಸಿದ ಯೂನ್ ಅವರನ್ನು ಈಗಾಗಲೇ ಅಧ್ಯಕ್ಷ ಸ್ಥಾನದಿಂದ ಪದಚ್ಯುತಗೊಳಿಸಲಾಗಿದೆ. ಅವರ ಬಂಧನಕ್ಕೆ ಹೊರಡಿಸಿರುವ ವಾರಂಟ್ ಕೊನೆಗೊಂಡಿರುವ ಹಿನ್ನೆಲೆಯಲ್ಲಿ ಯೋಲ್ ಅವರನ್ನು ಬಂಧಿಸಲಾಗಿದೆ.

ಒಂದೇ ತಿಂಗಳಲ್ಲಿ ಇಬ್ಬರು ಮುಖಂಡರು ವಾಗ್ದಂಡನೆಗೆ ಗುರಿಯಾಗಿದ್ದು, ಈ ಘಟನೆಗಳು ದೇಶದಲ್ಲಿ ರಾಜಕೀಯ ಬಿಕ್ಕಟ್ಟಿಗೆ ಕಾರಣವಾಗಿವೆ. ಈಚೆಗೆ ಬಂಧನದ ವಾರಂಟ್ ಕಾನೂನುಬಾಹಿರವಾಗಿದೆ ಎಂದು ಪ್ರತಿಪಾದಿಸಿದ್ದ ಯೂನ್ ಅವರ ವಕೀಲರ ವಾದವನ್ನು ಸೋಲ್ ನ್ಯಾಯಾಲಯ ತಿರಸ್ಕರಿಸಿತ್ತು. ತನಿಖಾಧಿಕಾರಿಗಳು ಸಾಕಷ್ಟು ಸಂಖ್ಯೆಯಲ್ಲಿದ್ದರು. ತನಿಖೆ ಕುರಿತಂತೆ ಅಧ್ಯಕ್ಷರ ಭದ್ರತಾ ಪಡೆ ಯೊಂದಿಗೆ ಹಲವು ಭಾರಿ ವಾಗ್ವಾದ ನಡೆಸಬೇಕಾಯಿತು. ದೇಶದ ಕಾನೂನು ಪ್ರಕ್ರಿಯೆಗೂ ಸಹಕರಿಸದ ಅವರ ವರ್ತನೆಗೆ ವಿಷಾದವಿದೆ ಎಂದೂ ಭ್ರಷ್ಟಾಚಾರ ತನಿಖಾ ಸಂಸ್ಥೆ ಪ್ರತಿಕ್ರಿಯಿಸಿದೆ. ತೀವ್ರ ಚಳಿಯ ವಾತಾವರಣದಲ್ಲೂ ಅಧ್ಯಕ್ಷರ ನಿವಾಸದ ಹೊರಗೆ, ಯೋಲ್ ಅವರ ಬೆಂಬಲಿಗರು ದೊಡ್ಡ ಸಂಖ್ಯೆಯಲ್ಲಿ ಸುದೀರ್ಘ ಕಾಲ ಗುಂಪುಗೂಡಿದ್ದರು. ದಕ್ಷಿಣ ಕೊರಿಯಾ, ಅಮೆರಿಕದ ಧ್ವಜಹಿಡಿದಿದ್ದ ಬೆಂಬಲಿಗರು ಅಧ್ಯಕ್ಷರ ರಕ್ಷಣೆಗೆ ಆಗ್ರಹಿಸುವ ಘೋಷಣೆಗಳನ್ನು ಕೂಗಿದ್ದರು.

### ಕದನ ವಿರಾಮ: ಹಮಾಸ್ ಸಮ್ಮತಿ

**ಕೈರೋ:** ಗಾಜಾ ಪಟ್ಟಿಯಲ್ಲಿ ಕದನವಿರಾಮ ಘೋಷಿಸುವ ಕುರಿತ ಕರಡು ಒಪ್ಪಂದಕ್ಕೆ ಹಾಗೂ 12 ಒತ್ತೆಯಾಳುಗಳ ಬಿಡುಗಡೆಗೆ ಹಮಾಸ್ ಬಂಡುಕೋರರು ಒಪ್ಪಿದ್ದಾರೆ ಎಂದು ಮಾತುಕತೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದ ಇಬ್ಬರು ಅಧಿಕಾರಿಗಳು ತಿಳಿಸಿದ್ದಾರೆ. ಮಧ್ಯಸ್ಥಿಕೆ ವಹಿಸಿದ್ದ ಕತಾರ್ ರಾಷ್ಟ್ರವು, ಮಾತುಕತೆ ಅಂತಿಮ ಹಂತದಲ್ಲಿದೆ. ಬಹುತೇಕ ಒಪ್ಪಂದಕ್ಕೆ ಬರಲಾಗುತ್ತದೆ' ಎಂದು ಹೇಳಿದೆ.

ಕರಡು ಒಪ್ಪಂದ ಏರ್ಪಟ್ಟಿರು ವುದನ್ನು ಹಮಾಸ್ ಮತ್ತು ಈಜಿಪ್ಟ್ ಅಧಿಕಾರಿಗಳು ದೃಢಪಡಿಸಿದ್ದಾರೆ. ಒಪ್ಪಂದಕ್ಕೆ ಅಂತಿಮ ಅನುಮೋದನೆ ಕೋರಿ ಇಸ್ರೇಲ್‌ನ ಸಂಪುಟದ ಮುಂದೆ ಮಂಡಿಸಲಾಗುವುದು ಎಂದು ಹೇಳಿದರು.



# 6 ಸರ್ಜರಿ 190 ಹೊಲಿಗೆ

ಶಿವರಾಜ್‌ಕುಮಾರ್ ಅವರಿಗೆ ಅಮೆರಿಕದಲ್ಲಿ ಶಸ್ತ್ರ ಚಿಕಿತ್ಸೆ ಮಾಡಲಾಯಿತು. ಸರ್ಜರಿ ಆದ ಬಳಿಕ ಶಿವಣ್ಣ ಅವರ ಆರೋಗ್ಯ ಸ್ಥಿತಿ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಕೆಲವು ಅಂತೆ-ಕಂತೆಗಳು ಹಬ್ಬಿದ್ದವು. ಅವುಗಳಿಗೆಲ್ಲ ಈಗ ಮಧು ಬಂಗಾರಪ್ಪ ಅವರು ಸ್ಪಷ್ಟನೆ ನೀಡಿದ್ದಾರೆ. ಶಿವರಾಜ್‌ಕುಮಾರ್ ಅವರಿಗೆ ಮಾಡಿರುವ ಆಪರೇಷನ್ ಯಾವ ರೀತಿ ಇತ್ತು ಎಂಬುದನ್ನು ಅವರು ತಿಳಿಸಿದ್ದಾರೆ.

ನಟ ಶಿವರಾಜ್‌ಕುಮಾರ್ ಅವರು ಕ್ಯಾನ್ಸರ್ ಮುಕ್ತವಾಗಿದ್ದಾರೆ. ಯಶಸ್ವಿಯಾಗಿ ಶಸ್ತ್ರ ಚಿಕಿತ್ಸೆ ಮುಗಿಸಿದ್ದರಿಂದ ಎಲ್ಲರೂ ನಿಟ್ಟುಸಿರು ಬಿಟ್ಟಿದ್ದಾರೆ.

ಶಿವಣ್ಣ ಅವರಿಗೆ ಯಾವ ರೀತಿಯ ಶಸ್ತ್ರ ಚಿಕಿತ್ಸೆ ಮಾಡಲಾಗಿದೆ ಎಂಬುದನ್ನು ಅವರ ಸಂಬಂಧಿ ಮಧು ಬಂಗಾರಪ್ಪ ವಿವರಿಸಿದ್ದಾರೆ. 'ನಡೆದಿರುವುದು ತುಂಬ ದೊಡ್ಡ ಆಪರೇಷನ್. ಹಾಗಾಗಿಯೇ ನಾನು ಅವರ ಜೊತೆ ಅಲ್ಲಿಗೆ ಹೋಗಿದ್ದು. ಯಶಸ್ವಿಯಾಗಿ ಸರ್ಜರಿ ನಡೆದಿದೆ' ಎಂದು ಹೇಳಿದ್ದಾರೆ. ಒಟ್ಟು 6 ಸರ್ಜರಿ ಮಾಡಿದ್ದು, 190 ಹೊಲಿಗೆ ಹಾಕಲಾಗಿದೆ ಎಂದು ಕೂಡ ಅವರು ಮಾಹಿತಿ ಹಂಚಿಕೊಂಡಿದ್ದಾರೆ. 'ಏಕಕಾಲಕ್ಕೆ 6 ಆಪರೇಷನ್ ನಡೆಯಿತು. ಕರುಳಿನ ಒಂದು ಭಾಗವನ್ನು ತೆಗೆದು, ಅದನ್ನೇ ಯೂರಿನ್ ಬ್ಲಾಡರ್ ಆಗಿ ಮಾಡುತ್ತಾರೆ. ಒಳಗಿನಿಂದ 190 ಹೊಲಿಗೆ ಹಾಕಲಾಗಿದೆ. ನಾವು ಇದನ್ನೆಲ್ಲ ವಿವರವಾಗಿ ಹೇಳಿರಲಿಲ್ಲ. ಐದೂವರೆ ಗಂಟೆ ಸರ್ಜರಿ ಪ್ಲ್ಯಾನ್ ಮಾಡಲಾಗಿತ್ತು. 5 ಗಂಟೆ ಒಳಗೆ ಮುಗಿಸಿದರು. ಯಾವುದೇ ತೊಂದರೆ ಆಗಲಿಲ್ಲ.

# ರಗಡ್ ಆದ ಪೃಥ್ವಿ ಅಂಬರ್

ಕಾಸ್ ಸಿನಿಮಾಗಳ ಮೂಲಕ ಲವರ್ ಬಾಯ್ ಆಗಿ ಕಾಣಿಸಿಕೊಳ್ಳುತ್ತಿದ್ದ ಪೃಥ್ವಿ ಅಂಬರ್ ಮೊದಲ ಬಾರಿಗೆ ರಗಡ್ ಗೆಟಪ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ರೋಸ್ ಹಿಡಿಯುತ್ತಿದ್ದ ಪೃಥ್ವಿ ಕೈಗೆ ಲಾಂಗ್ ಕೊಟ್ಟು ನಿರ್ದೇಶಕ ಚಂದ್ರಶೇಖರ್ ಬಂಡಿಯಪ್ಪ ರಕ್ತಹರಿಸಿದ್ದಾರೆ. ಇದೀಗ 'ಚೌಕಿದಾರ್' ಸಿನಿಮಾದ ಟೀಸರ್ ಅನಾವರಣಗೊಂಡಿದೆ. ಹಿಂದೆಂದೂ ಕಾಣದ ಲುಕ್ ನಲ್ಲಿ ಪೃಥ್ವಿ ಪ್ರತ್ಯಕ್ಷರಾಗಿದ್ದಾರೆ. ರಕ್ತಸಿಕ್ತ ಅವತಾರವೆತ್ತಿರುವ ಅವರ ಹೊಸ ಲುಕ್ ಸಿನಿರಸಿಕರಿಗೆ ಕಿಕ್ ಕೊಟ್ಟಿದೆ. ಟೀಸರ್ ನಲ್ಲಿ ಎಲ್ಲಾ ಪಾತ್ರಗಳನ್ನು ತೋರಿಸಿರುವ ಚಂದ್ರಶೇಖರ್ ಬಂಡಿಯಪ್ಪ ಕಥೆಯ ಗುಟ್ಟನ್ನು ಎಲ್ಲಿಯೂ ಬಿಟ್ಟುಕೊಟ್ಟಿಲ್ಲ. ಕನ್ನಡ ಹಾಗೂ ತೆಲುಗು ಎರಡು ಭಾಷೆಯಲ್ಲಿ ಟೀಸರ್ ಬಿಡುಗಡೆ ಮಾಡಲಾಗಿದ್ದು, ಖಾಕಿ ಲುಕ್ ನಲ್ಲಿ ಸುಧಾರಾಣಿ ಖದರ್ ತೋರಿಸಿದ್ದಾರೆ. ಹಿರಿಯ ನಟ ಸಾಯಿ ಕುಮಾರ್ ಪೃಥ್ವಿ ತಂದೆ ಪಾತ್ರದಲ್ಲಿ ಗಮನ ಸೆಳೆಯುತ್ತಾರೆ. ಧರ್ಮ, ಹಿರಿಯ ನಟಿ ಶ್ವೇತಾ ತಾರಾ ಬಳಗದಲ್ಲಿದ್ದಾರೆ. ಪೃಥ್ವಿ ಅಂಬರ್ ಗೆ ಜೋಡಿಯಾಗಿ ಅಭಿನಯಿಸಿರುವ ಧನ್ಯಾ ರಾಮ್‌ಕುಮಾರ್ ಡಿ ಗ್ಲಾಮರ್ ಆಗಿ ಕಾಣಿಸಿಕೊಂಡಿದ್ದಾರೆ. ಸಚಿನ್ ಬಸ್ರೂರ್ ಸಂಗೀತ ಟೀಸರ್‌ನಲ್ಲಿ ಗಮನಸೆಳೆಯುತ್ತಿದೆ. ಕಲ್ಲಹಳ್ಳಿ ಚಂದ್ರಶೇಖರ್ ನಿರ್ಮಾಣ ಮಾಡುತ್ತಿದ್ದಾರೆ. ವಿದ್ಯಾದೇವಿ ನಿರ್ಮಾಣದಲ್ಲಿ ಸಾಥ್ ಕೊಡುತ್ತಿದ್ದಾರೆ. ವಿ.ನಾಗೇಂದ್ರ ಪ್ರಸಾದ್, ಪ್ರಮೋದ್ ಮರವಂತೆ, ಸಂತೋಷ್ ನಾಯಕ್ ಹಾಡುಗಳಿಗೆ ಸಾಹಿತ್ಯ ಬರೆದಿದ್ದಾರೆ. ಸಿದ್ದು ಕಂಚನಹಳ್ಳಿ ಛಾಯಾಗ್ರಹಣ, ರವಿ ವರ್ಮಾ ಸಾಹಸ ನಿರ್ದೇಶನ ಸಿನಿಮಾಗಿದೆ. 'ಚೌಕಿದಾರ್' ಬಹು ಭಾಷೆಯಲ್ಲಿ ಮೂಡಿ ಬರುತ್ತಿದ್ದು, ಪೃಥ್ವಿರಾಜ್ ಧಫಾರಿ ಸಹ ನಿರ್ದೇಶನದಲ್ಲಿ ಚಿತ್ರ ತಯಾರಾಗಿದೆ. ಮೇ ತಿಂಗಳಲ್ಲಿ 'ಚೌಕಿದಾರ್' ತೆರೆಗೆ ತರಲು ಚಿತ್ರತಂಡ ಯೋಜನೆ ಹಾಕಿಕೊಂಡಿದೆ. ಟೀಸರ್ ನೋಡುತ್ತಿದ್ದರೇ ನಿರ್ದೇಶಕ ಚಂದ್ರಶೇಖರ್ ಬಂಡಿಯಪ್ಪ ಯಾವುದೋ ಹೊಸ ಕಥೆಯನ್ನು ಹರವಿಡಲು ಹೊರಟಿರುವುದು ಗೊತ್ತಾಗುತ್ತಿದೆ.



# ಬಾಲಿವುಡ್ ನಿರ್ದೇಶಕನಿಗೆ ಹಾಲಿವುಡ್ ಅವಕಾಶ

ಇದೀಗ ಬಾಲಿವುಡ್‌ನ ಜನಪ್ರಿಯ ಆದರೆ ಅಂಡರ್‌ರೇಟೆಡ್ ನಿರ್ದೇಶಕರೊಬ್ಬರಿಗೆ ಆಸ್ಕರ್ ವಿಜೇತ ಹಾಲಿವುಡ್ ನಿರ್ದೇಶಕನಿಂದ ಆಫರ್ ದೊರೆತಿದೆ. ಅದಕ್ಕೆ ಕಾರಣವಾಗಿರುವುದು ದಕ್ಷಿಣ ಭಾರತದ ಸಿನಿಮಾ. ಹಾಲಿವುಡ್ ಸಿನಿಮಾದಲ್ಲಿ ನಟಿಸುತ್ತಿರುವ ಆ ಬಾಲಿವುಡ್ ನಿರ್ದೇಶಕ ಯಾರು ಇಲ್ಲಿದೆ ಪೂರ್ಣ ಮಾಹಿತಿ.



ಬಾಲಿವುಡ್‌ನಲ್ಲಿ ನಟಿಸುವ ಕೆಲವು ಸ್ಟಾರ್ ನಟ, ನಟಿಯರಿಗೆ ಹಾಲಿವುಡ್ ಸಿನಿಮಾಗಳಲ್ಲಿ ನಟಿಸಲು ಅವಕಾಶ ಸಿಗುವುದು ಇತ್ತೀಚೆಗೆ ಮಾಮೂಲು. ಆಯಾ ನಟ-ನಟಿಯರ ಪಿಆರ್ ತಂಡ ಇದಕ್ಕೆ ಪ್ರಮುಖ ಕಾರಣ. ಅಲ್ಲದೆ ಸಿನಿಮಾ ಮಾರುಕಟ್ಟೆಯ ಬದಲಾದ ಪರಿಸ್ಥಿತಿಗಳು ಸಹ ಹಾಲಿವುಡ್ ನಿರ್ಮಾಪಕರು, ಬಾಲಿವುಡ್‌ನ ಸ್ಟಾರ್ ನಟ-ನಟಿಯರನ್ನು ಸಿನಿಮಾನಲ್ಲಿ ಹಾಕಿಕೊಳ್ಳಲು ಕಾರಣವಾಗಿದೆ. ಆದರೆ ಇದೀಗ ಬಾಲಿವುಡ್‌ನ ಅಂಡರ್‌ರೇಟೆಡ್ ನಿರ್ದೇಶಕರೊಬ್ಬರಿಗೆ ಇದೀಗ ಆಸ್ಕರ್ ವಿಜೇತ ಹಾಲಿವುಡ್ ನಿರ್ದೇಶಕನಿಂದ ಆಫರ್ ದೊರೆತಿದೆ. ಅದಕ್ಕೆ ಕಾರಣವಾಗಿರುವುದು ದಕ್ಷಿಣ ಭಾರತದ ಸಿನಿಮಾ. ಕಳೆದ ಕೆಲ ತಿಂಗಳಿನಿಂದ ತಮಿಳಿನ 'ಮಹಾರಾಜ' ಸಿನಿಮಾದ ಬಗ್ಗೆ ಚರ್ಚೆಗಳು ಜೋರಾಗಿ ನಡೆಯುತ್ತಿದೆ. ವಿಜಯ್ ಸೇತುಪತಿ ಮುಖ್ಯ ಪಾತ್ರದಲ್ಲಿ ನಟಿಸಿರುವ ಈ ಸಿನಿಮಾಕ್ಕೆ ವಿಶ್ವಮಟ್ಟದಲ್ಲಿ ಪ್ರಶಂಸೆಗಳು ಕೇಳಿ ಬಂದಿವೆ. ಈ ಸಿನಿಮಾದ ವಿಲನ್ ಪಾತ್ರದಲ್ಲಿ ಬಾಲಿವುಡ್‌ನ ಹೆಸರಾಂತ ನಿರ್ದೇಶಕ ಅನುರಾಗ್ ಕಶ್ಯಪ್ ನಟಿಸಿದ್ದಾರೆ. ವಿಜಯ್ ಸೇತುಪತಿಗೆ ಠಕ್ಕರ್ ಕೊಡುವಂತೆ ಅವರ ನಟನೆ ಇದೆ. 'ಮಹಾರಾಜ' ಸಿನಿಮಾ ನೋಡಿದ ಹಾಲಿವುಡ್‌ನ ಆಸ್ಕರ್ ವಿಜೇತ ನಿರ್ದೇಶಕರೊಬ್ಬರು, ಅನುರಾಗ್ ಕಶ್ಯಪ್‌ಗೆ ತಮ್ಮ ಮುಂದಿನ ಸಿನಿಮಾದಲ್ಲಿ ಅವಕಾಶ ನೀಡಿದ್ದಾರೆ.

## ಮೂರೇ ದಿನಕ್ಕೆ ಸೂಪರ್ ಹಿಟ್ ಎನಿಸಿಕೊಂಡ
# ಢಾಕೂ ಮಹಾರಾಜ್

ಈ ಸಂಕ್ರಾಂತಿಗೆ ತೆಲುಗಿನ ಮೂರು ಸ್ಟಾರ್ ನಟರ ಸಿನಿಮಾಗಳು ಬಿಡುಗಡೆ ಆಗಿವೆ. ಮೊದಲಿಗೆ ರಾಮ್ ಚರಣ್ ನಟನೆಯ 'ಗೇಮ್ ಚೇಂಜರ್' ಸಿನಿಮಾ ಬಿಡುಗಡೆ ಆಯ್ತು. ಆ ಸಿನಿಮಾ ಮೊದಲೆರಡು ದಿನ ಒಳ್ಳೆಯ ಕಲೆಕ್ಷನ್ ಮಾಡಿತು. ಬಳಿಕ ಎರಡನೇ ದಿನದ ಅಂತರದಲ್ಲಿ ನಂದಮೂರಿ ಬಾಲಕೃಷ್ಣ ನಟನೆಯ 'ಢಾಕೂ ಮಹಾರಾಜ್' ಸಿನಿಮಾ ತೆರೆಗೆ ಬಂತು. ಅದಾದ ಎರಡು ದಿನಕ್ಕೆ ವಿಕ್ಟರಿ ವೆಂಕಟೇಶ್ ನಟನೆಯ 'ಸಂಕ್ರಾಂತಿಕಿ ವಸ್ತುನ್ನಾಮ್' ಸಿನಿಮಾ ಬಿಡುಗಡೆ ಆಯ್ತು. ಈ ಮೂರರಲ್ಲಿ ಬಾಕ್ಸ್ ಆಫೀಸ್‌ನಲ್ಲಿ ಗೆಲುವು ಸಾಧಿಸಿರುವುದು ನಂದಮೂರಿ ಬಾಲಕೃಷ್ಣ ನಟನೆಯ 'ಢಾಕೂ ಮಹಾರಾಜ್' ಸಿನಿಮಾ.



'ಢಾಕೂ ಮಹಾರಾಜ್' ಸಿನಿಮಾ ಜನವರಿ 12 ರಂದು ಕೇವಲ ತೆಲುಗು ಭಾಷೆಯಲ್ಲಿ ಬಿಡುಗಡೆ ಆಯ್ತು. ಸಿನಿಮಾದ ಮೊದಲ ದಿನವೇ 25 ಕೋಟಿಗೂ ಹೆಚ್ಚು ಹಣ ಗಳಿಸಿತು. ಈ ಸಿನಿಮಾದ ಬಿಡುಗಡೆ ಇಂದಾಗಿ ಪ್ಯಾನ್ ಇಂಡಿಯಾ ಸಿನಿಮಾ ಆಗಿರುವ ರಾಮ್ ಚರಣ್‌ರ 'ಗೇಮ್ ಚೇಂಜರ್' ಕಲೆಕ್ಷನ್ ಧಾರುಣವಾಗಿ ಕುಸಿದು ಬಿತ್ತು. ಮೊದಲ ದಿನದ ಬಳಿಕವೂ ತನ್ನ ಅದ್ಭುತ ಬಾಕ್ಸ್ ಆಫೀಸ್ ರನ್ ಮುಂದುವರೆಸಿದ 'ಢಾಕೂ ಮಹಾರಾಜ್' ಸಿನಿಮಾ ಕೇವಲ ಮೂರು ದಿನಗಳಲ್ಲಿ ಸೂಪರ್ ಹಿಟ್ ಎನಿಸಿಕೊಂಡಿದೆ. 'ಢಾಕೂ ಮಹಾರಾಜ್' ಸಿನಿಮಾ ಮೊದಲ ಮೂರು ದಿನಗಳಲ್ಲಿ 50 ಕೋಟಿಗೂ ಹೆಚ್ಚು ಮೊತ್ತ ಗಳಿಕೆ ಮಾಡಿದೆ. ಮೊದಲ ದಿನ 25 ಕೋಟಿ ಗಳಿಸಿದ್ದ ಸಿನಿಮಾ ಆ ನಂತರದ ಎರಡು ದಿನಗಳಲ್ಲಿ ಕ್ರಮವಾಗಿ 12 ಕೋಟಿಗೂ ಹೆಚ್ಚು ಮೊತ್ತ ಗಳಿಸುವ ಮೂಲಕ 50 ಕೋಟಿ ಮಾರ್ಕ್ ದಾಟಿದೆ. ಪ್ಯಾನ್ ಇಂಡಿಯಾ ಸಿನಿಮಾ ಅಲ್ಲದೇ ಇದ್ದರೂ ಕೇವಲ 3 ದಿನಗಳಲ್ಲಿ 50 ಕೋಟಿ ಕಲೆಕ್ಷನ್ ದಾಟಿರುವುದು ಸಾಮಾನ್ಯ ಸಾಧನೆಯಲ್ಲ. ಈಗ ಬಿಡುಗಡೆ ಆಗಿರುವ ಮೂರು ಸಿನಿಮಾಗಳಲ್ಲಿ 'ಢಾಕೂ ಮಹಾರಾಜ್' ಸಿನಿಮಾ ಬಗ್ಗೆ ಪ್ರೇಕ್ಷಕರಿಂದ ಹೆಚ್ಚಿನ ಧನಾತ್ಮಕ ಕಮೆಂಟ್ ವ್ಯಕ್ತವಾಗಿದೆ.

# ಹ್ಯಾಪಿ ಫ್ಯಾಮಿಲಿ

ದರ್ಶನ್, ವಿಜಯಲಕ್ಷ್ಮೀ, ವಿನೀಶ್; ಹ್ಯಾಪಿ ಫ್ಯಾಮಿಲಿಯ ಫೋಟೋ ನೋಡಿ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಅವರ ಪತ್ನಿ ವಿಜಯಲಕ್ಷ್ಮೀ ಮತ್ತು ಮಗ ವಿನೀಶ್ ಜೊತೆಗಿನ ಚಿತ್ರಗಳು ಅಭಿಮಾನಿಗಳಿಗೆ ಸಂತಸ ತಂದಿವೆ. ನಟ ದರ್ಶನ್ ಅವರು ಕಳೆದ ಆರು ತಿಂಗಳಲ್ಲಿ ಸಾಕಷ್ಟು ಬೀಳುಗಳನ್ನು ಕಂಡರು. ಅವರು ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ಬಂಧನಕ್ಕೆ ಒಳಗಾಗಿ ಸಾಕಷ್ಟು ತೊಂದರೆ ಅನುಭವಿಸಿದರು. ಈಗ ದರ್ಶನ್ ಅವರು ಈ ಪ್ರಕರಣದಲ್ಲಿ ಜಾಮೀನು ಪಡೆದು ಹೊರ ಬಂದಿದ್ದಾರೆ. ದರ್ಶನ್ ಅವರು ಮೈಸೂರಿನ ತಮ್ಮ ಫಾರ್ಮ್‌ಹೌಸ್‌ನಲ್ಲಿ ಸಂಕ್ರಾಂತಿ ಹಬ್ಬ ಆಚರಿಸಿದ್ದಾರೆ. ಈ ಸಂದರ್ಭದಲ್ಲಿ ಅವರ ಕುಟುಂಬವೂ ಇದರಲ್ಲಿ ಭಾಗಿ ಆಗಿದೆ. ಈ ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ದರ್ಶನ್ ಅವರು ಪತ್ನಿ ವಿಜಯಲಕ್ಷ್ಮೀ, ಮಗ ವಿನೀಶ್ ಜೊತೆ ಕಾಣಿಸಿಕೊಂಡಿದ್ದಾರೆ. ಈ ಫೋಟೋಗಳು ಗಮನ ಸೆಳೆದಿವೆ. ಈ ಫೋಟೋ ನೋಡಿದ ಅನೇಕರು ಎಂದು ಕಮೆಂಟ್ ಮಾಡುತ್ತಾ ಇದ್ದಾರೆ. ದರ್ಶನ್ ಅವರು ಮಗ ವಿನೀಶ್ ಹಾಗೂ ಸಹೋದರ ದಿನಕರ್ ಜೊತೆ ಪೋಸ್ ಕೊಟ್ಟಿದ್ದಾರೆ. ಅಣ್ಣ-ತಮ್ಮನ ಒಂದೇ ಫ್ರೇಮ್‌ನಲ್ಲಿ ನೋಡಿ ಫ್ಯಾನ್ಸ್ ಖುಷಿಪಟ್ಟಿದ್ದಾರೆ.



# ಹಿರಿಯ ಆಟಗಾರರ ವಿರುದ್ಧ ಗಂಭೀರ್ ಅಸಮಾಧಾನ

ನ್ಯೂಝಿಲೆಂಡ್ ವಿರುದ್ಧದ ಸರಣಿಯಲ್ಲಿ 3-0 ಅಂತರದಿಂದ ಸೋತಿದ್ದ ಟೀಮ್ ಇಂಡಿಯಾ, ಆ ಬಳಿಕ ಆಸ್ಟ್ರೇಲಿಯಾ ವಿರುದ್ಧ ಬಾರ್ಡರ್-ಗವಾಸ್ಕರ್ ಸರಣಿಯಲ್ಲಿ 3-1 ಅಂತರದಿಂದ ಸೋಲನುಭವಿಸಿದೆ. ಈ ಸೋಲುಗಳಿಂದಾಗಿ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಸರಣಿಯಲ್ಲಿ ಮೂರನೇ ಬಾರಿ ಫೈನಲ್‌ಗೇರುವ ಅವಕಾಶವನ್ನು ಟೀಮ್ ಇಂಡಿಯಾ ಕೈಚೆಲ್ಲಿಕೊಂಡಿತು. ಈ ಸೋಲುಗಳನ್ನು ಇದೀಗ ಬಿಸಿಸಿಐ ಗಂಭೀರವಾಗಿ ಪರಿಗಣಿಸಿದೆ. ಭಾರತ ತಂಡದಲ್ಲಿ ಎಲ್ಲವೂ ಸರಿಯಿಲ್ಲವೇ ಈ ಪ್ರಶ್ನೆ ಮತ್ತೆ ಮುನ್ನಲೆಗೆ ಬಂದಿದೆ. ಅದು ಕೂಡ ಬಿಸಿಸಿಐ ಪರಿಶೀಲನಾ ಸಭೆಯ ಬಳಿಕ. ಬಾರ್ಡರ್ ಗವಾಸ್ಕರ್ ಸರಣಿಯಲ್ಲಿನ ಕಳಪೆ ಪ್ರದರ್ಶನದ ಬಗ್ಗೆ ಚರ್ಚಿಸಲು ಜನವರಿ 11 ರಂದು ಬಿಸಿಸಿಐ ಪರಿಶೀಲನಾ ಸಭೆ ನಡೆಸಿತ್ತು. ಈ ಸಭೆಯಲ್ಲಿ ಟೀಮ್ ಇಂಡಿಯಾದ ಮುಖ್ಯ ಆಯ್ಕೆಗಾರ ಅಜಿತ್ ಅಗರ್ಕರ್, ಭಾರತ ತಂಡದ ಕೋಚ್ ಗೌತಮ್ ಗಂಭೀರ್ ಮತ್ತು ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ಕೂಡ ಭಾಗವಹಿಸಿದ್ದರು.



ಈ ಸಭೆಯಲ್ಲಿ ಹಲವು ವಿಷಯಗಳ ಕುರಿತು ಚರ್ಚೆ ನಡೆಸಲಾಗಿದೆ. ಇದೇ ವೇಳೆ ಟೀಮ್ ಇಂಡಿಯಾ ಕೋಚ್ ಗೌತಮ್ ಗಂಭೀರ್ ಹಿರಿಯ ಆಟಗಾರರ ನಡೆಯ ಬಗ್ಗೆ ಅಸಮಾಧಾನ ಹೊರಹಾಕಿದ್ದಾರೆ ಎಂದು ವರದಿಯಾಗಿದೆ.

## ಟೀಮ್ ಇಂಡಿಯಾದಲ್ಲಿ ಬಿರುಕು

ಟೀಮ್ ಇಂಡಿಯಾದಲ್ಲಿ ಎಲ್ಲವೂ ಸರಿಯಿಲ್ಲ: ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ವೇಳೆಯೇ ಟೀಮ್ ಇಂಡಿಯಾದಲ್ಲಿ ಎಲ್ಲವೂ ಸರಿಯಿಲ್ಲ ಎಂಬ ಸುದ್ದಿಯಾಗಿತ್ತು. ಅದರಲ್ಲೂ ಡ್ರೆಸ್ಸಿಂಗ್ ರೂಮ್ ವಿಚಾರಗಳು ಹೊರಬರುತ್ತಿದ್ದಂತೆ, ಭಾರತ ತಂಡದಲ್ಲಿ ಭಿನ್ನಾಭಿಪ್ರಾಯಗಳು ಇರುವುದು ಬಹಿರಂಗವಾಗಿತ್ತು. ಇದೀಗ ಆಸ್ಟ್ರೇಲಿಯಾದಲ್ಲಿ ಟೀಮ್ ಇಂಡಿಯಾದ ಹಿರಿಯ ಆಟಗಾರರು ಅಭ್ಯಾಸ ವಿಷಯದಲ್ಲಿ ಮತ್ತು ಹೋಟೆಲ್‌ಗೆ ಸಂಬಂಧಿಸಿದಂತೆ ಕೆಲವು ವಿಶೇಷ ಬೇಡಿಕೆಗಳನ್ನು ಮುಂದಿಟ್ಟಿದ್ದರು ಎಂಬ ವಿಚಾರ ಬಹಿರಂಗವಾಗಿದೆ. ಹೀಗಾಗಿ ಟೀಮ್ ಇಂಡಿಯಾದಲ್ಲಿನ ಸೂಪರ್‌ಸ್ಟಾರ್ ಸಂಸ್ಕೃತಿಯನ್ನು ಕೊನೆಗೊಳಿಸಬೇಕೆಂದು ಗೌತಮ್ ಗಂಭೀರ್ ಆಗ್ರಹಿಸಿದ್ದಾರೆ.



# ಭಾರತಕ್ಕೆ 304 ರನ್‌ಗಳ ದಾಖಲೆಯ ಜಯ



ಐರ್ಲೆಂಡ್ ವಿರುದ್ಧದ 3 ಪಂದ್ಯಗಳ ಏಕದಿನ ಸರಣಿಯ ಕೊನೆಯ ಪಂದ್ಯದಲ್ಲಿ ಭಾರತ ಮಹಿಳಾ ತಂಡ 304 ರನ್‌ಗಳ ಗೆಲುವು ದಾಖಲಿಸಿದೆ. ಇದು ಏಕದಿನ ಕ್ರಿಕೆಟ್ ಇತಿಹಾಸದಲ್ಲಿ ಭಾರತದ ಅತಿ ದೊಡ್ಡ ಗೆಲುವಾಗಿದೆ. ಅದೇ ಸಮಯದಲ್ಲಿ ಭಾರತ ತಂಡವು ಈ ಸರಣಿಯನ್ನು 3-0 ಅಂತರದಲ್ಲಿ ಗೆದ್ದುಕೊಂಡಿದೆ. ರಾಜ್‌ಕೋಟ್‌ನಲ್ಲಿ ನಡೆದ ಭಾರತ ಹಾಗೂ ಐರ್ಲೆಂಡ್ ಮಹಿಳಾ ತಂಡಗಳ ಮೂರು ಪಂದ್ಯಗಳ ಏಕದಿನ ಸರಣಿಯನ್ನು ಕ್ಲೀನ್ ಸ್ವೀಪ್ ಮಾಡುವಲ್ಲಿ ಆತಿಥೇಯ ಟೀಂ ಇಂಡಿಯಾ ಯಶಸ್ವಿಯಾಗಿದೆ. ಇಂದು ನಡೆದ ಮೂರನೇ ಏಕದಿನ ಪಂದ್ಯದಲ್ಲಿ ಐರ್ಲೆಂಡ್ ತಂಡವನ್ನು ಕೇವಲ 131 ರನ್‌ಗಳಿಗೆ ಆಲೌಟ್ ಮಾಡಿದ ಸ್ಮೃತಿ ಮಂಧಾನ ಪಡೆ ಬರೋಬ್ಬರಿ 304 ರನ್‌ಗಳ ದಾಖಲೆಯ ಜಯ ದಾಖಲಿಸಿದೆ. ಈ ಪಂದ್ಯದ ಗೆಲುವಿನೊಂದಿಗೆ ಐರ್ಲೆಂಡ್ ವಿರುದ್ಧದ ತನ್ನ ಪಾರುಪತ್ಯವನ್ನು ಟೀಂ ಇಂಡಿಯಾ ಮುಂದುವರೆಸಿದಂತ್ತಾಗಿದೆ. ಈ ಮೊದಲು ನಡೆದಿದ್ದ ಎರಡು ಪಂದ್ಯಗಳನ್ನು ಏಕಪಕ್ಷೀಯವಾಗಿ ಗೆದ್ದುಕೊಂಡಿದ್ದ ಭಾರತ ಮಹಿಳಾ ತಂಡ ಇನ್ನೊಂದು ಪಂದ್ಯ ಬಾಕಿ ಇರುವಂತೆಯೇ ಸರಣಿಯನ್ನು ಕೈವಶ ಮಾಡಿಕೊಂಡಿತ್ತು. ಇದೀಗ ಮೂರನೇ ಏಕದಿನ ಪಂದ್ಯದಲ್ಲಿ ಭಾರಿ ಜಯ ದಾಖಲಿಸುವುದರೊಂದಿಗೆ ಸರಣಿಯನ್ನು 3-0 ಅಂತರದಲ್ಲಿ ಗೆದ್ದುಬೀಗಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಟೀಂ ಇಂಡಿಯಾ ಮೊದಲು ಬ್ಯಾಟಿಂಗ್ ಮಾಡಿ 50 ಓವರ್‌ಗಳಲ್ಲಿ 5 ವಿಕೆಟ್‌ಗಳ ನಷ್ಟಕ್ಕೆ ದಾಖಲೆಯ 435 ರನ್ ಕಲೆಹಾಕಿತು. ತಂಡದ ಪರ ಆರಂಭಿಕರಾದ ಪ್ರತೀಕಾ ರಾವಲ್ ಮತ್ತು ಸ್ಮೃತಿ ಮಂಧಾನ ಶತಕ ಸಿಡಿಸಿದರೆ, ವಿಕೆಟ್ ಕೀಪರ್ ರಿಚಾ ಘೋಷ್ ಕೂಡ ಅರ್ಧಶತಕ ದಾಖಲಿಸಿದರು. ಈ ಮೂಲಕ ಭಾರತ ಮಹಿಳಾ ಏಕದಿನದಲ್ಲಿ 400 ಸ್ಕೋರ್ ದಾಟಿದ ಏಷ್ಯಾದ ಮೊದಲ ತಂಡ ಎಂಬ ಇತಿಹಾಸವನ್ನು ಸೃಷ್ಟಿಸಿತು. ಇದಲ್ಲದೆ ಕಳೆದ ಪಂದ್ಯದಲ್ಲೂ ಟೀಂ ಇಂಡಿಯಾ 350ಕ್ಕೂ ಹೆಚ್ಚು ರನ್ ಗಳಿಸಿತ್ತು.

**131 ರನ್‌ಗಳಿಗೆ ಆಲೌಟ್**

ಈ ದೊಡ್ಡ ಗುರಿಯನ್ನು ಬೆನ್ನಟ್ಟಿದ ಐರ್ಲೆಂಡ್ ತಂಡದ ಬ್ಯಾಟಿಂಗ್ ತೀರಾ ಕಳಪೆಯಾಗಿತ್ತು. ಇಡೀ ತಂಡ ಕೇವಲ 31.4 ಓವರ್‌ಗಳನ್ನು ಮಾತ್ರ ಆಡಲಷ್ಟೇ ಶಕ್ತವಾಗಿ 131 ರನ್‌ಗಳಿಗೆ ಆಲೌಟ್ ಆಯಿತು. ಭಾರತದ ಬಿಗಿ ಬೌಲಿಂಗ್‌ಗೆ ನಲುಗಿದ ಐರೀಶ್ ತಂಡದ ಪರ ಯಾವುದೇ ಬ್ಯಾಟರ್‌ಗೆ 50 ರನ್ ಗಡಿ ಮುಟ್ಟಲು ಸಾಧ್ಯವಾಗಲಿಲ್ಲ.



# ಅಂಪೈರ್ ಮಗಳದ್ದೇ ಕಾರುಬಾರು

ಭಾರತ ಮಹಿಳಾ ಕ್ರಿಕೆಟ್ ತಂಡದ ಯುವ ಆರಂಭಿಕ ಆಟಗಾರ್ತಿ ಪ್ರತೀಕಾ ರಾವಲ್ ಅವರು ಐರ್ಲೆಂಡ್ ವಿರುದ್ಧದ ಏಕದಿನ ಪಂದ್ಯದಲ್ಲಿ 154 ರನ್‌ಗಳ ಚೊಚ್ಚಲ ಶತಕ ಸಿಡಿಸಿ ಅಬ್ಬರಿಸಿದ್ದಾರೆ. ಇದಲ್ಲದೆ ಅವರು ಸ್ಮೃತಿ ಮಂಧಾನರೊಂದಿಗೆ 233 ರನ್‌ಗಳ ದಾಖಲೆಯ ಜೊತೆಯಾಟವನ್ನು ಮಾಡಿದರು. ವೆಸ್ಟ್ ಇಂಡೀಸ್ ವಿರುದ್ಧದ ಸರಣಿಯಿಂದಲೂ ಅವರ ಪ್ರದರ್ಶನ ಗಮನ ಸೆಳೆದಿದ್ದು ತಮ್ಮ ಆರಂಭಿಕ ಕೆರಿಯರ್‌ನಲ್ಲೇ ಪ್ರತೀಕಾ ಅವರ ಪ್ರತಿಭೆ ಅದ್ಭುತವಾಗಿದೆ. ಪ್ರತೀಕಾ ರಾವಲ್.. ಪ್ರಸ್ತುತ ಭಾರತ ಮಹಿಳಾ ಏಕದಿನ ತಂಡದಲ್ಲಿ ತನ್ನ ಆಟದ ಮೂಲಕವೇ ವಿಶ್ವಕ್ರಿಕೆಟ್‌ನ ತನ್ನತ್ತ ಸೆಳೆಯುತ್ತಿರುವ ಹೆಸರು. ತಿಂಗಳ ಹಿಂದೆ ಭಾರತದ ಪರ ಏಕದಿನ ಕ್ರಿಕೆಟ್‌ಗೆ ಕಾಲಿಟ್ಟಿದ್ದ ಈ ಯುವ ಬ್ಯಾಟರ್ ತಂಡದಲ್ಲಿ ಖಾಯಂ ಸ್ಥಾನ ಪಡೆದುಕೊಳ್ಳುವತ್ತ ದಿಟ್ಟ ಹೆಜ್ಜೆ ಇಟ್ಟಿದ್ದಾರೆ. ಶೆಫಾಲಿ ವರ್ಮಾ ಅವರ ಅನುಪಸ್ಥಿತಿಯಲ್ಲಿ ಸ್ಮೃತಿ ಮಂಧಾನ ಜೊತೆ ಇನ್ನಿಂಗ್ಸ್ ಆರಂಭಿಸುವ ಜವಾಬ್ದಾರಿ ಹೊತ್ತಿರುವ ಪ್ರತೀಕಾ, ತಮ್ಮ ಭರವಸೆಯ ಆಟದ ಮೂಲಕ ಶೆಫಾಲಿ ವರ್ಮಾರ ಸ್ಥಾನವನ್ನು ಅಲುಗಾಡಿಸಿದ್ದಾರೆ. ವೆಸ್ಟ್ ಇಂಡೀಸ್ ವಿರುದ್ಧದ ಏಕದಿನ ಸರಣಿಯಲ್ಲಿ ಗಮನಾರ್ಹ ಪ್ರದರ್ಶನ ನೀಡಿದ್ದ ಪ್ರತೀಕಾ, ಇದೀಗ ನಡೆಯುತ್ತಿರುವ ಐರ್ಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲಿ ರನ್‌ಗಳ ಶಿಖರ ಕಟ್ಟಿದ್ದಾರೆ. ಪ್ರಸ್ತುತ ನಡೆಯುತ್ತಿರುವ ಮೂರನೇ ಏಕದಿನ ಪಂದ್ಯದಲ್ಲಿ ಚೊಚ್ಚಲ ಶತಕ ಸಿಡಿಸಿದಲ್ಲದೆ ಅದನ್ನು 154 ರನ್‌ಗಳ ಬೃಹತ್ ಮೊತ್ತವಾಗಿ ಪರಿವರ್ತಿಸಿದ್ದಾರೆ.

**233 ರನ್‌ಗಳ ಜೊತೆಯಾಟ**

ಈ ಪಂದ್ಯದಲ್ಲಿ ಪ್ರತೀಕಾ ಹೊರತಾಗಿ ಸ್ಮೃತಿ ಮಂಧಾನ ಕೂಡ ಶತಕ ಬಾರಿಸಿದರು.

# ಸ್ಮೃತಿ ಸ್ಫೋಟಕ್ಕೆ ದಾಖಲೆಗಳೆಲ್ಲ ಧ್ವಂಸ

ಹರ್ಮನ್‌ಪ್ರೀತ್ ಕೌರ್ ಅನುಪಸ್ಥಿತಿಯಲ್ಲಿ ಟೀಂ ಇಂಡಿಯಾದ ನಾಯಕತ್ವ ವಹಿಸಿಕೊಂಡಿರುವ ಸ್ಮೃತಿ ಮಂಧಾನ ನಾಯಕಿಯಾಗಿಯೂ ಹಾಗೂ ಆರಂಭಿಕ ಆಟಗಾರ್ತಿಯಾಗಿಯೂ ಅದ್ಭುತ ಪ್ರದರ್ಶನ ನೀಡುತ್ತಿದ್ದಾರೆ. ಈ ಮೊದಲು ನಾಯಕಿಯ ವಿಂಡೀಸ್ ವಿರುದ್ಧ ಟಿ20 ಸರಣಿ ಗೆಲ್ಲಿಸಿಕೊಟ್ಟಿದ್ದ ಸ್ಮೃತಿ, ಇದೀಗ ಐರ್ಲೆಂಡ್ ವಿರುದ್ಧ ಏಕದಿನ ಸರಣಿಯನ್ನು ಭಾರತದ ಖಾತೆಗೆ ಹಾಕಿದ್ದಾರೆ.

ಇನ್ನು ಆಟಗಾರ್ತಿಯಾಗಿಯೂ ಅತ್ಯದ್ಭುತ ಫಾರ್ಮ್‌ನಲ್ಲಿರುವ ಮಂಧಾನ ಕಳೆದ 10 ಇನ್ನಿಂಗ್ಸ್‌ಗಳಲ್ಲಿ ಕೇವಲ 2 ಬಾರಿ ಮಾತ್ರ ಅರ್ಧಶತಕ ವಂಚಿತರಾಗಿದ್ದಾರೆ. ಉಳಿದಂತೆ 8 ಇನ್ನಿಂಗ್ಸ್‌ಗಳಲ್ಲಿ 50 ಕ್ಕೂ ಅಧಿಕ ರನ್ ಬಾರಿಸುವುದರೊಂದಿಗೆ ತಂಡಕ್ಕೆ ಉತ್ತಮ ಆರಂಭ ಒದಗಿಸಿಕೊಡುವುದರೊಂದಿಗೆ ತಂಡದ ಗೆಲುವಿಗೆ ಪ್ರಮುಖ ಕಾಣಿಕೆ ನೀಡುತ್ತಿದ್ದಾರೆ.

ಪ್ರಸ್ತುತ ಐರ್ಲೆಂಡ್ ವಿರುದ್ಧ ನಡೆಯುತ್ತಿರುವ ಏಕದಿನ ಸರಣಿಯಲ್ಲೂ ಅಬ್ಬರಿಸಿರುವ ಸ್ಮೃತಿ, ಮೂರನೇ ಏಕದಿನ ಪಂದ್ಯದಲ್ಲಿ 135 ರನ್‌ಗಳ ಸ್ಫೋಟಕ ಇನ್ನಿಂಗ್ಸ್ ಕಟ್ಟಿದ್ದಾರೆ. ಅದರಲ್ಲೂ ಕೇವಲ 70 ಎಸೆತಗಳಲ್ಲಿ ಶತಕ ಪೂರೈಸಿದ ಮಂಧಾನ ಏಕದಿನ ಕ್ರಿಕೆಟ್?ನಲ್ಲಿ ಅತಿ ಕಡಿಮೆ ಎಸೆತಗಳಲ್ಲಿ ಶತಕ ಪೂರೈಸಿದ ದಾಖಲೆ ನಿರ್ಮಿಸಿದ್ದು, ಈ ವಿಚಾರದಲ್ಲಿ ಹರ್ಮನ್‌ಪ್ರೀತ್ ಕೌರ್ ಅವರ ದಾಖಲೆಯನ್ನು ಮುರಿಯುವಲ್ಲಿ ಯಶಸ್ವಿಯಾಗಿದ್ದಾರೆ.

ಐರ್ಲೆಂಡ್ ವಿರುದ್ಧ ಕೇವಲ 70 ಎಸೆತಗಳಲ್ಲಿ ಈ ಸಾಧನೆ ಮಾಡಿದ ಮಂಧಾನ, ಕಳೆದ ವರ್ಷ ದಕ್ಷಿಣ ಆಫ್ರಿಕಾ ವಿರುದ್ಧ ನಡೆದಿದ್ದ ಏಕದಿನ ಪಂದ್ಯದಲ್ಲಿ ಕೇವಲ 87 ಎಸೆತಗಳಲ್ಲಿ ಈ ಸಾಧನೆ ಮಾಡಿದ್ದ ನಿಯಮಿತ ನಾಯಕಿ ಹರ್ಮನ್‌ಪ್ರೀತ್ ಕೌರ್ ಅವರ ದಾಖಲೆಯನ್ನು ಮುರಿದಿದ್ದಾರೆ. ಹರ್ಮನ್‌ಪ್ರೀತ್ ಮತ್ತು ಜೆಮಿಮಾ ರಾಡ್ರಿಗಸ್ ಕೂಡ 90 ಎಸೆತಗಳಲ್ಲಿ ಶತಕ ಸಿಡಿಸಿದ್ದಾರೆ.

ಇದು ಏಕದಿನ ಕ್ರಿಕೆಟ್‌ನಲ್ಲಿ ಮಂಧಾನ ಸಿಡಿಸಿದ 10ನೇ ಶತಕವಾಗಿದ್ದು, ಈ ಮಾದರಿಯಲ್ಲಿ ಈ ಸಾಧನೆ ಮಾಡಿದ ಮೊದಲ ಭಾರತೀಯ ಮತ್ತು ಮೊದಲ ಏಷ್ಯನ್ ಆಟಗಾರ್ತಿಯೆಂಬ ಇತಿಹಾಸ ಸೃಷ್ಟಿಸಿದ್ದಾರೆ. ಹಾಗೆಯೇ ಮಹಿಳಾ ಏಕದಿನ ಕ್ರಿಕೆಟ್‌ನಲ್ಲಿ ಈ ಸಾಧನೆ ಮಾಡಿದ ಮೂರನೇ ಆರಂಭಿಕ ಆಟಗಾರ್ತಿಯಾಗಿದ್ದಾರೆ.

## ಅಧಿಕ ಶತಕ, ಸಿಕ್ಸರ್ ಮೊದಲ ಏಷ್ಯನ್

ಸ್ಮೃತಿ ಹೊರತುಪಡಿಸಿ ಮೆಗ್ ಲ್ಯಾನಿಂಗ್ (15) ಮತ್ತು ಸುಜಿ ಬೇಟ್ಸ್ (13) ಮಾತ್ರ ಅವರಿಗಿಂತ ಮುಂದಿದ್ದಾರೆ.

ಇದಲ್ಲದೆ ಮಹಿಳಾ ಏಕದಿನ ಕ್ರಿಕೆಟ್‌ನ ಇತಿಹಾಸದಲ್ಲಿ ಜಂಟಿಯಾಗಿ ಅತಿ ಹೆಚ್ಚು ಸಿಕ್ಸರ್‌ಗಳನ್ನು ಬಾರಿಸಿದ ಭಾರತೀಯ ಆಟಗಾರ್ತಿ ಎಂಬ ಹೆಗ್ಗಳಿಕೆಗೆ ಸ್ಮೃತಿ ಮಂಧಾನ ಪಾತ್ರರಾಗಿದ್ದಾರೆ. ಹರ್ಮನ್‌ಪ್ರೀತ್ ಕೌರ್ ಮತ್ತು ಸ್ಮೃತಿ ಪ್ರಸ್ತುತ ಮಹಿಳಾ ಏಕದಿನ ಕ್ರಿಕೆಟ್‌ನಲ್ಲಿ ತಲಾ 52 ಸಿಕ್ಸರ್‌ಗಳನ್ನು ಬಾರಿಸಿದ್ದಾರೆ.

ಇಂದಿನ ಪಂದ್ಯದ ತಮ್ಮ ಇನ್ನಿಂಗ್ಸ್‌ನಲ್ಲಿ 7 ಸಿಕ್ಸರ್?ಗಳನ್ನು ಸಿಡಿಸುವ ಮೂಲಕ ಸ್ಮೃತಿ, ಮಹಿಳಾ ಏಕದಿನ ಕ್ರಿಕೆಟ್‌ನ ಪಂದ್ಯವೊಂದರಲ್ಲಿ ಜಂಟಿಯಾಗಿ ಅತಿ ಹೆಚ್ಚು ಸಿಕ್ಸರ್‌ಗಳನ್ನು ಬಾರಿಸಿದ ಭಾರತೀಯ ಆಟಗಾರ್ತಿ ಎನಿಸಿಕೊಂಡಿದ್ದಾರೆ. ಈ ಹಿಂದೆ ಹರ್ಮನ್‌ಪ್ರೀತ್ 2017 ರ ಏಕದಿನ ವಿಶ್ವಕಪ್‌ನ ಸೆಮಿಫೈನಲ್ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ 171 ರನ್ ಕಲೆಹಾಕಿದ್ದರು. ಈ ವೇಳೆ ತಮ್ಮ ಇನ್ನಿಂಗ್ಸ್‌ನಲ್ಲಿ 7 ಸಿಕ್ಸರ್‌ಗಳನ್ನು ಸಹ ಬಾರಿಸಿದ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966